ಸಂಪುಟ: 04 ಸಂಚಿಕೆ: 80 ಪುಟಗಳು: 08 ಸೋಮವಾರ 03 ಜೂನ್ 2024

www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ

RNI No. KARKAN/2021/80833

9448225696 +91 8035841833 ₹5

ಮುಂಜಾನೆ ಮಾತು

ಆತ್ಮವಿಶ್ವಾಸವೊಂದಿದ್ದರೆ ಆಯಾಸವಿಲ್ಲದೇ ಕೊನೆಯವರೆಗೂ ಪಯಣಿಸಬಹುದು. ವಿಶ್ವಾಸದ ಕೊರತೆಯಿಂದ ಪ್ರಯಾಣ ಅರ್ಧಕ್ಕೆ ನಿಲ್ಲಬಹುದು. ವಿಶ್ವಾಸವೇ ಇಂಧನವಾಗಲಿ

ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

ಸಚಿವ ಸ್ಥಾನದ ಕುರಿತು ಯಾವ ನಿರೀಕ್ಷೆಯೂ ಇಲ್ಲ: ಯದುವೀರ್

• ಉದಯವಾಹಿನಿ, ಮೈಸೂರು

ಕೇಂದ್ರದಲ್ಲಿ ಸಚಿವ ಸ್ಥಾನದ ಕುರಿತು ಯಾವುದೇ ನಿರೀಕ್ಷೆಯಿಲ್ಲ. ಫಲಿತಾಂಶ ಅಷ್ಟೇ ನಮ್ಮ ನಿರೀಕ್ಷೆ ಎಂದು ಮೈಸೂರು ಬಿಜೆಪಿ ಅಭ್ಯರ್ಥಿ ಯದುವೀರ್ ಒಡೆಯರ್ ಹೇಳಿದ್ದಾರೆ. ಲೋಕಸಭಾ ಚುನಾವಣೆ ಎಕ್ಸಿಟ್ ಪೋಲ್ ಕುರಿತು ಮೈಸೂರಿನಲ್ಲಿ ಮಾತನಾಡಿದ ಅವರು, ಸಚಿವ ಸ್ಥಾನದ ಬಗ್ಗೆ ಮುಂದೆ ನೋಡೋಣ. ದೇಶ ಹಾಗೂ ರಾಜ್ಯದಲ್ಲಿ ಬಿಜೆಪಿಗೆ ಮುನ್ನಡೆ ಸಿಕ್ಕಿರುವುದು ಖುಷಿಯ ವಿಚಾರ. ಜನ ಮತ್ತೊಮ್ಮೆ ಸಮಾಜ ಸೇವೆ ಮಾಡಲು ಆಶೀರ್ವಾದ ಮಾಡಿದ್ದಾರೆ ಎಂದು ಸಂತಸ ವ್ಯಕ್ತಪಡಿಸಿದರು. ರಾಜ್ಯದಲ್ಲಿ ಬಿಜೆಪಿ ಮುನ್ನಡೆಯನ್ನೇ ನಿರೀಕ್ಷೆ ಮಾಡಿದ್ದೆವು. ನಮ್ಮ ನಿರೀಕ್ಷೆಯಂತೆ ಫಲಿತಾಂಶ ಬಂದಿದೆ. ಮೋದಿ ಮತ್ತೊಮ್ಮೆ ದೇಶದ ಪ್ರಧಾನಿಯಾಗಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ವಿಧಾನ ಪರಿಷತ್ ಚುನಾವಣೆ ಸಿ.ಟಿ.ರವಿಗೆ ಬಂಪರ್ ಗಿಫ್ಟ್

• ಉದಯವಾಹಿನಿ, ಬೆಂಗಳೂರು

ವಿಧಾನ ಪರಿಷತ್ ಚುನಾವಣೆಗೆ ಬಿಜೆಪಿ ತನ್ನ ಅಭ್ಯರ್ಥಿಗಳ ಪಟ್ಟಿಯನ್ನು ಪ್ರಕಟಿಸಿದೆ. ಹಾಲಿ ವಿಧಾನ ಪರಿಷತ್ ಸದಸ್ಯ ಎನ್.ರವಿಕುಮಾರ್, ಮಾಜಿ ಶಾಸಕರಾದ ಸಿ.ಟಿ.ರವಿ ಹಾಗೂ ಎಂ.ಜಿ.ಮುಳೆ ಅವರಿಗೆ ಟಿಕೆಟ್ ಘೋಷಿಸಲಾಗಿದೆ. ವಿಧಾನಸಭಾ ಚುನಾವಣೆಯಲ್ಲಿ ಚಿಕ್ಕಮಗಳೂರು ಕ್ಷೇತ್ರದಿಂದ ಸ್ಪರ್ಧಿಸಿದ್ದ ಸೋಲುಕಂಡಿದ್ದ ಸಿ.ಟಿ.ರವಿ ಅವರಿಗೆ ಅದೃಷ್ಟ ಒಲಿದುಬಂದಿದೆ. ಕರ್ನಾಟಕ ಮರಾಠ ಅಭಿವೃದ್ಧಿ ನಿಗಮದ ಅಧ್ಯಕ್ಷ ಹಾಗೂ ಮಾಜಿ ಶಾಸಕ ಎಂ.ಜಿ.ಮಳೆ ಅವರಿಗೆ ಬಿಜೆಪಿ ಟಿಕೆಟ್ ನೀಡಿದೆ. ಒಟ್ಟು 11 ಕ್ಷೇತ್ರಗಳ ಪೈಕಿ ಬಿಜೆಪಿ ಮೂರು ಸ್ಥಾನಗಳಲ್ಲಿ ಮಾತ್ರ ಗೆಲ್ಲಲು ಸಾಧ್ಯವಿದೆ. ನಾಮಪತ್ರ ಸಲ್ಲಿಕೆಗೆ ನಾಳೆ ಕೊನೆ ದಿನವಾಗಿದೆ.

ವಿಶ್ರಾಂತಿಗೆ ತೆರಳಿದ್ದ ಸಿಎಂ ಸಿದ್ಧರಾಮಯ್ಯಗೆ ಪವರ್ ಕಟ್' ಬಿಸಿ

• ಉದಯವಾಹಿನಿ, ಬೆಂಗಳೂರು

ಸಿಎಂ ಸಿದ್ಧರಾಮಯ್ಯ ಅವರು ವಿಶ್ರಾಂತಿಗೆಂದು ಇಂಧನ ಸಚಿವ ಕೆಜೆ ಜಾರ್ಜ್ ಅವರ ತೋಟದ ಮನೆಗೆ ತೆರಳಿದ್ದರು. ಈ ವೇಳೆಯಲ್ಲಿ ಸಿಎಂ ಸಿದ್ಧರಾಮಯ್ಯಗೂ ಪವರ್ ಕಟ್ ಬಿಸಿ ತಟ್ಟಿದೆ. ಬೆಂಗಳೂರಿನ ಉತ್ತರ ತಾಲ್ಲೂಕಿನ ಹೆಸರುಘಟ್ಟದಲ್ಲಿ ನಿನ್ನೆ ರಾತ್ರಿ ಸಿಎಂ ಸಿದ್ಧರಾಮಯ್ಯ ಅವರಿಗೂ ವಿಶ್ರಾಂತಿಯ ವೇಳೆಯಲ್ಲಿ ಪವರ್ ಕಟ್ ಬಿಸಿ ತಟ್ಟಿದೆ. ಸಚಿವ ಕೆ.ಜೆ ಜಾರ್ಜ್ ಅವರ ತೋಟದ ಮನೆಗೆ ಸಿಎಂ ಸಿದ್ಧರಾಮಯ್ಯ ವಿಶ್ರಾಂತಿಗೆ ತೆರಳಿದ್ದರು. ಈ ವೇಳೆಯಲ್ಲಿ ವಿದ್ಯುತ್ ಕೈಕೊಟ್ಟ ಪ್ರಸಂಗ ನಡೆದಿದೆ. ನಿನ್ನೆ ರಾತ್ರಿ ಸುರಿದಂತ ಭಾರೀ ಮಳೆಯಿಂದಾಗಿ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಿತ್ತು. ನಿನ್ನೆ ರಾತ್ರಿ 10 ಗಂಟೆಯಿಂದ ಬೆಳಿಗ್ಗೆ 10 ಗಂಟೆಯವರೆಗೆ ಪವರ್ ಕಟ್ ಆಗಿದೆ. ಕೆಜೆ ಜಾರ್ಜ್ ಅವರ ತೋಟದ ಮನೆಯಲ್ಲಿ ಮಳೆಯಿಂದಾಗಿ ಪವರ್ ಕಟ್ ಆದ ಕಾರಣ, ಜನರೇಟರ್ ಬಳಸಿ ವಿದ್ಯುತ್ ಪೂರೈಕೆ ಮಾಡಲಾಗಿದೆ. ಇಂದು ಬೆಳಿಗ್ಗೆ 11 ಗಂಟೆಗೆ ಬೆಸ್ಕಾಂ ಲೈನ್ ಮ್ಯಾನ್‌ಗಳು ಬಂದು, ವಿದ್ಯುತ್ ದುರಸ್ಥಿ ಕಾರ್ಯ ನಡೆಸಿದ ನಂತ್ರ ಮರಳಿ ವಿದ್ಯುತ್ ಬಂದಿದೆ. ನಿನ್ನೆಯಿಂದ ಎಸ್ಕಾರ್ಟ್ ಇಲ್ಲದೆಯೇ ತೋಟದ ಮನೆಯಲ್ಲೇ ವಿಶ್ರಾಂತಿ ಪಡೆಯುತ್ತಿದ್ದಂತ ಸಿಎಂ ಸಿದ್ಧರಾಮಯ್ಯ, ವಿದ್ಯುತ್ ಕೈಕೊಟ್ಟ ಬಳಿಕ ಮರಳಿ ಬೆಂಗಳೂರಿಗೆ ವಾಪಾಸ್ ಆಗಿದ್ದಾರೆ.

ವಿ.ಪ. ಚುನಾವಣೆಗೆ ಕೈ ಅಭ್ಯರ್ಥಿಗಳ ಪಟ್ಟಿ ಪ್ರಕಟ: ಯತೀಂದ್ರಗೆ ಟಿಕೆಟ್

• ಉದಯವಾಹಿನಿ, ಬೆಂಗಳೂರು

ರಾಜ್ಯ ವಿಧಾನಸಭೆಯಿಂದ ವಿಧಾನ ಪರಿಷತ್‌ಗೆ ನಡೆಯುವ ಚುನಾವಣೆಗೆ ಪ್ರತಿಪಕ್ಷ ಬಿಜೆಪಿ ತನ್ನ ಅಭ್ಯರ್ಥಿಗಳನ್ನು ಘೋಷಣೆ ಮಾಡಿದ ಬೆನ್ನಲ್ಲೇ ಆಡಳಿತಾರೂಢ ಕಾಂಗ್ರೇಸ್ ಕೂಡ ಅಭ್ಯರ್ಥಿಗಳ ಪಟ್ಟಿಯನ್ನು ಘೋಷಣೆ ಮಾಡಿದೆ. ಅಚ್ಚರಿ ಎನ್ನುವಂತೆ ಸಿಎಂ ಸಿದ್ಧರಾಮಯ್ಯ ಅವರ ಪುತ್ರ ಡಾ.ಯತೀಂದ್ರ ಸಿದ್ಧರಾಮಯ್ಯಗೂ ಟಿಕೆಟ್ ನೀಡಲಾಗಿದೆ. ನಾಮಪತ್ರ ಸಲ್ಲಿಸಲು ಕೊನೆ ದಿನಕ್ಕೆ ಒಂದು ದಿನ ಬಾಕಿ ಇರುವಾಗಲೇ ಬಿಜೆಪಿ ತನ್ನ ಅಭ್ಯರ್ಥಿಗಳ ಪಟ್ಟಿಯನ್ನು ಬಿಡುಗಡೆ ಮಾಡಿದ್ದು, ಮಾಜಿ ಸಚಿವ ಸಿ.ಟಿ ರವಿ, ಎನ್. ರವಿಕುಮಾರ್, ಎಂ.ಜಿ ಮೂಳೆ ಅವರಿಗೆ ಬಿಜೆಪಿ ಹೈಕಮಾಂಡ್ ಮಣೆ ಹಾಕಿದೆ.

ಬಿಜೆಪಿ ಬೆನ್ನಲ್ಲೇ ಕಾಂಗ್ರೇಸ್ ಹೈಕಮಾಂಡ್ ಕೂಡ ಅಭ್ಯರ್ಥಿಗಳನ್ನು ಘೋಷಣೆ ಮಾಡಿದ್ದು, ಎನ್.ಎಸ್. ಬೋಸರಾಜು, ವಸಂತ್ ಕುಮಾರ್, ಜಗದೇವ ಗುತ್ತೇದಾರ, ಡಾ.ಕೆ ಗೋವಿಂದರಾಜು, ಐವಾನ್ ಡಿಸೋಜ ಹಾಗೂ ಬಸನಗೌಡ ಬಾರ್ದಲಿ ಅವರಿಗೆ ಟಿಕೆಟ್ ಘೋಷಣೆ ಮಾಡಲಾಗಿದೆ. ಗಮನಾರ್ಹ ಸಂಗತಿ ಏನೆಂದರೆ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪುತ್ರ ಯತೀಂದ್ರ ಸಿದ್ದರಾಮಯ್ಯ ಅವರಿಗೂ ಟಿಕೆಟ್ ನೀಡಲಾಗಿದೆ. 2018ರ ವಿಧಾನಸಭಾ ಚುನಾವಣೆಯಲ್ಲಿ ವರುಣಾ ಕ್ಷೇತ್ರದಿಂದ ಸ್ಪರ್ಧಿಸಿ, ಯತೀಂದ್ರ ಅವರು ಶಾಸಕರಾಗಿದ್ದರು. ಇದೀಗ ವಿಧಾನ ಪರಿಷತ್‌ಗೆ ನಡೆಯುವ ಚುನಾವಣೆಗೆ ಪುತ್ರನಿಗೆ ಟಿಕೆಟ್ ಕೊಡಿಸುವ ಮೂಲಕ ಸಿಎಂ ಸಿದ್ದರಾಮಯ್ಯ ಅವರು ಮೇಲುಗೈ ಸಾಧಿಸಿದ್ದಾರೆ.

ಅರುಣಾಚಲದಲ್ಲಿ ಅರಳಿದ ಕಮಲ

ಆಡಳಿತ ಪಕ್ಷಗಳ ವಿಜೃಂಬಣೆ; ಅರುಣಾಚಲದಲ್ಲಿ ಬಿಜೆಪಿ, ಸಿಕ್ಕಿಂನಲ್ಲಿ ಎಸ್‌ಕೆಎಂ ದಿಗ್ವಿಜಯ

• ಅರುಣಾಚಲ ವಿಧಾನಸಭಾ ಚುನಾವಣೆ • ಮೂರನೇ ಬಾರಿಗೆ ಅಧಿಕಾರಕ್ಕೇರಿದ ಬಿಜೆಪಿ • ಸಿಕ್ಕಿಂನಲ್ಲಿ ಎಸ್ ಕೆಎಂ ಪರಾಕ್ರಮ

ಅರುಣಾಚಲ ಪ್ರದೇಶ ವಿಧಾನಸಭಾ ಚುನಾವಣೆಯ ಫಲಿತಾಂಶ ಪ್ರಕಟಗೊಂಡಿದ್ದು, 46 ಸ್ಥಾನಗಳೊಂದಿಗೆ ಬಿಜೆಪಿ ರಾಜ್ಯದಲ್ಲಿ ಬಹುಮತ ಪಡೆದುಕೊಂಡಿದೆ. ಈ ಮೂಲಕ ಬಿಜೆಪಿ ಮೂರನೇ ಬಾರಿಗೆ ರಾಜ್ಯದಲ್ಲಿ ಅಧಿಕಾರವನ್ನು ಉಳಿಸಿಕೊಂಡಿದೆ. 60 ವಿಧಾನಸಭಾ ಕ್ಷೇತ್ರಗಳ ಅರುಣಾಚಲ ವಿಧಾನಸಭೆಗೆ 10 ಬಿಜೆಪಿ ಅಭ್ಯರ್ಥಿಗಳು ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಬಿಜೆಪಿ ಹ್ಯಾಪಿ ಕೈಗೆ ಬಿಪಿ

ಅರುಣಾಚಲ ಪ್ರದೇಶದಲ್ಲಿ ಪಕ್ಷ ಜಯಭೇರಿ ಬಾರಿಸಿದ ಬಳಿಕ ಅಲ್ಲಿನ ಜನತೆಗೆ ಪ್ರಧಾನಿ ಮೋದಿ ಧನ್ಯವಾದ ತಿಳಿಸಿದ್ದಾರೆ. ಧನ್ಯವಾದಗಳು ಅರುಣಾಚಲ ಪ್ರದೇಶ, ಈ ಅದ್ಭುತ ರಾಜ್ಯದ ಜನರು ಅಭಿವೃದ್ಧಿಯ ರಾಜಕೀಯಕ್ಕೆ ನಿಸ್ಸಂದಿಗ್ಧವಾದ ಜನಾದೇಶವನ್ನು ನೀಡಿದ್ದಾರೆ. ಬಿಜೆಪಿ ಬಗ್ಗೆ ಮತ್ತೊಮ್ಮೆ ತಮ್ಮ ನಂಬಿಕೆಯನ್ನು ಇಟ್ಟಿದ್ದಕ್ಕೆ ನನ್ನ ಕೃತಜ್ಞತೆಗಳು. ನಮ್ಮ ಪಕ್ಷವು ರಾಜ್ಯದಲ್ಲಿ ಇನ್ನೂ ಹೆಚ್ಚಿನ ಚೈತನ್ಯದಿಂದ ಕೆಲಸ ಮಾಡಲಿದೆ.

-ನರೇಂದ್ರ ಮೋದಿ, ಪ್ರಧಾನಿ

ಹಿಮಾಲಯ ರಾಜ್ಯ ಸಿಕ್ಕಿಂನಲ್ಲಿ ಸಿಕ್ಕಿಂ ಕ್ರಾಂತಿಕಾರಿ ಮೋರ್ಚಾ 32 ಸದಸ್ಯ ಬಲದ ವಿಧಾನಸಭೆಯಲ್ಲಿ 20 ಸ್ಥಾನಗಳನ್ನು ಗೆದ್ದುಕೊಂಡು ಸತತ ಎರಡನೇ ಅವಧಿಗೆ ಅಧಿಕಾರಕ್ಕೆ ಮರಳಿದೆ. ಮುಖ್ಯಮಂತ್ರಿ ಪ್ರೇಮ್ ಸಿಂಗ್ ತಮಾಂಗ್ ನೇತೃತ್ವದ ಎಸ್ ಕೆಎಂ ಇತರ 11 ಸ್ಥಾನಗಳಲ್ಲಿ ಮುನ್ನಡೆ ಸಾಧಿಸಿದೆ. ಏ.19 ರಂದು ಲೋಕಸಭೆಯ ಮೊದಲ ಹಂತದ ಚುನಾವಣೆಯ ಸಂದರ್ಭದಲ್ಲಿ ಏಕಕಾಲದಲ್ಲಿ ವಿಧಾನಸಭೆಗೆ ಚುನಾವಣೆಗಳು ನಡೆದವು. 60 ಸದಸ್ಯ ಬಲದ ಅರುಣಾಚಲ ಪ್ರದೇಶ ಅಸೆಂಬ್ಲಿಯಲ್ಲಿ ಬಿಜೆಪಿ 39 ಸ್ಥಾನಗಳನ್ನು ಗೆಲ್ಲುವ ಮೂಲಕ ಬಹುಮತ ಪಡೆದುಕೊಂಡಿದ್ದರಿಂದ ಬಿಜೆಪಿ ಭಾನುವಾರ ಸತತ ಮೂರನೇ ಬಾರಿಗೆ ಅರುಣಾಚಲ ಪ್ರದೇಶದಲ್ಲಿ ಅಧಿಕಾರಕ್ಕೆ ಮರಳಿದೆ ಎಂದು ಚುನಾವಣಾ ಆಯೋಗದ ಅಧಿಕಾರಿಗಳು ತಿಳಿಸಿದ್ದಾರೆ.ಏ.19ರಂದು ಈಶಾನ್ಯ ರಾಜ್ಯದಲ್ಲಿ ಚುನಾವಣೆ ನಡೆದ 50 ಸ್ಥಾನಗಳಿಗೆ ಇಂದು ಮತ ಎಣಿಕೆ ನಡೆಯಿತು.

ಬಿಜೆಪಿ ಹ್ಯಾಟ್ರಿಕ್ ಗೆಲುವು

• ಉದಯವಾಹಿನಿ, ನವದೆಹಲಿ

60 ವಿಧಾನಸಭಾ ಕ್ಷೇತ್ರಗಳ ಪೈಕಿ 50 ಸ್ಥಾನಗಳಿಗೆ ಮತದಾನ ನಡೆದಿದೆ. 46 ಸ್ಥಾನಗಳೊಂದಿಗೆ ಬಿಜೆಪಿ ರಾಜ್ಯದಲ್ಲಿ ಬಹುಮತ ಪಡೆದುಕೊಂಡಿದೆ. ಎನ್‌ಪಿಪಿ ಐದು ಸ್ಥಾನಗಳನ್ನು ಮತ್ತು ಎನ್‌ಸಿಪಿ ಮೂರು ಸ್ಥಾನಗಳನ್ನು ಗೆದ್ದುಕೊಂಡಿದೆ. ಕಾಂಗ್ರೇಸ್ ಕೇವಲ ಒಂದು ಸ್ಥಾನಕ್ಕೆ ತೃಪ್ತಿಪಟ್ಟುಕೊಂಡಿದೆ. ಐದು ಸ್ಥಾನಗಳಲ್ಲಿ ಗೆಲುವನ್ನು ಕಂಡುಕೊಂಡಿದ್ದಾರೆ. ಏ.19ರಂದು ಮೊದಲ ಹಂತದಲ್ಲಿ ಲೋಕಸಭೆ ಚುನಾವಣೆಯೊಂದಿಗೆ ಅರುಣಾಚಲ ವಿಧಾನಸಭಾ ಚುನಾವಣೆಗೆ ಏಕಕಾಲದಲ್ಲಿ ಮತದಾನ ನಡೆದಿದ್ದವು. ಅರುಣಾಚಲ ಪ್ರದೇಶದಲ್ಲಿ ಈ ಬಾರಿ 54.57% ಮತದಾನ ಬಿಜೆಪಿಗೆ ಬಿದ್ದಿದೆ. ಇದು 2019ಕ್ಕೆ ಹೋಲಿಕೆ ಮಾಡಿದರೆ ಬಿಜೆಪಿಯ ಮತ ಹಂಚಿಕೆಯಲ್ಲಿ ಹೆಚ್ಚಳವನ್ನು ತೋರಿಸುತ್ತದೆ. ಇನ್ನು ಕಾಂಗ್ರೇಸ್‌ನ ಮತ ಹಂಚಿಕೆ ಕಡಿಮೆಯಾಗಿದ್ದು, ಅರುಣಾಚಲದಲ್ಲಿ ಕಾಂಗ್ರೇಸ್ 5.56% ಮತವನ್ನು ಪಡೆದುಕೊಂಡಿದೆ. ಎನ್‌ಪಿಇಪಿ 16.11% ಮತವನ್ನು ಪಡೆದುಕೊಂಡಿದೆ. ಎನ್‌ಸಿಪಿಗೆ 10.43% ಮತ್ತು ಇತರರು 5.6% ಮತವನ್ನು ಪಡೆದುಕೊಂಡಿದ್ದಾರೆ.

2019ರ ವಿಧಾನಸಭಾ ಚುನಾವಣೆಯಲ್ಲಿ ಅರುಣಾಚಲದಲ್ಲಿ ಬಿಜೆಪಿಯು 60ರಲ್ಲಿ 41 ಸ್ಥಾನಗಳನ್ನು ಜಯಿಸಿತ್ತು. ಜೆಡಿಯು 7, ಎನ್‌ಪಿಪಿ 5, ಕಾಂಗ್ರೇಸ್ 4 ಮತ್ತು ಪಿಪಿಎ 1 ಸ್ಥಾನ ಗೆದ್ದುಕೊಂಡಿದ್ದರೆ, ಎರಡು ಸ್ಥಾನಗಳಲ್ಲಿ ಪಕ್ಷೇತರರು ಜಯಿಸಿದ್ದರು. ಯಾವುದೇ ಪಕ್ಷ ಬಹುಮತ ಸಾಬೀತು ಮಾಡಲು ಅರುಣಾಚಲ ಪ್ರದೇಶದಲ್ಲಿ 31 ಸ್ಥಾನಗಳ ಅಗತ್ಯವಿರುತ್ತದೆ. ಮುಖ್ಯಮಂತ್ರಿ ಪೇಮಾ ಖಂಡು ಹಾಗೂ ಉಪ ಮುಖ್ಯಮಂತ್ರಿ ಚೌನಾ ಮೈನ್ ತಮ್ಮ ಕ್ಷೇತ್ರಗಳಲ್ಲಿ ಗೆಲುವು ಸಾಧಿಸಿದ್ದಾರೆ. ಸಿಕ್ಕಿಂ ರಾಜ್ಯದ ವಿಧಾನಸಭಾ ಚುನಾವಣೆ ಫಲಿತಾಂಶ ಪ್ರಕಟವಾಗಿದ್ದು, ಸಿಕ್ಕಿಂ ಕ್ರಾಂತಿಕಾರಿ ಮೋರ್ಚಾ ಮತ್ತೊಮ್ಮೆ ಅಧಿಕಾರದ ಚುಕ್ಕಾಣಿ ಹಿಡಿದಿದೆ. ಇಲ್ಲಿಯವರೆಗೆ ವಿಧಾನಸಭೆಯ 31 ಸ್ಥಾನಗಳಲ್ಲಿ ಆಡಳಿತ ಪಕ್ಷ 26 ಸ್ಥಾನಗಳನ್ನು ಗೆದ್ದಿದೆ. ಉಳಿದ ಐದು ಸ್ಥಾನಗಳಲ್ಲಿ ಮುನ್ನಡೆ ಸಾಧಿಸಿದೆ. ಗೆಲುವಿಗಾಗಿ ತಮ್ಮ ಪಕ್ಷದ ಕಾರ್ಯಕರ್ತರಿಗೆ ಮುಖ್ಯಮಂತ್ರಿ ತಮಾಂಗ್ ಧನ್ಯವಾದ ತಿಳಿಸಿದ್ದಾರೆ. ಹಿಮಾಲಯ ತಪ್ಪಲಿನ ಅರುಣಾಚಲ ಪ್ರದೇಶದಲ್ಲಿ ಮತ್ತೆ ಆಡಳಿತಾರೂಢ ಬಿಜೆಪಿ ಮತ್ತೊಮ್ಮೆ ಅಧಿಕಾರಕ್ಕೆ ಬಂದಿದೆ. ಸಿಕ್ಕಿಂನಲ್ಲಿ ಕ್ರಾಂತಿಕಾರಿ ಮೋರ್ಚಾ ಭರ್ಜರಿ ಜಯಭೇರಿ ಬಾರಿಸಿ ಅಧಿಕಾರದ ಚುಕ್ಕಾಣಿ ಹಿಡಿದಿದೆ. ಒಟ್ಟು 60 ಕ್ಷೇತ್ರಗಳ ಪೈಕಿ 46 ಸ್ಥಾನಗಳಲ್ಲಿ ಅಭೂತಪೂರ್ವ ಗೆಲುವು ಸಾಧಿಸಿ ಕೇಸರಿ ಪಡೆ ಅಧಿಕಾರಕ್ಕೆ ಬಂದಿದೆ. ತ್ತೊಂದೆಡೆ ಸಿಕ್ಕಿಂ ಕ್ರಾಂತಿಕಾರಿ ಮೋರ್ಚಾ 31 ಕ್ಷೇತ್ರಗಳಲ್ಲಿ ಭರ್ಜರಿ ಜಯ ಸಾಧಿಸಿ ಮತ್ತೊಂದು ಅವಧಿಗೆ ಅಧಿಕಾರದ ಚುಕ್ಕಾಣಿ ಹಿಡಿದಿದೆ. ಅರುಣಾಚಲ ಪ್ರದೇಶದಲ್ಲಿ ಕಾಂಗ್ರೇಸ್ ತೀವ್ರ ಮುಖಭಂಗ ಅನುಭವಿಸಿದೆ. ಆದರೆ, ಸಿಕ್ಕಿಂನಲ್ಲಿ ಕಾಂಗ್ರೇಸ್ ಮತ್ತು ಬಿಜೆಪಿ ಧೂಳಿಪಟವಾಗಿದೆ. ಲೋಕಸಭಾ ಚುನಾವಣೆ ಮುಕ್ತಾಯಗೊಂಡ ಬೆನ್ನಲ್ಲೆ ಮತಗಟ್ಟೆ ಸಮೀಕ್ಷೆಗಳಲ್ಲಿ ಬಿಜೆಪಿ ನೇತೃತ್ವದ ಎನ್‌ಡಿಎ ಮೈತ್ರಿಕೂಟ ಹ್ಯಾಟ್ರಿಕ್ ಜಯಭೇರಿ ಬಾರಿಸಲಿದೆ ಎಂದು ಮತಗಟ್ಟೆ ಸಮೀಕ್ಷೆಗಳು ಬಿಂಬಿಸಿವೆ. ಇದರ ಬೆನ್ನಲ್ಲೇ ಅರುಣಾಚಲ ಪ್ರದೇಶದಲ್ಲಿ ಬಿಜೆಪಿ 2ನೇ ಮತ್ತೊಂದು ಅವಧಿಗೆ ಅಧಿಕಾರ ಉಳಿಸಿಕೊಂಡರೆ ಸಿಕ್ಕಿಂ ಕ್ರಾಂತಿಕಾರಿ ಮೋರ್ಚಾ ಮತ್ತೆ ಅಧಿಕಾರದ ಗದ್ದುಗೆಗೇರಿದೆ. ಇದರಿಂದಾಗಿ ಈ ಎರಡೂ ರಾಜ್ಯಗಳಲ್ಲಿ ಕಾಂಗ್ರೇಸ್‌ಗೆ ತೀವ್ರ ಮುಖಭಂಗವಾಗಿದೆ.

1. ಅರುಣಾಚಲ ಪ್ರದೇಶ ಹಾಗೂ ಸಿಕ್ಕಿಂ ರಾಜ್ಯಗಳ ವಿಧಾನಸಭೆ ಚುನಾವಣೆಗಳ ಫಲಿತಾಂಶ ಪ್ರಕಟ
2. ಅರುಣಾಚಲ ಪ್ರದೇಶದಲ್ಲಿ 60ರಲ್ಲಿ 46 ಸೀಟುಗಳೊಂದಿಗೆ ಮರಳಿ ಅಧಿಕಾರಕ್ಕೆ ಬಂದ ಬಿಜೆಪಿ
3. ಸಿಕ್ಕಿಂನಲ್ಲಿ ಆಡಳಿತಾರೂಢ ಎಸ್‌ಕೆಎಂ ಆರ್ಭಟಕ್ಕೆ ಎದುರಾಳಿಗಳು ಕಂಗಾಲು, ಮತ್ತೆ ಅಧಿಕಾರಕ್ಕೆ ತಮಾಂಗ್

ಸಿಕ್ಕಿಂನಲ್ಲಿ ಎಸ್‌ಕೆಎಂ ಬಿರುಗಾಳಿಗೆ ಎಸ್‌ಡಿಎಫ್ ತತ್ತರ

ಸಿಕ್ಕಿಂನಲ್ಲಿ ಸಹ ಆಡಳಿತ ಪಕ್ಷಕ್ಕೇ ಮತದಾರರು ಮನ್ನಣೆ ನೀಡಿದ್ದಾರೆ. ಸಿಕ್ಕಿಂ ಕ್ರಾಂತಿಕಾರಿ ಮೋರ್ಚಾ ಮರಳಿ ಗದ್ದುಗೆ ಹಿಡಿದಿದೆ. 32 ಸೀಟುಗಳ ಪೈಕಿ 31 ಸ್ಥಾನಗಳಲ್ಲಿ ಎಸ್‌ಕೆಎಂ ಗೆದ್ದಿರುವುದು ಅದರ ಪ್ರಾಬಲ್ಯಕ್ಕೆ ಸಾಕ್ಷಿ. ವಿರೋಧ ಪಕ್ಷ ಸಿಕ್ಕಿಂ ಡೆಮೊಕ್ರಟಿಕ್ ಫ್ರಂಟ್ ಕೇವಲ ಒಂದು ಸ್ಥಾನದಲ್ಲಿ ಗೆಲುವು ಸಾಧಿಸಿದೆ. ರಾಜ್ಯಲ್ಲಿ ಎಸ್‌ಕೆಎಂ ಬೆಂಬಲಿಗರು ಹಾಡುತ್ತಾ, ಕುಣಿದು ಪಕ್ಷದ ಗೆಲುವನ್ನು ಸಂಭ್ರಮಿಸಿದರು. ಏ.19ರಂದು ನಡೆದ ಚುನಾವಣೆಯಲ್ಲಿ, ಶೇ 79.88ರಷ್ಟು ಮತದಾನ ದಾಖಲಾಗಿತ್ತು. ಎಸ್‌ಕೆಎಂ, ಪವನ್ ಕುಮಾರ್ ಚಾಮ್ಲಿಂಗ್ ಅವರ ಎಸ್‌ಡಿಎಫ್ ನಡುವೆ ನೇರ ಹಣಾಹಣಿ ನಿರೀಕ್ಷಿಸಲಾಗಿತ್ತು. ಬಿಜೆಪಿ ಮತ್ತು ಕಾಂಗ್ರೇಸ್ ಕೂಡ ಇಲ್ಲಿ ಅಭ್ಯರ್ಥಿಗಳನ್ನು ಕಣಕ್ಕಿಳಿಸಿದ್ದವು. ಒಟ್ಟು 146 ಮಂದಿ ಕಣದಲ್ಲಿದ್ದರು. ಇದರಲ್ಲಿ ಸಿಎಂ ಪ್ರೇಮ್ ಸಿಂಗ್ ತಮಾಂಗ್, ಅವರ ಪತ್ನಿ ಕೃಷ್ಣ ಕುಮಾರಿ ರೈ, ಮಾಜಿ ಸಿಎಂ ಪವನ್ ಕುಮಾರ್ ಚಾಮ್ಲಿಂಗ್, ಮಾಜಿ ಫುಟ್‌ಬಾಲ್ ಆಟಗಾರ ಬೈಚುಂಗ್ ಭುಟಿಯಾ, ಬಿಜೆಪಿಯ ನರೇಂದ್ರ ಕುಮಾರ್ ಸುಬ್ಬಾ ಸೇರಿದ್ದಾರೆ.

ಬೈಚುಂಗ್ ಭುಟಿಯಾಗೆ ಸೋಲು

ಭಾರತೀಯ ಫುಟ್ಬಾಲ್ ತಂಡದ ಮಾಜಿ ನಾಯಕ ಬೈಚುಂಗ್ ಭುಟಿಯಾ ಅವರು ಚುನಾವಣಾ ರಾಜಕಾರಣದಲ್ಲಿ ಮತ್ತೊಂದು ಸೋಲು ಕಂಡಿದ್ದಾರೆ. ಬರ್ಫುಂಗ್ ಕ್ಷೇತ್ರದಿಂದ ಸ್ಪರ್ಧಿಸಿದ್ದ ಭುಟಿಯಾ, ಎಸ್‌ಕೆಎಂ ಪಕ್ಷದ ರಿಕ್ಷಾಲ್ ಡಾರ್ಜೀ ಭುಟಿಯಾ ಎದುರು 4,346 ಮತಗಳ ಅಂತರದಿಂದ ಸೋಲು ಕಂಡಿದ್ದಾರೆ. ಭುಟಿಯಾ ಅವರು 2018ರಲ್ಲಿ ತಮ್ಮದೇ ಹಮ್ರೋ ಸಿಕ್ಕಿಂ ಪಾರ್ಟಿ ಸ್ಥಾಪಿಸಿದ್ದರು. ಆದರೆ ಕಳೆದ ವರ್ಷ ಎಸ್‌ಡಿಎಫ್ ಜತೆ ಅದನ್ನು ವಿಲೀನಗೊಳಿಸಿದ್ದರು. ಪ್ರಸ್ತುತ ಅವರು ಎಸ್‌ಡಿಎಫ್‌ನ ಉಪಾಧ್ಯಕ್ಷ 2014ರ ಲೋಕಸಭೆ ಚುನಾವಣೆಯಲ್ಲಿ ಪಶ್ಚಿಮ ಬಂಗಾಳದ ಡಾರ್ಜಿಲಿಂಗ್ ಹಾಗೂ 2016ರ ವಿಧಾನಸಭೆ ಚುನಾವಣೆಯಲ್ಲಿ ಸಿಲಿಗುರಿ ಕ್ಷೇತ್ರದಿಂದ ಟಿಎಂಸಿ ಅಭ್ಯರ್ಥಿಯಾಗ

ಸಿದ್ಧಸೂಕ್ತಿ

ಡಾ ಆರೂಢಭಾರತೀ ಸ್ವಾಮೀಜಿ
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

ಬಡ್ಡಿಯಿಂದ ಬದುಕುವವ ಬಡ್ಡಿ ಮಗ

ಬಡ್ಡಿಯಿಂದ ಬದುಕುವವ ಬಡ್ಡಿ ಮಗ. ಬ್ಯಾಂಕ್ ಹಣಕಾಸು ಸಂಘ ಸಂಸ್ಥೆಗಳು ವ್ಯಕ್ತಿಗಳು ಬಡ್ಡಿ ಮಕ್ಕಳೆನ್ನಬಹುದು. ಬಡ್ಡಿಯ ವ್ಯವಹಾರ ಅಪರಾಧವಲ್ಲವಾದರೂ ಕೊಡುವ ಪಡೆಯುವ ಇಬ್ಬರಿಗೂ ಹಿಂಸೆ ಎನಿಸದ ನ್ಯಾಯಯುತ ಬಡ್ಡಿಯ ವ್ಯವಹಾರ ಒಪ್ಪಿತ. ಹಣದ ಅಗತ್ಯವಿರುವವರ ಅಸಹಾಯಕತೆಯನ್ನು ಅನಿವಾರ್ಯತೆಯನ್ನು ಬಂಡವಾಳವಾಗಿಸಿಕೊಂಡು ಮನ ಬಂದಂತೆ ಬಡ್ಡಿಯನ್ನು ಗ್ರಹಿಸುವುದು ಅಪರಾಧ. ಇಂಥ ಬಡ್ಡಿ ವ್ಯವಹಾರ ಮಾಡುವವರಿಗೆ ಸಮಾಜದಲ್ಲಿ ಮನ್ನಣೆ ಇಲ್ಲ. ಕಾನೂನು ಕ್ಷಮಿಸುವುದಿಲ್ಲ. ಆದ್ದರಿಂದಲೇ ಬಡ್ಡಿಮಗನೇ ಎಂಬುದು ಬೈಗುಳವೆನಿಸಿದೆ. ಮನ ಬಂದಂಥ ಬಡ್ಡಿಗೆ ಒಪ್ಪಿ ಹಣ ಪಡೆದವರು ಸಾಲದ ಸುಳಿಯಲ್ಲಿ ಸಿಲುಕಿ ಬಡ್ಡಿ ಸಾಲ ತೀರಿಸಲಾಗದೇ ತಲೆಮರೆಸಿಕೊಂಡವರುಂಟು ಸತ್ತವರುಂಟು. ಹೀಗಾದಾಗ ಬಡ್ಡಿ ಸಾಲ ಮರುಪಾವತಿಯಾಗದಿದ್ದಾಗ ಸಾಲ ಕೊಟ್ಟವರಿಗೂ ಅದೇ ಗತಿ. ಅತಿಯಾಶೆ ಗತಿಗೆಡಿಸಿತು. ಆಶೆಯ ಮಾಯಾಜಾಲಕ್ಕೆ ಸಿಲುಕದೇ ಐಷಾರಾಮಿ ಜೀವನದ ಕನಸು ಕಾಣದೇ ಶ್ರಮಜೀವನವನ್ನು ಪ್ರೀತಿಸಿ ಸರಳ ಬದುಕಿಗೆ ಮೈ ಒಡ್ಡಿದರೆ ಸುದೀರ್ಘ ನೆಮ್ಮದಿಯ ಜೀವನ ನಮ್ಮದಾದೀತು

ತನಿಖೆಗೆ ಪ್ರಜ್ವಲ್ ರೇವಣ್ಣ ಅಸಹಕಾರ, ಅಧಿಕಾರಿಗಳಿಗೆ ಬೆದರಿಕೆ

• ಉದಯವಾಹಿನಿ, ಬೆಂಗಳೂರು

ಲೈಂಗಿಕ ದೌರ್ಜನ್ಯ ಹಾಗೂ ಅತ್ಯಾಚಾರ ಪ್ರಕರಣದಲ್ಲಿ ಬಂಧಿತನಾಗಿರುವ ಹಾಸನ ಸಂಸದ ಪ್ರಜ್ವಲ್ ರೇವಣ್ಣ ಎಸ್‌ಐಟಿ ವಿಚಾರಣೆಗೆ ಅಸಹಕಾರ ತೋರುತ್ತಿದ್ದಾರೆ. ಹೊರಗೆ ಬಂದ ಕೂಡಲೇ ನೋಡಿಕೊಳ್ಳುವುದಾಗಿ ಅಧಿಕಾರಿಗಳನ್ನು ಬೆದರಿಸುತ್ತಿದ್ದಾರೆ ಎನ್ನಲಾಗಿದೆ.ಅರಮನೆ ರಸ್ತೆಯ ಸಿಐಡಿ ಕೇಂದ್ರ ಕಚೇರಿಯ ಎಸ್‌ಐಟಿ ಸೆಲ್ ನಲ್ಲಿ ಪ್ರಜ್ವಲ್ ಅವರನ್ನು ತೀವ್ರ ವಿಚಾರಣೆಗೊಳಪಡಿಸಲಾಗಿದೆ.ಆದರೆ, ತಮ್ಮ ಮೇಲಿನ ಅತ್ಯಾಚಾರ ಆರೋಪಗಳನ್ನು ಪ್ರಜ್ವಲ್ ನಿರಾಕರಿಸುತ್ತಿದ್ದಾರೆ ಎನ್ನಲಾಗಿದೆ. ತಮ್ಮ ವಿರುದ್ಧ ರಾಜಕೀಯ ಪಿತೂರಿಯಿಂದ ಅತ್ಯಾಚಾರ ಪ್ರಕರಣಗಳು ದಾಖಲಾಗಿವೆ. ಯಾವುದೇ ತಪ್ಪನ್ನು ನಾನು ಮಾಡಿಲ್ಲ. 4 ವರ್ಷಗಳ ನಂತರ ಅತ್ಯಾಚಾರ ಪ್ರಕರಣದಲ್ಲಿ ದೂರು ಕೊಡಲು ಹಿಂದಿರುವ ಕಾರಣ ಪತ್ತೆ ಮಾಡುವಂತೆ ಹೇಳಿದ್ದಾರೆ. ನಮ್ಮ ಮನೆಯಲ್ಲಿ ಅನೇಕ ಮಂದಿ ಕೆಲಸ ಮಾಡುತ್ತಿದ್ದರು. ಅವರ ಬಗ್ಗೆ ಮಾಹಿತಿ ಗೊತ್ತಿಲ್ಲ. ತಿರುಚಿದ ವಿಡಿಯೋಗಳನ್ನು ಹರಿಬಿಟ್ಟು ತೇಜೋವಧೆ ಮಾಡುತ್ತಿದ್ದಾರೆ. ಈ ವಿಡಿಯೋಗಳ ಹಿಂದಿರುವ ಕಾರ್ತಿಕ್ ಸೇರಿ ಇತರರನ್ನು ಬಂಧಿಸಿ ವಿಚಾರಣೆ ನಡೆಸಿದರೆ ಸತ್ಯ ಗೊತ್ತಾಗುತ್ತದೆ ಎಂದು ಪ್ರಜ್ವಲ್ ವಿಚಾರಣೆ ಸಂದರ್ಭದಲ್ಲಿ ತಿಳಿಸಿದ್ದಾರೆ ಎನ್ನಲಾಗಿದೆ.

ದ್ವಿಚಕ್ರ ವಾಹನಗಳ ಕಳ್ಳತನ ಮಾಡುತ್ತಿದ್ದ ಆಟೋ ಚಾಲಕ ಬಂಧನ

• ಉದಯವಾಹಿನಿ, ಬೆಂಗಳೂರು

ದ್ವಿಚಕ್ರ ವಾಹನಗಳ ಕಳ್ಳತನ ಮಾಡುತ್ತಿದ್ದ ಆಟೋ ಚಾಲಕನೊಬ್ಬನನ್ನು ನಗರದ ಪೊಲೀಸರು ಬಂಧಕ್ಕೊಳಪಡಿಸಿದ್ದು, ಆರೋಪಿಯಿಂದ ರೂ.2.6 ಲಕ್ಷ ಮೌಲ್ಯದ ವಾಹನಗಳು, ಮೊಬೈಲ್ ಫೋನ್ ವಶಕ್ಕೆ ಪಡೆದಿದ್ದಾರೆ. ಆರೋಪಿಯನ್ನು ಶಿವಾಜಿನಗರ ನಿವಾಸಿ ಶಾಬಾಜ್ ಖಾನ್ ಎಂದು ಗುರುತಿಸಲಾಗಿದೆ. ಆರೋಪಿ ಎಸ್‌ಎಸ್‌ಎಲ್‌ಸಿ ಓದಿದ್ದು, ಆಟೋ ಚಾಲಕನಾಗಿ ಕೆಲಸ ಮಾಡುತ್ತಿದ್ದ. ಹಲಸೂರಿನಲ್ಲಿ ನಡೆದ ದ್ವಿಚಕ್ರ ವಾಹನ ಕಳ್ಳತನದ ಸಿಸಿಟಿವಿ ದೃಶ್ಯಾವಳಿ ಆಧರಿಸಿ ಆರೋಪಿಗಳನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದೇವೆ ಎಂದು ಪೊಲೀಸರು ತಿಳಿಸಿದ್ದಾರೆ. ವಿಚಾರಣೆ ನಡೆಸಿದಾಗ ಕಳ್ಳತನವಾಗಿರುವ ಬೈಕ್‌ಗಳು, ಮೊಬೈಲ್‌ಗಳ ಬಗ್ಗೆ ಆರೋಪಿ ಬಾಯ್ಬಿಟ್ಟಿದ್ದಾನೆ. ಈತನ ವಿರುದ್ಧ ಹಲಸೂರು ಠಾಣೆಯಲ್ಲಿ ಮೂರು, ಹೊಸಕೋಟೆ ಠಾಣೆಯಲ್ಲಿ ಒಂದು ಪ್ರಕರಣ ದಾಖಲಾಗಿವೆ. ಆರೋಪಿಗಳಿಂದ 2.6 ಲಕ್ಷ ರೂಪಾಯಿ ಮೌಲ್ಯದ 3 ದ್ವಿಚಕ್ರ ವಾಹನಗಳು , 4 ಮೊಬೈಲ್ ಫೋನ್‌ಗಳನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ.

ಇಂಜಿನಿಯರಿಂಗ್‌ನ 10 ರ್‍ಯಾಂಕ್‌ನಲ್ಲಿ ಟಾಪ್ 9 ಬಾಲಕರು!

• ಉದಯವಾಹಿನಿ, ಬೆಂಗಳೂರು

ರಾಜ್ಯದ ಕಾಲೇಜುಗಳಲ್ಲಿನ ವೃತ್ತಿಪರ ಕೋರ್ಸ್‌ಗಳಿಗೆ ಪ್ರವೇಶದ್ವಾರವಾದ ಕರ್ನಾಟಕ ಪರೀಕ್ಷಾ ಪ್ರಾಧಿಕಾರ (ಏಇಂ) ಕರ್ನಾಟಕ ಸಾಮಾನ್ಯ ಪ್ರವೇಶ ಪರೀಕ್ಷೆಯ ಫಲಿತಾಂಶವನ್ನು ಪ್ರಕಟಿಸಿದೆ. ವರ್ಷ 3,49,653 ಅಭ್ಯರ್ಥಿಗಳ ಪೈಕಿ 3,10,314 ಮಂದಿ ಪರೀಕ್ಷೆ ಬರೆದು ರ್‍ಯಾಂಕ್‌ಗೆ ಅರ್ಹರಾಗಿದ್ದಾರೆ. ಅರ್ಹ ವಿದ್ಯಾರ್ಥಿಗಳ ಪೈಕಿ 1,39,274 ವಿದ್ಯಾರ್ಥಿಗಳು, 1,71,040 ವಿದ್ಯಾರ್ಥಿನಿಯರಿದ್ದಾರೆ. ವರ್ಷ ಒಟ್ಟು 2,74,595 ವಿದ್ಯಾರ್ಥಿಗಳು ಎಂಜಿನಿಯರಿಂಗ್‌ಗೆ ಅರ್ಹರಾಗಿದ್ದಾರೆ. ಎಂಜಿನಿಯರಿಂಗ್‌ನಲ್ಲಿ 9 ವಿದ್ಯಾರ್ಥಿಗಳು, ಒಬ್ಬ ವಿದ್ಯಾರ್ಥಿನಿ ಹೆಚ್ಚು ಅಂಕ ಗಳಿಸುವ ಮೂಲಕ ಬೆಂಗಳೂರಿನ ವಿದ್ಯಾರ್ಥಿಗಳು ಟಾಪ್ 10 ರ ರ್‍ಯಾಂಕ್‌ಗಳಲ್ಲಿ ಪ್ರಾಬಲ್ಯ ಹೊಂದಿದ್ದಾರೆ. ಸಹಕಾರ ನಗರದ ನಾರಾಯಣ ಒಲಂಪಿಯಾಡ್ ಶಾಲೆಯ ಹರ್ಷ ಕಾರ್ತಿಕೇಯ ವುಟುಕುರಿ ಇಂಜಿನಿಯರಿಂಗ್ ಸಿಇಟಿಯಲ್ಲಿ ಅಗ್ರ ರ್‍ಯಾಂಕ್ ಪಡೆದರೆ, ಮಾರತ್ತಹಳ್ಳಿಯ ಶ್ರೀ ಚೈತನ್ಯ ಟೆಕ್ನೋ ಶಾಲೆಯ ಮನೋಜ್ ಸೋಹನ್ ಗಾಜುಲ ಮತ್ತು ಜೆ.ಪಿ.ನಗರದ ನೆಹರು ಸ್ಮಾರಕ ವಿದ್ಯಾಲಯದ ಅಭಿನವ್ ಪಿ.ಜೆ ದ್ವಿತೀಯ ರ್‍ಯಾಂಕ್‌ಗಳಿಸಿದ್ದಾರೆ.

ಮಹಿಳೆ ಅಪಹರಣ ಪ್ರಕರಣ

• ಉದಯವಾಹಿನಿ, ಬೆಂಗಳೂರು

ಮಹಿಳೆ ಅಪಹರಣ ಪ್ರಕರಣಕ್ಕೆ ಸಂಬಂಧಿಸಿದಂತೆ ಭವಾನಿ ರೇವಣ್ಣ ಅವರು ಹಾಸನ ಜಿಲ್ಲೆಯ ಹೊಳೆನರಸೀಪುರದಲ್ಲಿರುವ ಅವರ ನಿವಾಸದಲ್ಲಿ ವಿಚಾರಣೆಗೆ ಗೈರು ಹಾಜರಾಗಿದ್ದು, ವಿಶೇಷ ತನಿಖಾ ತಂಡವು (ಎಸ್‌ಐಟಿ) ಕಳೆದ 24 ಗಂಟೆಗಳಲ್ಲಿ ವಿವಿಧ ಸ್ಥಳಗಳಲ್ಲಿ ಶೋಧ ನಡೆಸಿದೆ ಎಂದು ಮೂಲಗಳು ತಿಳಿಸಿವೆ. ಈ ಮಧ್ಯೆ, ತಲೆಮರೆಸಿಕೊಂಡಿರುವ ಭವಾನಿ ಅವರನ್ನು ಬಂಧಿಸಲು ಶೋಧ ನಡೆಸಲಾಗುತ್ತಿದೆ. ಅವರು ಎಲ್ಲೋ ತಲೆಮರೆಸಿಕೊಂಡಿದ್ದು, ಶೀಘ್ರದಲ್ಲೇ ಬಂಧಿಸಲಾಗು ವುದು ಎಂದು ಗೃಹ ಸಚಿವ ಜಿ ಪರಮೇಶ್ವರ ಹೇಳಿದ್ದಾರೆ. ಅವರು (ವಿಶೇಷ ತನಿಖಾ ತಂಡ) ಅವರನ್ನು (ಭವಾನಿ) ಬಂಧಿಸಲು ಹುಡುಕುತ್ತಿದ್ದಾರೆ. ಅವರು ಎಲ್ಲಿದ್ದಾರೆ ಎಂಬುದು ತಿಳಿದಿಲ್ಲ, ಅವರು ಸಿಕ್ಕಿದ ನಂತರ ಅವರನ್ನು ಬಂಧಿಸಲಾಗುವುದು. ಇದು ಕಾನೂನು ಪ್ರಕ್ರಿಯೆಯಾಗಿದೆ ಬೇರೇನೂ ಇಲ್ಲ' ಎಂದು ಪರಮೇಶ್ವರ ಇಲ್ಲಿ ಸುದ್ದಿಗಾರರಿಗೆ ತಿಳಿಸಿದರು.

ಎರಡು ದಿನಗಳ ತರಬೇತಿ ಕಾರ್ಯಕ್ರಮದಲ್ಲಿ 550 ಪೊಲೀಸರು ಭಾಗಿ!

• ಉದಯವಾಹಿನಿ, ಬೆಂಗಳೂರು

ರಾಮಯ್ಯ ಕಾನೂನು ಕಾಲೇಜು, ಜಸ್ಟೀಸ್ ಇ.ಎಸ್.ವೆಂಕಟರಾಮಯ್ಯ ಗ್ಲೋಬಲ್ ಲೀಗಲ್ ಸ್ಕಿಲ್ಸ್ ಅಕಾಡೆಮಿ ಸಹಯೋಗದಲ್ಲಿ ನಡೆದ ಕಾರ್ಯಕ್ರಮದಲ್ಲಿ '3 ಹೊಸ ಕ್ರಿಮಿನಲ್ ಕಾನೂನುಗಳ ಕುರಿತು ಪೊಲೀಸರಿಗೆ ತರಬೇತಿ ನೀಡಲಾಯಿತು.ಪ್ರಸ್ತುತ ಸಂದರ್ಭಗಳಿಗೆ ತಕ್ಕಂತೆ ಸರ್ವರಿಗೂ ನ್ಯಾಯ ಒದಗಿಸಲು ಕೇಂದ್ರ ಸರ್ಕಾರ ಮೂರು ಹೊಸ ಕಾನೂನು ರೂಪಿಸಿದ್ದು, ಇವುಗಳು ಜುಲೈ 1ರಿಂದ ದೇಶದಾದ್ಯಂತ ಜಾರಿಗೆ ಬರಲಿವೆ. ಈ ಹಿನ್ನೆಲೆಯಲ್ಲಿ ತರಬೇತಿ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು. ತರಬೇತಿ ಶಿಬಿರದಲ್ಲಿ 550ಕ್ಕೂ ಹೆಚ್ಚು ಪೊಲೀಸರು ಭಾಗಿಯಾಗಿದ್ದು, ನಿವೃತ್ತ ಜಿಲ್ಲಾ ನ್ಯಾಯಾಧೀಶರಾದ ಈಶ್ವರ್ ಎಸ್.ಅಂಟಿನ್, ಎಸ್‌ಬಿಎನ್ ಪ್ರಕಾಶ್, ಡಿ.ಆರ್. ವೆಂಕಟ ಸುದರ್ಶನ್ ಅವರು ಮೂರು ಹೊಸ ಕಾನೂನುಗಳ ಬಗ್ಗೆ ಉಪನ್ಯಾಸ ನೀಡಿದರು.

ಮತ ಎಣಿಕೆ, ಬಿಬಿಎಂಪಿ ಸೂಚನೆಗಳು, ಕೇಂದ್ರಗಳ ಪಟ್ಟಿ

■ ಮತ ಎಣಿಕೆ ಕಾರ್ಯ ಪ್ರಾರಂಭ ■ ಲೋಕಸಭಾ ಚುನಾವಣೆಯ ಸಂಬಂಧ ಮತ ಎಣಿಕೆ ಕೇಂದ್ರಗಳಿಗೆ ಭೇಟಿ ನೀಡಿ ತಪಾಸಣೆ

• ಉದಯವಾಹಿನಿ, ಬೆಂಗಳೂರು

ಲೋಕಸಭಾ ಚುನಾವಣೆಯ ಮತ ಎಣಿಕೆ ಕಾರ್ಯಕ್ಕೆ ಎಲ್ಲಾ ರೀತಿಯ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ. ಜೂನ್ 4 ರಂದು ಬೆಳಗ್ಗೆ 8 ಗಂಟೆಗೆ ಮತ ಎಣಿಕೆ ಕಾರ್ಯ ಪ್ರಾರಂಭವಾಗಲಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಮುಖ್ಯ ಆಯುಕ್ತರಾದ ತುಷಾರ್ ಗಿರಿನಾಥ್ ಅವರು ಮಾಹಿತಿ ನೀಡಿದರು.

ಭಾನುವಾರ ಲೋಕಸಭಾ ಚುನಾವಣೆಯ ಸಂಬಂಧ ಮತ ಎಣಿಕೆ ಕೇಂದ್ರಗಳಿಗೆ ಭೇಟಿ ನೀಡಿ ತಪಾಸಣೆ ನಡೆಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದರು. ಬಿಬಿಎಂಪಿ ವ್ಯಾಪ್ತಿಯಲ್ಲಿ ಬೆಂಗಳೂರು ಕೇಂದ್ರ, ಬೆಂಗಳೂರು ನಗರ ಹಾಗೂ ಬೆಂಗಳೂರು ದಕ್ಷಿಣ ಸೇರಿದಂತೆ 3 ಲೋಕಸಭಾ ಕ್ಷೇತ್ರಗಳು ಬರಲಿವೆ. ಬಿಬಿಎಂಪಿ ವ್ಯಾಪ್ತಿಗೆ ಒಳಪಡುವ 3 ವಿಧಾನಸಭಾ ಕ್ಷೇತ್ರಗಳು ಬೆಂಗಳೂರು ಗ್ರಾಮಾಂತರ ಹಾಗೂ ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರಕ್ಕೆ ಬರಲಿದೆ ಎಂದು ಹೇಳಿದರು.

ಮತ ಎಣಿಕೆಗಾಗಿ ಸಿಬ್ಬಂದಿಯು 3 ವಿಧದಲ್ಲಿ ಇರಲಿದ್ದಾರೆ. ಪ್ರತಿ ಟೇಬಲ್‌ಗೆ ಮೈಕ್ರೋ ಅಬ್ಸರ್ ವರ್, ಮತ ಎಣಿಕೆ ಮೇಲ್ವಿಚಾರಕರು ಮತ ಎಣಿಕೆ ಸಹಾಯಕರನ್ನು ನಿಯೋಜನೆ ಮಾಡಲಾಗುತ್ತದೆ. ಮತ ಎಣಿಕೆ ಸಿಬ್ಬಂದಿ ಅಭ್ಯರ್ಥಿಗಳ ಮತ ಎಣಿಕೆ ಏಜೆಂಟ್‌ಗಳನ್ನು ಬೆಳಗ್ಗೆ 6 ಗಂಟೆಗೆ ಬರಲು ತಿಳಿಸಲಾಗಿದೆ. ಯಾರಿಗೆ ಗುರುತಿನ ಚೀಟಿ ನೀಡಲಾಗಿದೆ ಅಂತಹವರಿಗೆ ಮಾತ್ರ ಮತ ಎಣಿಕೆ ಕೇಂದ್ರದ ಒಳಗೆ ಪ್ರವೇಶ ಇರಲಿದೆ. ಒಂದು ಕೊಠಡಿಯಲ್ಲಿ 14 ಟೇಬಲ್‌ಗಳನ್ನು ಹಾಕಲು ಅವಕಾಶವಿದೆ. ದೊಡ್ಡ ಕೊಠಡಿಗಳಿದ್ದರೆ ಹೆಚ್ಚಿನ ಟೇಬಲ್‌ಗಳನ್ನು ಹಾಕಲಾಗುತ್ತದೆ. ಅಂಚೆ ಮತದಾನವು ಈ ಬಾರಿ ಹೆಚ್ಚಾಗಿ ನಡೆದಿರುವುದರಿಂದ ಎಣಿಕೆಯು ನಿರಂತರವಾಗಿ ನಡೆಯುತ್ತಿರುತ್ತದೆ. ಕೊನೆಯ ರೌಂಡ್ ಮುಂಚಿತವಾಗಿ ಅಂಚೆ ಮತದಾನದ ಎಣಿಕೆಯನ್ನು ಮುಗಿಸಲಾಗುತ್ತದೆ. ಈ ಬಾರಿ ಪ್ರತಿ ಕೊಠಡಿಯಲ್ಲೂ ಸಿಸಿ ಕ್ಯಾಮೆರಾ ಅಳವಡಿಸಲಾಗಿದೆ. ಅದರ ಜೊತೆಗೆ ಚುನಾವಣಾಧಿಕಾರಿ ನಿರ್ದೇಶನದ ಮೇರೆಗೆ ಇನ್ನಿತರ ಕಡೆ ಸಿಸಿ ಕ್ಯಾಮೆರಾ ಹಾಗೂ ವೀಡಿಯೋಗ್ರಾಫಿ ವ್ಯವಸ್ಥೆ ಕಲ್ಪಿಸಲಾಗುತ್ತದೆ ಎಂದು ಹೇಳಿದರು. ಮತ ಎಣಿಕೆ ಕೇಂದ್ರದಲ್ಲಿ ವೀಕ್ಷಕರಿಗಾಗಿ ಒಂದು ಕೊಠಡಿ, ಚುನಾವಣಾಧಿಕಾರಿಗಾಗಿ ಒಂದು ಕೊಠಡಿ ಹಾಗೂ ಮಾಧ್ಯಮದವರಿಗಾಗಿ ಮಾಧ್ಯಮ ಕೇಂದ್ರದ ವ್ಯವಸ್ಥೆ ಮಾಡಲಾಗಿದೆ. ಮಾಧ್ಯಮದವರಿಗೆ ಮಾಧ್ಯಮ ಕೇಂದ್ರದಲ್ಲಿ ಮಾತ್ರ ಮೊಬೈಲ್ ಬಳಸಲು ಅವಕಾಶ ಇರುತ್ತದೆ. ಹೊರಗಡೆ ಮೊಬೈಲ್ ಬಳಸಲು ಅವಕಾಶ ಇಲ್ಲ ಎಂದರು.

ಉದಯವಾಹಿನಿ ಚಿತ್ರ

ಪೋಸ್ಟಲ್ ಬ್ಯಾಲೆಟ್‌ಗಳ ಎಣಿಕೆ ಪ್ರಾರಂಭ

ಮೌಂಟ್ ಕಾರ್ಮೆಲ್ ಕಾಲೇಜು, ಅರಮನೆ ರಸ್ತೆ, ವಸಂತನಗರ, ಬೆಂಗಳೂರು	
ವಿಧಾನಸಭಾ ಕ್ಷೇತ್ರಗಳ ಸಂಖ್ಯೆ	8
ಮತಗಟ್ಟೆಗಳ ಸಂಖ್ಯೆ	2125
ಮತ ಎಣಿಕೆ ಕೊಠಡಿಗಳ ಸಂಖ್ಯೆ	10
ಒಟ್ಟು ಟೇಬಲ್ ಗಳ ಸಂಖ್ಯೆ	135
ಒಟ್ಟು ಸಿಬ್ಬಂದಿಯ ಸಂಖ್ಯೆ	416

ಬೆಂಗಳೂರು ದಕ್ಷಿಣ: ಎಸ್.ಎಸ್.ಎಂ.ಆರ್.ವಿ ಕಾಲೇಜು, 9ನೇ ಬ್ಲಾಕ್, ಜಯನಗರ	
ವಿಧಾನಸಭಾ ಕ್ಷೇತ್ರಗಳ ಸಂಖ್ಯೆ	8
ಮತಗಟ್ಟೆಗಳ ಸಂಖ್ಯೆ	2120
ಮತ ಎಣಿಕೆ ಕೊಠಡಿಗಳ ಸಂಖ್ಯೆ	9
ಒಟ್ಟು ಟೇಬಲ್ ಗಳ ಸಂಖ್ಯೆ	118
ಒಟ್ಟು ಸಿಬ್ಬಂದಿಯ ಸಂಖ್ಯೆ	354

ಬೆಂಗಳೂರು ಉತ್ತರ: ಸೆಂಟ್ ಜೋಸೆಫ್ ಕಾಲೇಜು, ಮಲ್ಯ ರಸ್ತೆ, ಬೆಂಗಳೂರು	
ವಿಧಾನಸಭಾ ಕ್ಷೇತ್ರಗಳ ಸಂಖ್ಯೆ	8
ಮತಗಟ್ಟೆಗಳ ಸಂಖ್ಯೆ	2911
ಮತ ಎಣಿಕೆ ಕೊಠಡಿಗಳ ಸಂಖ್ಯೆ	19
ಒಟ್ಟು ಟೇಬಲ್ ಗಳ ಸಂಖ್ಯೆ	130
ಒಟ್ಟು ಸಿಬ್ಬಂದಿಯ ಸಂಖ್ಯೆ	390

ಮತ ಎಣಿಕೆ ಕಾರ್ಯದಲ್ಲಿ ಕಾರ್ಯ ನಿರ್ವಹಿಸುವ ಯಾವುದೇ ಸಿಬ್ಬಂದಿ ಎಣಿಕೆ ಕೇಂದ್ರದಲ್ಲಿ ಮೊಬೈಲ್/ಬ್ಯಾಗ್ ತರುವ ಹಾಗಿಲ್ಲ. ಏಜೆಂಟ್‌ಗಳು ಕೂಡ ತರಲು ಅವಕಾಶವಿಲ್ಲ. ಎಣಿಕೆ ಕಾರ್ಯಕ್ಕೆ ನಿಯೋಜನೆ ಮಾಡಿರುವ ಸಿಬ್ಬಂದಿಗೆ ಮತ ಎಣಿಕೆ ಕೇಂದ್ರಕ್ಕೆ ಬರುವವರೆಗೆ ಯಾವ ಟೇಬಲ್‌ನಲ್ಲಿ ಕೂರಲಿದ್ದೇವೆ ಎಂಬುದು ತಿಳಿದಿರುವುದಿಲ್ಲ.

ಜೂನ್ 4ರ ಬೆಳಗ್ಗೆ ಬಂದ ಬಳಿಕ ತಿಳಿಯಲಿದೆ. ಬೆಳಗ್ಗೆ 7.45ಕ್ಕೆ ಸ್ಟ್ರಾಂಗ್ ರೂಂಗಳನ್ನು ತೆರೆಯಲಾಗುತ್ತದೆ. 8 ಗಂಟೆಗೆ ಪೋಸ್ಟಲ್ ಬ್ಯಾಲೆಟ್‌ಗಳ ಎಣಿಕೆ ಪ್ರಾರಂಭವಾದ ಬಳಿಕ ಇವಿಎಂ ಎಣಿಕೆ ಆರಂಭವಾಗಲಿದೆ ಎಂದು ತಿಳಿಸಿದರು.

ಕೃಷ್ಣಾರೆಡ್ಡಿಯವರ ಜ್ಞಾಪಕಾರ್ಥವಾಗಿ ರಕ್ತದಾನ ಶಿಬಿರ

• ಉದಯವಾಹಿನಿ, ಮಹದೇವಪುರ

ವಿದ್ಯಾರ್ಥಿಗಳನ್ನು ಸಮಾಜದ ಪ್ರಮುಖ ಆಸ್ತಿ ಮಾಡುವ ಕನಸು ಕಂಡ ಹಿರಿಯ ಶಿಕ್ಷಕ ದಿ. ಎಸ್. ಕೃಷ್ಣಾರೆಡ್ಡಿ ಎಂದು ಸ್ನೇಹ ಮಿಲನ ಹಳೇ ವಿದ್ಯಾರ್ಥಿಗಳ ಸಂಘದ ಅಧ್ಯಕ್ಷ ಮಂಜುನಾಥ್ ತಿಳಿಸಿದರು.

ಕ್ಷೇತ್ರದ ವರ್ತೂರು ಸಮೀಪದ ಗಂಜೂರು ಸರ್ಕಾರಿ ಪ್ರೌಢ ಶಾಲೆಯಲ್ಲಿ ನಿವೃತ್ತ ದೈಹಿಕ ಶಿಕ್ಷಕರಾಗಿದ ದಿ. ಎಸ್. ಕೃಷ್ಣಾರೆಡ್ಡಿಯವರ ಜ್ಞಾಪಕಾರ್ಥವಾಗಿ ರಕ್ತದಾನ ಶಿಬಿರ ಹಾಗೂ ಅವರಿಗೆ ಪುಷ್ಪನಮನ ಸಲ್ಲಿಸಿ ಗೌರವಿಸುವ ಕಾರ್ಯಕ್ರಮದಲ್ಲಿ ಮಾತನಾಡಿದರು.

ನಮ್ಮ ಭಾಗದಲ್ಲಿ ಸಾವಿರಾರು ವಿದ್ಯಾರ್ಥಿಗಳಿಗೆ ವಿದ್ಯೆ ಕಲಿಸುವುದರ ಜೊತೆಗೆ ಕ್ರೀಡಾ ಕ್ಷೇತ್ರದಲ್ಲಿ ಹೆಚ್ಚಿನ ಆಸಕ್ತಿ ಮೂಡುವಂತೆ ಮಾಡಿ, ಸಮಾಜದಲ್ಲಿ ಇಲ್ಲಿನ ವಿದ್ಯಾರ್ಥಿಗಳ ಏಳಿಗೆಗಾಗಿ ಶ್ರಮಿಸುತ್ತಿದ ದಿಮಾಂತ ಶಿಕ್ಷಕಾಗಿದ್ದರು ಎಂದರು.

ಶಿಕ್ಷಣ ಕ್ಷೇತ್ರದಲ್ಲಿ ಹಾಗೂ ಶಾಲಾ ಅಭಿವೃದ್ಧಿಗಾಗಿ ಶ್ರಮಿಸಿದವರಲ್ಲಿ ಕೃಷ್ಣಾರೆಡ್ಡಿಯವರ ಸೇವೆ ಯಾರು ಮರೆಯುವಂತಿಲ್ಲ ಎಂದು ಶಿಕ್ಷಕ ಮುರಳಿಕೃಷ್ಣ ನುಡಿದರು.

ಜೀವನದಲ್ಲಿ ಗುರಿ ಜೊತೆಗೆ ಗುರುವಿನ ಆಶೀರ್ವಾದ ಅಗತ್ಯ ಅಂತಹ ಗುರುವಿಗೆ ಗೌರವಿಸುವ ಪರಿಪಾಠ ಹಾಗೂ ಹಳೆಯ ವಿದ್ಯಾರ್ಥಿಗಳ ಸಂಘದಿಂದ ಸಮಾಜದ ಉನ್ನತಿ ಕಾರ್ಯಗಳು ಹೆಚ್ಚಲ್ಲೆಂದು ಕೃಷ್ಣರೆಡ್ಡಿ ಪುತ್ರಿ ಭೂಮಿಕ ಹೇಳಿದರು.

ಈ ಸಂದರ್ಭದಲ್ಲಿ ಕೃಷ್ಣರೆಡ್ಡಿ ಕುಟುಂಬಸ್ಥರಾದ ಮೌನೇಶ್, ಪುಷ್ಪ, ಶಿಕ್ಷಕರಾದ ಸೌಭಾಗ್ಯಮ್ಮ, ಪರಮೇಶ್ವರ್, ವಿದ್ಯಾರ್ಥಿಗಳ ಸಂಘದ ಉಪಾಧ್ಯಕ್ಷ ಸಂಪತ್, ಸ್ವರೂಪ್, ಲೋಚನ್, ನಯನ್ ಕುಮಾರ್, ಕುಮಾರ, ಪೂರ್ಣಚಂದ್ರ, ಅರುಣ್ ಇದ್ದರೂ.

ಉದಯವಾಹಿನಿ ಚಿತ್ರ

ಮಳೆಗೆ ರಾಜ್ಯದಲ್ಲಿ ಅವಾಂತರ ಸೃಷ್ಟಿ, ಹಲವೆಡೆ ಮನೆಗಳಿಗೆ ನುಗ್ಗಿದ ನೀರು!

• ಉದಯವಾಹಿನಿ, ಬೆಂಗಳೂರು

ಕೇರಳಕ್ಕೆ ಮುಂಗಾರು ಮಾರುತಗಳು ಅಪ್ಪಳಿಸಿದ ಬೆನ್ನಲ್ಲೇ ರಾಜ್ಯ ರಾಜಧಾನಿ ಬೆಂಗಳೂರಿನಲ್ಲಿ ಮಳೆ ಆರ್ಭಟ ಶುರುವಾಗಿದ್ದು, ಶನಿವಾರ ಸುರಿದ ಭಾರೀ ಮಳೆಗೆ ನಗರದ ತಗ್ಗುಪ್ರದೇಶಗಳು ಜಲಾವೃತಗೊಂಡು, ಮನೆಗಳಿಗೆ ನೀರು ನುಗ್ಗಿ ಅವಾಂತರ ಸೃಷ್ಟಿಯಾಗಿತ

ಐತಿಹಾಸಿಕ ಸ್ಮಾರಕಗಳ ತ್ರೀಡಿ ಮ್ಯಾಪಿಂಗ್, ಲೇಸರ್ ಸ್ಕ್ಯಾನಿಂಗ್

ರಾಜ್ಯ ಸರಕಾರವು ಕರ್ನಾಟಕ ಡಿಜಿಟಲ್ ಹೆರಿಟೇಜ್ ಯೋಜನೆಯನ್ನು ಜಾರಿಗೊಳಿಸಿದ್ದು ಇದರಡಿಯಲ್ಲಿ ಈ ಕಾರ್ಯ ಸಾಗುತ್ತಿದೆ

• ಉದಯವಾಹಿನಿ ಮೈಸೂರು

ಇದೊಂದು ಪೈಲೆಟ್ ಯೋಜನೆ

ರಾಜ್ಯದ ಐತಿಹಾಸಿಕ ಸ್ಮಾರಕಗಳ ಭವಿಷ್ಯವನ್ನು ದೃಷ್ಟಿಯಲ್ಲಿ ಇಟ್ಟುಕೊಂಡು ರಾಜ್ಯ ಪುರಾತತ್ವ, ವಸ್ತು ಸಂಗ್ರಹಾಲಯ ಮತ್ತು ಪಾರಂಪರಿಕ ಇಲಾಖೆಯು ರಾಜ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಮಂಡಳಿಯ ಸಹಯೋಗದಲ್ಲಿ ತನ್ನ ವ್ಯಾಪ್ತಿಯಲ್ಲಿ ಬರುವ ಸ್ಮಾರಕ ಗಳು, ದೇವಾಲಯಗಳನ್ನು ತ್ರೀಡಿ ಮ್ಯಾಪಿಂಗ್ ಹಾಗೂ ಲೇಸರ್ ಸ್ಕ್ಯಾನಿಂಗ್ ಮಾಡಿಸುತ್ತಿದೆ.

ರಾಜ್ಯದಲ್ಲಿ ಪುರಾತತ್ವ ಇಲಾಖೆಯ ವ್ಯಾಪ್ತಿಗೆ ಸುಮಾರು 834 ಸ್ಮಾರಕಗಳು ಬರುತ್ತವೆ. ಅವುಗಳಲ್ಲಿ ಮೈಸೂರು ವಿಭಾಗ-125, ಬೆಂಗಳೂರು ವಿಭಾಗ- 105, ಬೆಳಗಾವಿ ವಿಭಾಗ-365 ಹಾಗೂ ಕಲುಬುರಗಿ ವಿಭಾಗ- 249 ಸ್ಮಾರಕಗಳಿದ್ದು ಇವುಗಳಲ್ಲಿ ಬಹುತೇಕ ಸ್ಮಾರಕಗಳ ತ್ರೀಡಿ ಮ್ಯಾಪಿಂಗ್ ಹಾಗೂ ಲೇಸರ್ ಸ್ಕ್ಯಾನಿಂಗ್ ಕಾರ್ಯ ಮುಗಿದಿದೆ.

ಮೈಸೂರು ಹಾಗೂ ಬೆಂಗಳೂರು ವಿಭಾಗದಲ್ಲಿ ಕೆಲವು ಸ್ಮಾರಕಗಳು ಮಾತ್ರ ಬಾಕಿ ಇದ್ದು, ಅದು ಸ್ವಲ್ಪ ದಿನದಲ್ಲಿ ಪೂರ್ಣ ಗೊಳ್ಳಲಿದೆ. ಅರಮನೆ, ದೇವಾಲಯ, ಕೋಟೆಗಳು ಮತ್ತಿತರ ಕಟ್ಟಡಗಳು ಹಲವು ಶತಮಾನಗಳಷ್ಟು ಹಿಂದಿನವಾಗಿವೆ. ಪ್ರಕೃತಿಯ ಹೊಡೆತಕ್ಕೆ ಹಾಗೂ ಸಮಯವಾದ್ದರಿಂದ ಈ ಸ್ಮಾರಕಗಳು ಶಿಥಿಲಾವಸ್ಥೆ ತಲುಪಿವೆ. ಆದ್ದರಿಂದ ಈ ಸ್ಮಾರಕಗಳನ್ನು ಮುಂದಿನ ಪೀಳಿಗೆಯು ನೋಡಬೇಕು. ನಮ್ಮ ರಾಜ್ಯದ ಗತ ವೈಭವನನ್ನು ಕಣ್ಣಾರೆ ಕಂಡು ಹೆಮ್ಮೆ ಪಡಬೇಕು. ನಮ್ಮ ನಾಡು ಹೀಗಿತ್ತು. ವಾಸ್ತಶಿಲ್ಪ, ಕುಸುರಿ ಕೆತ್ತೆನೆಗಳು ಮತ್ತು ಕಟ್ಟಡಗಳ ನಿರ್ಮಾಣ ಶೈಲಿ ಬಗ್ಗೆ ಅವರಿಗೆ ಅರಿವು ಉಂಟಾಗಬೇಕು ಎಂದು ರಾಜ್ಯ ಸರಕಾರವು ಕರ್ನಾಟಕ ಡಿಜಿಟಲ್ ಹೆರಿಟೇಜ್ ಯೋಜನೆಯನ್ನು ಜಾರಿಗೊಳಿಸಿದ್ದು ಇದರಡಿಯಲ್ಲಿ ಈ ಕಾರ್ಯ ಸಾಗುತ್ತಿದೆ. ಪ್ರಸ್ತುತ ಲಭ್ಯವಿರುವ ಆಧುನಿಕ ತಂತ್ರಜ್ಞಾನ ವನ್ನು ಬಳಕೆ ಮಾಡಿಕೊಂಡು


ಉದಯವಾಹಿನಿ ಚಿತ್ರ

ಸ್ಮಾರಕಗಳನ್ನು ತ್ರೀಡಿ ಮ್ಯಾಪಿಂಗ್ ಹಾಗೂ ಲೇಸರ್ ಸ್ಕ್ಯಾನಿಂಗ್ ಮಾಡಲಾಗುತ್ತಿದೆ. ಸ್ಮಾರಕಗಳ ಶೈಲಿ, ಅವುಗಳ ಅಳತೆ, ಆಯಾ, ತಳಪಾಯದ ನಿರ್ಮಾಣ ವಿನ್ಯಾಸ, ಕಟ್ಟಡಕ್ಕೆ ಬಳಕೆಯಾಗಿರುವ ಸಾಮಗ್ರಿಗಳು ಅಂದರೆ ಮಣ್ಣು, ಕಲ್ಲು, ಇಟ್ಟಿಗೆ, ಗಾರೆ, ಸ್ಮಾರಕವು ಯಾವ ರಾಜ-ಪಾಳೇಗಾರರರ ಕಾಲದಲ್ಲಿ ನಿರ್ಮಾಣವಾಯಿತು, ಅವರ ಅವಧಿ, ಆ ವಂಶದ ಪರಂಪರೆ, ಪರಿಸರದ ಐತಿಹಾಸಿಕ ವಿಷಯಗಳನ್ನು ಸಂಗ್ರಹಿಸಲಾಗುತ್ತಿದೆ. ಒಟ್ಟು 33 ಪ್ರಾಥಮಿಕ ದತ್ತಾಂಶಗಳನ್ನು ಕಲೆ ಹಾಕಿ, ಬೆಂಗಳೂರಿನಲ್ಲಿ ಇರುವ ಪ್ರಯೋಗಾಲಯಕ್ಕೆ ತಗೆದುಕೊಂಡು ಹೋಗಿ ವಿಶ್ಲೇಷಿಸಿ, ಅದಕ್ಕೊಂದು ಡಿಜಿಟಲ್ ನಮೂನೆಯನ್ನು ಸಿದ್ಧಗೊಳಿಸಲಾಗುತ್ತದೆ.

ತ್ರೀಡಿ ಮಾಡೆಲಿಂಗ್ ಮೂಲಕ ಪ್ರಾತ್ಯಕ್ಷಿಕೆ

ಆಧುನಿಕ ಕಟ್ಟಡಗಳನ್ನು ನಿರ್ಮಿಸುವಾಗ ವಾಸ್ತು ಶಿಲ್ಪಿಗಳು ತ್ರೀಡಿ ಮಾಡೆಲಿಂಗ್ ಮೂಲಕ ಪ್ರಾತ್ಯಕ್ಷಿಕೆಯನ್ನು ತೋರಿಸಲಾಗುತ್ತದೆ. ಅದೇ ರೀತಿ ಈ ಸ್ಮಾರಕಗಳಿಗೆ ಭವಿಷ್ಯದಲ್ಲಿ ಧಕ್ಕೆ ಉಂಟಾದ ಸಂದರ್ಭದಲ್ಲಿ ಅವುಗಳನ್ನು ಪುನರುಜ್ಜೀವಗೊಳಿಸಲು ಆ ಸ್ಮಾರಕದ ಶೈಲಿ ಮೊದಲು ಹೇಗಿತ್ತು ಎನ್ನುವ ವಿಚಾರಗಳನ್ನು ಕಲೆ ಹಾಕಬೇಕಾದರೆ ಹಲವು ತಿಂಗಳುಗಳೇ ಬೇಕಾಗುತ್ತದೆ. ಆದರೆ ಇಲಾಖೆ ಮಾಡಿರುವ ಈ ಕಾರ್ಯದಿಂದ ಕುಳಿತಲ್ಲೇ ಎಲ್ಲಾ ಮಾಹಿತಿ ದೊರೆಯುತ್ತದೆ. ಸ್ಮಾರಕಗಳ ನವೀಕರಣ, ಪುನರುಜ್ಜೀವ ಕಾರ್ಯವೂ ಸುಗಮ ವಾಗುತ್ತದೆ.

ದೇಶದಲ್ಲಿ ಸ್ಮಾರಕಗಳನ್ನು ತ್ರೀಡಿ ಮ್ಯಾಪಿಂಗ್ ಹಾಗೂ ಲೇಸರ್ ಸ್ಕ್ಯಾನಿಂಗ್ ಮಾಡುತ್ತಿರುವುದು ಕರ್ನಾಟಕದಲ್ಲೇ ಮೊದಲು. ಇದೊಂದು ಪೈಲೆಟ್ ಯೋಜನೆಯಾಗಿದ್ದು, ಮೊದಲಿಗೆ ಡಿಜಿಟಲ್ ರೂಪದಲ್ಲಿ ಸಂಪೂರ್ಣ ವಿವರಗಳನ್ನು ಒಳಗೊಂಡ 10 ಸ್ಮಾರಕಗಳ ಎಐ ತ್ರೀಡಿ ಮಾಡೆಲ್ ಅನ್ನು ವೆಬ್‌ಸೈಟ್‌ನಲ್ಲಿ ವಾಕ್ ತ್ರೋಗೆ ಬಿಡುಗಡೆ ಮಾಡಲಾಗುತ್ತದೆ. ಇದರ ಪ್ರತಿಕ್ರಿಯೆಯನ್ನು ನೋಡಿಕೊಂಡು ಉಳಿದ ಸ್ಮಾರಕಗಳ ವಿವರಗಳನ್ನು ವೆಬ್‌ಸೈಟ್‌ಗೆ ಭರ್ತಿ ಮಾಡಲಾಗುತ್ತದೆ

-ಎ.ದೇವರಾಜು, ರಾಜ್ಯ ಪುರಾತತ್ವ ಮತ್ತು ವಸ್ತು ಸಂಗ್ರಹಾಲಯ ಇಲಾಖೆಯ ಆಯುಕ್ತ

ಗ್ರಾಮೀಣ ಸರ್ಕಾರಿ ಶಾಲೆಗಳನ್ನು ಉಳಿಸಿ

• ಉದಯವಾಹಿನಿ, ಶಿಡ್ಲಘಟ್ಟ

ಸರ್ಕಾರಿ ಶಾಲೆಗಳು ಬೆಳೆಯಬೇಕು, ಸರ್ಕಾರಿ ಶಾಲೆಯ ಮಕ್ಕಳಿಗೆ ಎಲ್ಲಾ ಸೌಲಭ್ಯಗಳು ದೊರೆಯಬೇಕು ಅವರು ಬೆಳೆದು ದೊಡ್ಡವರಾಗಿ ದೊಡ್ಡ ಹುದ್ದೆಗಳನ್ನು ಅಲಂಕರಿಸಬೇಕು ಎಂದು ಮಳಮಾಚನಹಳ್ಳಿ ಗ್ರಾಮದ ಯುವ ಮುಖಂಡ ರವಿ ಬಿ ಗೌಡರವರು ತಿಳಿಸಿದರು.

ತಾಲ್ಲೂಕಿನ ಮಳಮಾಚನಹಳ್ಳಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶಾಲಾ ಪ್ರಾರಂಭೋತ್ಸವವು ಬಹಳ ಸಡಗರ ಸಂಭ್ರಮದಿಂದ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಮಾತನಾಡಿ, ಇಂದಿನ ಮಕ್ಕಳೇ ಮುಂದಿನ ಪ್ರಜೆಗಳು, ಈ ಮಕ್ಕಳ ತಂದೆ ತಾಯಿಯರನ್ನು ಕರೆದು ಮಕ್ಕಳ ವಿದ್ಯಾಭ್ಯಾಸದ ಬಗ್ಗೆ ಅರಿವು ಮೂಡಿಸಬೇಕು.

ಸರ್ಕಾರಿ ಶಾಲೆಗಳು ಯಾವುದೇ ಖಾಸಗಿ ಶಾಲೆಗಳಿಗಿಂತ ಕಡಿಮೆ ಇಲ್ಲ ಎಂಬಂತೆ ಎಲ್ಲಾ ರೀತಿಯ ಸೌಲಭ್ಯಗಳನ್ನು ಸರ್ಕಾರಿ ಶಾಲೆಗಳಲ್ಲಿ ಕಲ್ಪಿಸಲಾಗುತ್ತಿದ್ದು, ಮಳಮಾಚನಹಳ್ಳಿ ಹಾಗೂ ಸುತ್ತಮುತ್ತಲಿನ ಗ್ರಾಮದ ಮಕ್ಕಳು ನಮ್ಮ ಸರ್ಕಾರಿ ಶಾಲೆಯಲ್ಲಿ ದಾಖಲಾಗಿ ಗುಣಮಟ್ಟದ ಶಿಕ್ಷಣ

ಉದಯವಾಹಿನಿ ಚಿತ್ರ

ನೋಟ್ ಪುಸ್ತಕ ವಿತರಣೆ

ಶಾಲೆಯ ದ್ವಾರದಲ್ಲಿ ತೆಂಗಿನ ಗರಿಯ ಚಪ್ಪರಹಾಕಿ ತಳಿರು ತೋರಣಗಳಿಂದ ಶೃಂಗರಿಸಲಾಗಿದ್ದು, ಶಾಲೆಗೆ ಆಗಮಿಸಿದ ವಿದ್ಯಾರ್ಥಿಗಳಿಗೆ ಗುಲಾಬಿ ಹೂ ನೀಡಿ ಸ್ವಾಗತಿಸಿ, ನೋಟ್ ಪುಸ್ತಕ ಲೇಖನ ಸಾಮಗ್ರಿಗಳು ಹಾಗು ಚಾಕಲೇಟ್ ನೀಡುವ ಮೂಲಕ ಬರಮಾಡಿಕೊಳ್ಳಲಾಯಿತು.

ವನ್ನು ಪಡೆದು ಉತ್ತಮ ಫಲಿತಾಂಶದೊಂದಿಗೆ ಉತ್ತೀರ್ಣರಾಗಬೇಕೆಂದು ತಿಳಿಸಿದರು.

ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಶೈಲ ಮಾತನಾಡಿ ಪ್ರತಿಯೊಬ್ಬ ವ್ಯಕ್ತಿಗೂ ಶಿಕ್ಷಣವೆಂಬುದು ಬಹಳ ಮಹತ್ವದ ಪಾತ್ರವಹಿಸುತ್ತದೆ. ಅದರಂತೆ ಸರ್ಕಾರಿ ಶಾಲೆಯಲ್ಲಿ ವಿದ್ಯಾಭ್ಯಾಸ ಮಾಡುವ ಮಕ್ಕಳಲ್ಲಿ ಬಡವ ಶ್ರೀಮಂತ ಎಂಬ ಭೇದ ಭಾವ ವಿಲ್ಲದೆ ಎಲ್ಲರೂ ಒಗ್ಗಟ್ಟಾಗಿ ಬೆಳೆಯುತ್ತಾರೆ. ಇಲ್ಲಿನ ಮಕ್ಕಳಲ್ಲಿ ಮಾನವೀಯ ಮೌಲ್ಯಗಳು ಹೆಚ್ಚಾಗಿ ಬೆಳೆಯುತ್ತವೆ. ಸ್ನಾತಕೋತ್ತರ ಪದವಿ ಹಾಗೂ ಇನ್ನಿತರೆ ಪದವಿಗಳಿಗೆ, ಉದ್ಯೋಗಗಳನ್ನು ಪಡೆಯಲು ಸರ್ಕಾರಿ ಶಾಲೆಯಲ್ಲಿ ಮಾಡಿದ ವಿದ್ಯಾಭ್ಯಾಸ ಬಹಳಷ್ಟು ಅನುಕೂಲವಾಗುತ್ತದೆ. ಎಂದರಲ್ಲದೆ ತನ್ನ ವಿದ್ಯಾಭ್ಯಾಸದ ಜೀವನವನ್ನು ಎಲ್ಲಾ ಸರ್ಕಾರಿ ಶಾಲಾ ಕಾಲೇಜಿನಲ್ಲಿ ಮುಗಿಸಿರುವುದಾಗಿ ತಿಳಿಸಿದರು.

ಶಾಲಾ ಎಸ್‌ಡಿಎಂಸಿ ಅಧ್ಯಕ್ಷ ಮುನೇಗೌಡ, ಶಾಲೆಯ ಪ್ರಭಾರಿ ಮುಖ್ಯ ಶಿಕ್ಷಕ ಮಂಜುನಾಥ್, ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷ ರಾಮಚಂದ್ರಚಾರಿ, ಕಾರ್ಯದರ್ಶಿ ರಾಜಣ್ಣ, ಗ್ರಾಮಸ್ಥರಾದ ಮುನಿಶಾಮಿಗೌಡ, ಸುಮಂತ್, ಮನೋಹರ್ ಶಾಲಾ ಶಿಕ್ಷಕಾದ ರವಿ ಎನ್, ಮಧುಸೂಧನ್, ಮಂಜುಳಾ, ಸುಧಾ, ವೀಣಾ ಸೇರಿದಂತೆ ಮತ್ತಿತರರು ಇದ್ದರು.

ರೈತನ ಕೃಷಿ ಪ್ರೀತಿ: ಬಾಳೆ, ಅಡಿಕೆ ತಂದಿತು ಸಿರಿ

• ಉದಯವಾಹಿನಿ, ಗೌರಿಬಿದನೂರು

ಜಮೀನಿನ ಯಾವ ಭಾಗದಲ್ಲಿ ನೋಡಿದರೂ ಕಂಗೊಳಿಸುವ ಹಸಿರು. ತಂಪಾದ ವಾತಾವರಣ. ಹುಲುಸಾಗಿ ಬೆಳೆದ ಅಡಿಕೆ ಮರಗಳು-ಇದು ತಾಲ್ಲೂಕಿನ ಕುರೂಡಿ ಗ್ರಾಮದ ರೈತ ಜಗದೀಶ್ ಅವರ ತೋಟದಲ್ಲಿ ಕಾಣುವ ನೋಟ. ಜಗದೀಶ್ ಅವರ ತೋಟವನ್ನು ಹೊಕ್ಕಿದರೆ ಬಯಲು ಸೀಮೆಯಲ್ಲೊಂದು ಮಲೆನಾಡಿನ ತೋಟದಂತೆ ಭಾಸವಾಗುತ್ತದೆ. ಕೃಷಿ ಇಲಾಖೆ ಹಾಗೂ ತೋಟಗಾರಿಕೆ ಇಲಾಖೆಯ ಸೌಲಭ್ಯಗಳನ್ನು ಸದ್ಬಳಕೆ ಮಾಡಿಕೊಂಡು ಕೃಷಿಯಲ್ಲಿಯೇ ಆನಂದಮಯ ಜೀವನ ಸಾಗಿಸುತ್ತಿದ್ದಾರೆ ಜಗದೀಶ್.

ಉದಯವಾಹಿನಿ ಚಿತ್ರ

ಕೃಷಿಯಲ್ಲಿಯೇ ಆನಂದಮಯ ಜೀವನ

ತಮಗಿರುವ 20 ಎಕರೆ ಜಮೀನಿನಲ್ಲಿ 12 ಎಕರೆಯಲ್ಲಿ ಅಡಿಕೆ ಕೃಷಿ ಮಾಡಿ ಯಶಸ್ಸು ಕಂಡಿದ್ದಾರೆ. 4 ಎಕರೆಯಲ್ಲಿ ಏಲಕ್ಕಿ ಬಾಳೆ, ಒಂದು ಎಕರೆಯಲ್ಲಿ ಪಚ್ಚ ಬಾಳೆಯನ್ನು ಅಂಗಾಂಶ ಕಸಿ ಮಾಡಿ ಬೆಳೆದಿದ್ದಾರೆ. ಇದರಿಂದ ಬಾಳೆಯಲ್ಲಿ ದೊಡ್ಡಗಾತ್ರದ ಗೊನೆಗಳು ತೊನೆದಾಡುತ್ತಿವೆ. ಬಾಳೆ ಮತ್ತು ಅಡಿಕೆ ವರ್ಷದ ಬೆಳೆಗಳಾಗಿರುವುದರಿಂದ ವರ್ಷದ ಕೊನೆಯಲ್ಲಿ ದೊಡ್ಡ ಮೊತ್ತದ ಆದಾಯವನ್ನು ನಿರೀಕ್ಷಿಸಬಹುದು. ಜೊತೆಗೆ 1.5 ಎಕರೆ ಜಮೀನಿನಲ್ಲಿ ಮೈಸೂರು ಬದನೆ ಬೆಳೆದಿದ್ದಾರೆ.

ಇದೂ ಉತ್ತಮ ಆದಾಯ ತಂದು ಕೊಡುತ್ತಿದೆ. ಎರಡು ಎಕರೆ ಮೆಣಸಿನ ಗಿಡಗಳನ್ನು ಬೆಳೆದಿದ್ದಾರೆ. ಇದರಿಂದ ಕಾಲ ಕಾಲಕ್ಕೆ ವ್ಯವಸಾಯದ ಖರ್ಚುಗಳ ಜೊತೆಗೆ ಸಂಸಾರದ ಖರ್ಚಿಗೆ ಯಾವುದೇ ತೊಂದರೆಯಾಗದೆ ನಿರ್ವಹಣೆ ಮಾಡಬಹುದು ಎನ್ನುತ್ತಾರೆ ರೈತ ಜಗದೀಶ್.

ಗುಣಮಟ್ಟದ ರಸಗೊಬ್ಬರ, ಬೀಜ ಪೂರೈಸಿ: ಜಿಲ್ಲಾಧಿಕಾರಿ

• ಉದಯವಾಹಿನಿ, ಮಡಿಕೇರಿ

ಜಿಲ್ಲೆಯಲ್ಲಿ ಮುಂಗಾರು ಮಳೆ ಸನ್ನಿಹಿತವಾಗಿದ್ದು, ರಸಗೊಬ್ಬರ ಪೂರೈಕೆಯಲ್ಲಿ ಯಾವುದೇ ರೀತಿಯ ವ್ಯತ್ಯಯವಾಗದಂತೆ ಗಮನಹರಿಸಬೇಕು ಎಂದು ಸಗಟು ಹಾಗೂ ಚಿಲ್ಲರೆ ರಸಗೊಬ್ಬರ ಮಾರಾಟಗಾರರಿಗೆ ಜಿಲ್ಲಾಧಿಕಾರಿ ವೆಂಕಟ್ ರಾಜಾ ಅವರು ತಾಕೀತು ಮಾಡಿದರು. ನಗರದ ಜಿಲ್ಲಾಧಿಕಾರಿ ಅವರ ಕಚೇರಿ ಸಭಾಂಗಣದಲ್ಲಿ ರಸಗೊಬ್ಬರ ಹಾಗೂ ಬಿತ್ತನೆ ಬೀಜ ಪೂರೈಕೆ, ವಿತರಣೆ, ದಾಸ್ತಾನು ಮತ್ತಿತರ ವಿಷಯ ಕುರಿತು ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಮುಂಗಾರು ವೇಳೆ ಗುಣಮಟ್ಟದ ರಸಗೊಬ್ಬರ ಹಾಗೂ ಬಿತ್ತನೆ ಬೀಜ ಪೂರೈಕೆಯನ್ನು ಸಮರ್ಪಕವಾಗಿ ನಿರ್ವಹಿಸಬೇಕು. ಕೃಷಿಕರಿಂದ ದೂರು ಕೇಳಿ ಬರದಂತೆ ಎಚ್ಚರವಹಿಸುವುದು ಪ್ರತಿಯೊಬ್ಬರ ಜವಾಬ್ದಾರಿ. ಆ ನಿಟ್ಟಿನಲ್ಲಿ ಜಿಲ್ಲಾಡಳಿತದೊಂದಿಗೆ ಸಹಕರಿಸಬೇಕು ಎಂದು ಅವರು ಹೇಳಿದರು.

ಈ ಬಾರಿ ಉತ್ತಮ ಮಳೆಯಾಗುವ ನಿರೀಕ್ಷೆ ಇದೆ. ಜಿಲ್ಲೆಗೆ ಬೇಕಿರುವ ರಸಗೊಬ್ಬರ ದಾಸ್ತಾನು ಮಾಡಿಕೊಂಡು ಕೃಷಿಕರಿಗೆ ಕಾಲಕಾಲಕ್ಕೆ ಪೂರೈಸಬೇಕು. ರಸಗೊಬ್ಬರ ದಾಸ್ತಾನು, ವಿತರಣೆ ಸಂಬಂಧ ಮಾಹಿತಿಯ ಪಟ್ಟಿಯನ್ನು ಪ್ರತಿನಿತ್ಯ ಪ್ರಕಟಿಸುವುದರ ಜೊತೆಗೆ ಮಾಧ್ಯಮಗಳಲ್ಲಿಯೂ ಬಿಡುಗಡೆ ಮಾಡಬೇಕು

ಉದಯವಾಹಿನಿ ಚಿತ್ರ

ಜಿಲ್ಲೆಯಲ್ಲಿ ಮೇ ತಿಂಗಳಲ್ಲಿ ಉತ್ತಮ ಮಳೆಯಾಗಿದ್ದು, ಜಿಲ್ಲೆಗೆ 80,946 ಮೆಟ್ರಿಕ್ ಟನ್ ರಸಗೊಬ್ಬರ ಬೇಡಿಕೆ ಇದೆ' ಎಂದು ಹೇಳಿದರು. ಜಿಲ್ಲೆಯಲ್ಲಿ ಯೂರಿಯಾ, ಡಿಎಪಿ, ಎಂಒಪಿ, ಕಾಂಪ್ಲೆಕ್ಸ್, ಎಸ್‌ಎಸ್‌ಪಿಗೆ ಬೇಡಿಕೆ ಇದ್ದು, ಈಗಾಗಲೇ 15,885 ಮೆಟ್ರಿಕ್ ಟನ್ ರಸಗೊಬ್ಬರ ಸರಬರಾಜು ಆಗಿದ್ದು, ಸಾಕಷ್ಟು ರಸಗೊಬ್ಬರ ದಾಸ್ತಾನು ಇದೆ

-ಸೋಮಸುಂದರ, ಕೃಷಿ ಇಲಾಖೆಯ ಜಂಟಿ ನಿರ್ದೇಶಕ

ಎಂದು ಅವರು ತಿಳಿಸಿದರು. ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ವರ್ಣಿತ್ ನೇಗಿ ಮಾತನಾಡಿ, 'ಕೃಷಿ ಇಲಾಖೆ ಅಧಿಕಾರಿಗಳು ರಸಗೊಬ್ಬರ ಹಾಗೂ ಬಿತ್ತನೆ ಬೀಜವನ್ನು ಸಮರ್ಪಕವಾಗಿ ಪೂರೈಸಬೇಕು. ಯಾವುದೇ ಕಾರಣಕ್ಕೂ ದೂರುಗಳು ಕೇಳಿಬರಬಾರದು ಎಂದರು.

ನರೇಗಾ: ಗರಿಷ್ಠ ಪ್ರಮಾಣದಲ್ಲಿ ಉದ್ಯೋಗ ನೀಡಲು ಶ್ರಮ

• ಉದಯವಾಹಿನಿ, ಚಾಮರಾಜನಗರ

ಬರಗಾಲದ ಸಂದರ್ಭದಲ್ಲಿ ಜಿಲ್ಲೆಯ ಗ್ರಾಮೀಣ ಭಾಗದ ಕೂಲಿ ಕಾರ್ಮಿಕರಿಗೆ ಜಿಲ್ಲಾ ಪಂಚಾಯಿತಿಯು ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ (ನರೇಗಾ) ಯೋಜನೆಯಡಿ ಗರಿಷ್ಠ ಪ್ರಮಾಣದಲ್ಲಿ ಉದ್ಯೋಗ ನೀಡಲು ಶ್ರಮಿಸಿದೆ. ಇದರಿಂದಾಗಿ ಏಪ್ರಿಲ್ ಮತ್ತು ಮೇ ತಿಂಗಳಲ್ಲಿ ಖಾತ್ರಿ ಯೋಜನೆಯಡಿ ನಿಗದಿತ ಗುರಿಗಿಂತಲೂ ಹೆಚ್ಚು ಮಾನವ ದಿನಗಳ ಸೃಷ್ಟಿಯಾಗಿದೆ.

ಎರಡು ತಿಂಗಳ ಅವಧಿಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ಜಿಲ್ಲೆಗೆ ನರೇಗಾ ಅಡಿ 4.19 ಲಕ್ಷ ಮಾನವ ದಿನಗಳ ಗುರಿ ನೀಡಿತ್ತು.

ಮೇ 31ರ ಹೊತ್ತಿಗೆ 4.99 ಲಕ್ಷ ಮಾನವ ದಿನಗಳಷ್ಟು ಕೆಲಸ ಮಾಡಲಾಗಿದೆ. ಶೇಕಡವಾರು ಲೆಕ್ಕಾಚಾರದಲ್ಲಿ 119.29ರಷ್ಟು ಸಾಧನೆಯಾಗಿದೆ.

ಜಿಲ್ಲೆಯಲ್ಲಿ 2.22 ಲಕ್ಷ ಕುಟುಂಬಗಳು

ಉದಯವಾಹಿನಿ ಚಿತ್ರ

ಕಾಮಗಾರಿಗೆ ಒತ್ತು

ಜಲಸಂರಕ್ಷಣೆ ಕಾಮಗಾರಿಗೆ ಒತ್ತು: ಈ ವರ್ಷದ ಬೇಸಿಗೆಯಲ್ಲಿ ಜಿಲ್ಲೆಯಾದ್ಯಂತ ಜಲಸಂರಕ್ಷಣೆ ಕಾಮಗಾರಿಗೆ ಒತ್ತು ನೀಡಲಾಗಿದೆ.

ಉದ್ಯೋಗ ಕಾರ್ಡ್ ಹೊಂದಿವೆ. ಎರಡು ತಿಂಗಳ ಅವಧಿಯಲ್ಲಿ 29,197 ಕುಟುಂಬಗಳ 43,585 ಕಾರ್ಮಿಕರಿಗೆ ಖಾತ್ರಿ ಉದ್ಯೋಗ ಸಿಕ್ಕಿದೆ. ಕಳೆದ ವರ್ಷ ನರೇಗಾ ಅಡಿಯಲ್ಲಿ ಪ್ರತಿ ದಿನ 316 ಕೂಲಿ ಸಿಗುತ್ತಿತ್ತು. ಈ ವರ್ಷ

ಕೆರೆಗಳ ಹೂಳು ತೆಗೆಯುವುದು, ಬದುಗಳ ನಿರ್ಮಾಣ, ಕಾಲುವೆಗಳ ಪುನಶ್ಚೇತನ, ಕೊಳವೆ ಬಾವಿ ಮರುಪೂರಣ ವ್ಯವಸ್ಥೆ, ಚೆಕ್ ಡ್ಯಾಂ ಹೂಳು ತೆಗೆಯುವಂತಹ ಕಾಮಗಾರಿಗಳಿಗೆ ಆದ್ಯತೆ ನೀಡಲಾಗಿದೆ. ಶಾಲೆಗಳ ಅಭಿವೃದ್ಧಿ ಕೆಲಸಗಳನ್ನೂ ಕೈಗೆತ್ತಿಕೊಳ್ಳಲಾಗಿದೆ'

-ಆನಂದ್ ಪ್ರಕಾಶ್ ಮೀನಾ, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ

ಆದು 349ಕ್ಕೆ ಏರಿಕೆಯಾಗಿದೆ. ಹಾಗಾಗಿ, ಕಾರ್ಮಿಕರ ಭಾಗವಹಿಸುವಿಕೆ ಹೆಚ್ಚಾಗಿದೆ. ಆದರಲ್ಲೂ ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುತ್ತಿದ್ದಾರೆ ಎಂದು ಜಿಲ್ಲಾ ಪಂಚಾಯಿತಿ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

ಅತ್ತಿಗೆ ಜೊತೆಗಿನ ಅಕ್ರಮಕ್ಕೆ ಅಣ್ಣನನ್ನೇ ಚಾಕುವಿನಿಂದ ಇರಿದು ಹತ್ಯೆಗೈದ ತಮ್ಮ

• ಉದಯವಾಹಿನಿ, ಚಾಮರಾಜನಗರ

ಅತ್ತಿಗೆಯ ಜೊತೆಗೆ ಅಕ್ರಮ ಸಂಬಂಧ ಹೊಂದಿದ್ದಂತ ತಮ್ಮನನ್ನು, ಅಣ್ಣ ಎಚ್ಚರಿಸಿದ್ದನು. ಅಲ್ಲದೇ ಬುದ್ಧಿವಾದ ಕೂಡ ಹೇಳಿದ್ದಾರೆ. ಇದೇ ವಿಚಾರಕ್ಕೆ ಜಗಳ ಉಂಟಾಗಿ, ಅತ್ತಿಗೆ ಜೊತೆಗಿನ ಅಕ್ರಮಕ್ಕೆ, ಅಣ್ಣನನ್ನೇ ಚಾಕುವಿನಿಂದ ಇರಿದು ಹತ್ಯೆಗೈದಿರುವ ಘಟನೆ ಚಾಮರಾಜನಗರ ಚೌಡಳ್ಳಿಯಲ್ಲಿ ನಡೆದಿದೆ.

ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ತಾಲೂಕಿನ ಚೌಡಳ್ಳಿಯಲ್ಲಿ ತಮ್ಮ ಕುಮಾರ್, ತನ್ನ ಅಣ್ಣನಾದಂತ ಪ್ರಸಾದ್ ಪತ್ನಿಯ ಜೊತೆಗೆ ಅಕ್ರಮ ಸಂಬಂಧ ಹೊಂದಿದ್ದರು ಎನ್ನಲಾಗಿದೆ. ಅತ್ತಿಗೆಯ ಜೊತೆಗಿನ ಅಕ್ರಮ ಸಂಬಂಧ ಅಣ್ಣನಿಗೆ ತಿಳುಯುತ್ತಿದ್ದಂತೆ, ತಮ್ಮನ ವಿರುದ್ಧ ಕೆಂಡಾಮಂಡಲವಾಗಿದ್ದರು.

ಅಣ್ಣ ಪ್ರಸಾದ್, ತನ್ನ ತಮ್ಮ ಕುಮಾರ್‌ಗೆ ಅತ್ತಿಗೆಯ ಜೊತೆಗಿನ

ಅಂತರಾಳದಿಂದ... EDITORIAL

ತಪ್ಪು ಮಾಹಿತಿ, ಡೀಪ್‌ಫೇಕ್, ಪ್ರಜಾಪ್ರಭುತ್ವ

2024ರ ಲೋಕಸಭಾ ಚುನಾವಣೆ ವೇಳೆ ಭಾರತ ದೇಶದಲ್ಲಿ ಹರಡಿದ ಸುಳ್ಳು ಸುದ್ದಿ ಹಾಗೂ ಜನರ ದಾರಿ ತಪ್ಪಿಸುವ ವರದಿಗಳ ವಿರುದ್ಧ ದೇಶವು ಸಾಮೂಹಿಕವಾಗಿ ಹೇಗೆ ಹೋರಾಟ ನಡೆಸಿತು ಡೀಪ್ ಫೇಕ್ ವಿರುದ್ಧದ ಹೋರಾಟ ಹೇಗಿತ್ತು ಹಾಗೂ ಪ್ರಜಾಪ್ರಭುತ್ವದ ಮೌಲ್ಯಗಳನ್ನು ಮತ್ತು ಮತದಾರರ ಪವಿತ್ರತೆಯನ್ನು ನಾವೆಲ್ಲರೂ ಏಕೆ ಕಾಪಾಡಬೇಕು ಈ ಕುರಿತಾಗಿ ಸಂಸ್ಥೆಯ ಸ್ಥಾಪಕರು ಮತ್ತು ಆಗಿರುವ ಸೈಯದ್ ನಜಕತ್ ಅವರು ಸಮಗ್ರವಾಗಿ ವಿವರಿಸಿದ್ದಾರೆ.

ವಿಶ್ವ ಆರ್ಥಿಕ ವೇದಿಕೆಯ 2024 ರ ಜಾಗತಿಕ ಅಪಾಯದ ವರದಿಯು ತಪ್ಪು ಮಾಹಿತಿಯು ಪ್ರಪಂಚದಾದ್ಯಂತದ ದೇಶಗಳು ಎದುರಿಸುತ್ತಿರುವ ದೊಡ್ಡ ಬೆದರಿಕೆಗಳಲ್ಲಿ ಒಂದಾಗಿದೆ ಎಂದು ಹೇಳುತ್ತದೆ. ವಿಶ್ವದ ಅತಿ ದೊಡ್ಡ ಪ್ರಜಾಪ್ರಭುತ್ವವಾದ ಭಾರತವು ತಪ್ಪು ಮಾಹಿತಿ ಮತ್ತು ತಪ್ಪು ಮಾಹಿತಿಯೊಂದಿಗೆ ಸಂಬಂಧಿಸಿದ ಅತ್ಯಂತ ಮಹತ್ವದ ಅಪಾಯವನ್ನು ಹೊಂದಿರುವ ರಾಷ್ಟ್ರಗಳಲ್ಲಿ ಒಂದಾಗಿದೆ. ಭಾರತವು ತನ್ನ ರಾಷ್ಟ್ರೀಯ ಚುನಾವಣೆಗಳನ್ನು ಮುಕ್ತಾಯಗೊಳಿಸುವುದರಿಂದ ಇದು ವಿಶೇಷವಾಗಿ ಮುಖ್ಯವಾಗಿದೆ ಮತ್ತು ಪ್ರಪಂಚದಾದ್ಯಂತ 50 ಕ್ಕೂ ಹೆಚ್ಚು ದೇಶಗಳು ಈ ವರ್ಷ ಮತದಾನಕ್ಕೆ ಹೋಗುತ್ತಿವೆ. ಜಾಗತಿಕವಾಗಿ ಪ್ರಜಾಪ್ರಭುತ್ವಗಳಿಗೆ ಎಂತಹ ಅಭೂತಪೂರ್ವ ಸಮಯ ಮತ್ತು ಪರೀಕ್ಷೆ ಆನ್‌ಲೈನ್‌ನಲ್ಲಿ ವಿವಿಧ ಸ್ವರೂಪಗಳು, ಭಾಷೆಗಳು ಮತ್ತು ಪ್ರದೇಶಗಳಲ್ಲಿ ತಪ್ಪು ಮಾಹಿತಿ ವಾಹಕಗಳು ಹೇಗೆ ಪ್ರಸಾರವಾಗುತ್ತವೆ ಎಂಬ ವಿಷಯದಲ್ಲಿ ಭಾರತೀಯ ಚುನಾವಣೆಗಳಿಂದ ಕಲಿಯಲು ತುಂಬಾ ಇದೆ.

ಭಾರತದಲ್ಲಿ ಮಾಧ್ಯಮ ಮತ್ತು ಮಾಹಿತಿ ಭೂದೃಶ್ಯವು ವೇಗವಾಗಿ ವಿಕಸನಗೊಳ್ಳುತ್ತಿದೆ. ಹೆಚ್ಚು ಹೆಚ್ಚು ಜನರು ತಮ್ಮ ಫೋನ್‌ಗಳ ಮೂಲಕ ಇಂಟರ್ನೆಟ್‌ಗೆ ಪ್ರವೇಶವನ್ನು ಪಡೆಯುತ್ತಿದ್ದಾರೆ. ಅರ್ಧಕ್ಕಿಂತ ಹೆಚ್ಚು ಭಾರತೀಯರು, 870 ಮಿಲಿಯನ್ ಜನರು ಸಕ್ರಿಯ ಇಂಟರ್ನೆಟ್ ಬಳಕೆದಾರರಾಗಿದ್ದಾರೆ. ಆನ್‌ಲೈನ್‌ನಲ್ಲಿ ಪರಿಶೀಲಿಸದ ಮಾಹಿತಿಯಿಂದ ಸುದ್ದಿಯ ವಿಶ್ವಾಸಾರ್ಹ ಮೂಲಗಳು ಆಗಾಗ್ಗೆ ಮುಳುಗಿ ಹೋಗುವುದರಿಂದ ಇದು ಹೊಸ ಸವಾಲನ್ನು ಸೃಷ್ಟಿಸುತ್ತಿದೆ. ತಪ್ಪು ಮಾಹಿತಿಯು ಮತದಾರರನ್ನು ಮೋಸಗೊಳಿಸುವ ಮತ್ತು ಚುನಾವಣಾ ಪ್ರಕ್ರಿಯೆಗಳಲ್ಲಿ ಅವರ ನಂಬಿಕೆಯನ್ನು ದುರ್ಬಲಗೊಳಿಸುವ ಸಾಮರ್ಥ್ಯವನ್ನು ಹೊಂದಿದೆ ಎಂದು ನಾವು ವಿಶ್ವಾದ್ಯಂತ ಚುನಾವಣೆಗಳಿಂದ ಹೆಚ್ಚು ಕಲಿಯುತ್ತಿದ್ದೇವೆ. ಮಾನವ ಇತಿಹಾಸದಲ್ಲಿ ಯಾವುದೇ ಹಂತಕ್ಕಿಂತ ಹೆಚ್ಚಿನ ಮಾಹಿತಿಯ ಆಯ್ಕೆಗಳನ್ನು ಹೊಂದಿರುವ ಜಗತ್ತಿನಲ್ಲಿ ಜನರು ಬೆಳೆಯುತ್ತಿದ್ದಾರೆ. ಸತ್ಯ ಮತ್ತು ಸುಳ್ಳು ಮಾಹಿತಿಯ ನಡುವೆ ವ್ಯತ್ಯಾಸವನ್ನು ಕಂಡುಹಿಡಿಯಲು ಜನರು ಹೆಣಗಾಡುತ್ತಿರುವಾಗ ಇದು ಪ್ರಮುಖ ಸವಾಲನ್ನು ಸೃಷ್ಟಿಸುತ್ತದೆ. ಹೆಚ್ಚಿನ ವ್ಯಕ್ತಿಗಳು ಸುಳ್ಳುಗಳಿಗೆ ಒಡ್ಡಿಕೊಳ್ಳುತ್ತಾರೆ, ಮಾಹಿತಿಯು ಅವರ ಅಸ್ತಿತ್ವದಲ್ಲಿರುವ ನಂಬಿಕೆಗಳಿಗೆ ವಿರುದ್ಧವಾಗಿದ್ದಾಗಲೂ ಅವರು ಅವುಗಳನ್ನು ನಂಬುವ ಸಾಧ್ಯತೆ ಹೆಚ್ಚು ಎಂದು ಸಂಶೋಧನೆ ಹೇಳುತ್ತದೆ. ಅಂತಹ ಸನ್ನಿವೇಶದಲ್ಲಿ ಚುನಾವಣೆಗಳು ಪೈಪೋಟಿಗಳ ಕೇಂದ್ರವಾಗುತ್ತವೆ ಮತ್ತು ಪ್ರಜಾಪ್ರಭುತ್ವವನ್ನು ಅದರ ಅತ್ಯಂತ ಕಠಿಣ ಪರೀಕ್ಷೆಗೆ ಒಡ್ಡುತ್ತವೆ.

ಚುನಾವಣಾ ಸತ್ಯ-ಪರಿಶೀಲನೆಯ ಪ್ರಯತ್ನವನ್ನುಗಳು ಮತ್ತು ಇತರ ಪ್ರಮುಖ ಸಂಸ್ಥೆಗಳಂತಹ ಹೆಸರಾಂತ ಸಂಸ್ಥೆಗಳ ಡೀಪ್‌ಫೇಕ್ ಮತ್ತು ಸಿಂಥೆಟಿಕ್ ಮೀಡಿಯಾ ತಜ್ಞರು ಬೆಂಬಲಿಸಿದ್ದಾರೆ. ಈ ತಜ್ಞರು ತಪ್ಪು ಮಾಹಿತಿಗಳನ್ನು, ವಿಶೇಷವಾಗಿ ಡೀಪ್‌ಫೇಕ್‌ಗಳನ್ನು ಹೊರಹಾಕುವಲ್ಲಿ ಉಪಕರಣಗಳು ಮತ್ತು ತಂತ್ರಜ್ಞಾನವು ವಹಿಸುವ ನಿರ್ಣಾಯಕ ಪಾತ್ರವನ್ನು ಒತ್ತಿಹೇಳಿದರು.

ಪ್ರಜಾಪ್ರಭುತ್ವದ ಮೌಲ್ಯಗಳನ್ನು ಸಂರಕ್ಷಿಸುವ ಬದ್ಧತೆ ಮತ್ತು ಸತ್ಯಗಳ ಆಧಾರದ ಮೇಲೆ ಮತದಾರರ ನಿರ್ಧಾರದ ಪಾವಿತ್ರ್ಯವು ಇನಿಶಿಯೇಟಿವ್‌ನಿಂದ ಬೆಂಬಲಿತವಾದ ಶಕ್ತಿ - ಭಾರತ ಚುನಾವಣಾ ಸತ್ಯ ಪರಿಶೀಲನೆ ಕಲೆಕ್ಟಿವ್ ಅನ್ನು ರಚಿಸಲು ಕಾರಣವಾಯಿತು. ಈ ಉಪಕ್ರಮವು ಮೂಲಕ ತಪ್ಪು ಮಾಹಿತಿಯ ಹೋರಾಟದ ಒಕ್ಕೂಟ ಸಹಭಾಗಿತ್ವದಲ್ಲಿ ಇತರ ಪ್ರಮುಖ ಸತ್ಯ-ಪರಿಶೀಲನಾ ಸಂಸ್ಥೆಗಳು ಮತ್ತು ಇಂಡಿಯಾ ಟುಡೆ, ಪ್ರೆಸ್ ಟ್ರಸ್ಟ್ ಆಫ್ ಇಂಡಿಯಾ ನಂತಹ ಸುದ್ದಿ ಪ್ರಕಾಶಕರಲ್ಲಿ ಮುಂದಾಳತ್ವದಲ್ಲಿದೆ. ಭಾರತೀಯ ಸತ್ಯ-ಪರೀಕ್ಷಕರು ಮತ್ತು ಪ್ರಕಾಶಕರ ಒಕ್ಕೂಟವು 2024 ರ ಭಾರತದ ಚುನಾವಣೆಯ ಪೂರ್ವದಲ್ಲಿ ಚುನಾವಣೆಗೆ ಸಂಬಂಧಿಸಿದ ತಪ್ಪು ಮಾಹಿತಿ ಮತ್ತು ಡೀಪ್‌ಫೇಕ್‌ಗಳ ಆರಂಭಿಕ ಪತ್ತೆಯನ್ನು ಹೆಚ್ಚಿಸಲು ಮತ್ತು ಪ್ರಾದೇಶಿಕ ಭಾಷೆಗಳಲ್ಲಿ ಸತ್ಯ-ಪರೀಕ್ಷೆಗಳ ಪ್ರಸಾರವನ್ನು ವರ್ಧಿಸಲು ಒಗ್ಗೂಡಿತು. ತಪ್ಪು ಮಾಹಿತಿಯ ವಿರುದ್ಧ ಹೋರಾಡಲು ಸತ್ಯ-ಪರೀಕ್ಷಕರು ಮತ್ತು ಪ್ರಕಾಶಕರ ನಡುವಿನ ಭಾರತದಲ್ಲಿ ಇದುವರೆಗಿನ ಅತಿ ದೊಡ್ಡ ಸಹಯೋಗವಾಗಿದೆ. ಭಾರತದಲ್ಲಿ ಶಕ್ತಿ ಕಲೆಕ್ಟಿವ್‌ನ ಭಾಗವಾಗಿ, ತಪ್ಪು ಮಾಹಿತಿಯ ಸಾಮಾನ್ಯ ಬೆದರಿಕೆಯನ್ನು ಪರಿಹರಿಸಲು ಸ್ಪರ್ಧಿಗಳು ಸೇರಿದಂತೆ ವೈವಿಧ್ಯಮಯ ಸುದ್ದಿ ಸಂಸ್ಥೆಗಳು ಹೇಗೆ ಒಗ್ಗೂಡಿದವು ಎಂಬುದನ್ನು ನೋಡುವುದು ನಂಬಲಸಾಧ್ಯವಾಗಿತ್ತು. ಪ್ರಮುಖ ಸತ್ಯ-ಪರೀಕ್ಷಕರು ಮತ್ತು ಸ್ಥಾಪಿತ ನ್ಯೂಸ್‌ರೂಮ್‌ಗಳನ್ನು ಒಳಗೊಂಡಿರುವ ಸುಮಾರು 50+ ಸಂಸ್ಥೆಗಳು - ದೇಶದಾದ್ಯಂತ ದೊಡ್ಡ ಮತ್ತು ಸಣ್ಣ, ಸಾಮೂಹಿಕ ಭಾಗವಾಗಲು ಒಗ್ಗೂಡಿದವು. ಕಳೆದ ಮೂರು ತಿಂಗಳಲ್ಲಿ ಪ್ರತಿ ದಿನವೂ 260 ಕ್ಕೂ ಹೆಚ್ಚು ಸತ್ಯ-ಪರೀಕ್ಷಕರು, ವರದಿಗಾರರು ಮತ್ತು ಸಂಪಾದಕರು ತಪ್ಪು ಮಾಹಿತಿಯನ್ನು ಗುರುತಿಸಲು ಮತ್ತು ಹಾನಿಕಾರಕ ಮತ್ತು ತಪ್ಪುದಾರಿಗೆಳೆಯುವ ವಿಷಯ, ಪಿತೂರಿ ಸಿದ್ಧಾಂತಗಳು, ನಕಲಿ ಸಮೀಕ್ಷೆಗಳು ಮತ್ತು ಸೃಷ್ಟಿಸಿದ ಡೀಪ್‌ಫೇಕ್‌ಗಳನ್ನು ಎದುರಿಸಲು ಸಹಕರಿಸಿದ್ದಾರೆ. ಪ್ರಕಾಶಕರು ಸೇರಿಕೊಂಡರು ಮತ್ತು ಸತ್ಯ-ಪರಿಶೀಲನೆಯ ವಿಷಯವನ್ನು ವರ್ಧಿಸಿದರು ಮತ್ತು ಸಮೀಕ್ಷೆಗೆ ಸಂಬಂಧಿಸಿದ ತಪ್ಪು ಮಾಹಿತಿಯಿಂದ ಲಕ್ಷಾಂತರ ಮತದಾರರನ್ನು ರಕ್ಷಿಸಿದರು. ನಾವು ಕಳೆದ ಹಲವು ವರ್ಷಗಳಿಂದ ತಪ್ಪು ಮಾಹಿತಿಯ ವಿರುದ್ಧದ ಹೋರಾಟವನ್ನು ಮುನ್ನಡೆಸುವ ಮುಂಚೂಣಿಯಲ್ಲಿದ್ದೇವೆ.

ತಪ್ಪು ಮಾಹಿತಿಯ ವಿರುದ್ಧ ಹೋರಾಡುವ ಕ್ಷೇತ್ರದಲ್ಲಿ ನಾವು ಈ ಹಿಂದೆ ಪ್ರಾರಂಭಿಸಿದ ಕೆಲಸವು ಭಾರತದಾದ್ಯಂತ ಮತ್ತು ಅದರಾಚೆಗಿನ ತರಬೇತಿ ಮತ್ತು ಸಾಮರ್ಥ್ಯ ನಿರ್ಮಾಣ ಕಾರ್ಯಕ್ರಮಗಳಿಗೆ ಕಾರಣವಾಗಿದೆ. ಇನಿಶಿಯೇಟಿವ್‌ನಿಂದ ಬೆಂಬಲಿತವಾಗಿದೆ. ನಾವು ವಿಶ್ವದ ಅತಿ ದೊಡ್ಡ ತರಬೇತಿ ನೆಟ್‌ವರ್ಕ್‌ಗಳಲ್ಲಿ ಒಂದನ್ನು ನಡೆಸುತ್ತಿದ್ದೇವೆ. ಇದು ಭಾರತದಾದ್ಯಂತ 10 ಕ್ಕೂ ಹೆಚ್ಚು ಭಾಷೆಗಳಲ್ಲಿ ನೂರಾರು ನ್ಯೂಸ್‌ರೂಮ್‌ಗಳು ಮತ್ತು ಸಾವಿರಾರು ಪತ್ರಕರ್ತರಿಗೆ ಪ್ರಯೋಜನವನ್ನು ನೀಡಿದೆ ಮತ್ತು ದೇಶದಲ್ಲಿ ದೃಢವಾದ ಸತ್ಯ-ಪರಿಶೀಲನೆಯ ಪರಿಸರ ವ್ಯವಸ್ಥೆಯನ್ನು ನಿರ್ಮಿಸಲು ಸಹಾಯ ಮಾಡಿದೆ.

• ಹಿಂದಿನ ಸಂಚಿಕೆಯಿಂದ

ಕೃಪನು ಮಾರನೆಯ ದಿನ ಬೆಳಿಗ್ಗೆ ದುರ್ಯೋಧನ ಹೇಗಿರುವನೆಂದು ನೋಡಲು ಹೋದನು. ಅವನ ರಕ್ತಗಣ್ಣುಗಳನ್ನು ನೋಡಿದಾಗ ರಾಜನು ರಾತ್ರಿಯೆಲ್ಲ ನಿದ್ರೆಗೆಟ್ಟಿರುವನು ಎಂದು ಅರ್ಥವಾಯಿತು. ಸಹಾನುಭೂತಿ ಉಕ್ಕಿಬಂದು, ಕೃಪನು ಅವನ ಕೈಯನ್ನು ತನ್ನ ಕೈಯಲ್ಲಿ ತೆಗೆದುಕೊಂಡು ಸುಮ್ಮನೆ ಹಿಸುಕಿದನು.ನಂತರ ಅವನನ್ನು ಅನುಕಂಪದಿಂದ ನೋಡುತ್ತ, ದುರ್ಯೋಧನ, ದುಃಖಿಸಬೇಡ. ನಿನ್ನನ್ನು ಪ್ರೀತಿಸುವ ಅಶ್ವತ್ಥಾಮನಿದ್ದಾನೆ, ನಾನಿದ್ದೇನೆ. ನೀನು ಬದುಕಿರಬೇಕೆಂಬುದು ನಮ್ಮ ಆಪೇಕ್ಷೆ. ಕೊಲೆಯೇ ಮಾನವನ ಕೊನೆಯ ಗುರಿಯೆನ್ನುವ ಕ್ಷತ್ರಿಯಧರ್ಮವೇ ವಿನಾಶಕಾರಿಯಾದದ್ದು. ಪ್ರಜಾಪಾಲನೆಯೇ ರಾಜನ ಕರ್ತವ್ಯವೇ ಹೊರತು ಅವರನ್ನು ಸಾಯಿಸುವುದಲ್ಲ. ನನ್ನ ಮಾತನ್ನು ಕೇಳು. ದೊಡ್ಡ ಭರವಸೆಯೊಂದಿಗೆ ನೀನು ಯುದ್ಧವನ್ನು ಆರಂಭಿಸಿದೆ. ಆದರೆ ದುರದೃಷ್ಟವಶಾತ್ ಭೀಷ್ಮ ದ್ರೋಣ ರಾಧೇಯ ಜಯದ್ರಥ ಎಲ್ಲರೂ ಒಬ್ಬೊಬ್ಬರಾಗಿ ಸೋತರು. ನಿನ್ನ ತಮ್ಮಂದಿರೂ ಮಗ ಲಕ್ಷಣಕುಮಾರನೂ ಸತ್ತರು. ನಿನ್ನ ಪ್ರೀತಿಯ ಎಲ್ಲರೂ ಹೋದಮೇಲೆ ಯುದ್ಧಮಾಡುವುದಾದರೂ ಏತಕ್ಕೆ ಯಾರಿಗಾಗಿ ಪರಮಾಪ್ತರಾದ ಬಂಧುಮಿತ್ರರನ್ನೆಲ್ಲ ಕಳೆದುಕೊಂಡು ನಾವು ಬೆರಳೆಣಿಕೆಯಷ್ಟು ಜನರು ಮಾತ್ರ ಈಗ ಉಳಿದಿದ್ದೇವೆ. ಇಷ್ಟು ದಿನ ಇಷ್ಟು ಜನ ಯುದ್ಧಮಾಡಿದ ಮೇಲೆ ನಮಗೆ ಮನದಟ್ಟಾದದ್ದು ಅರ್ಜುನನನ್ನು ಜಯಿಸಲು ಸಾಧ್ಯವಿಲ್ಲ ಎಂಬುದು. ಅವನೇ ಯಾವಾಗಲೂ ಜಯಶಾಲಿಯಾಗಿರುವನು. ಈಗಿನ ನಿನ್ನ ಸೈನ್ಯದ ಪರಿಸ್ಥಿತಿಯನ್ನು ಹದಿನೆಂಟು ದಿನಗಳ ಹಿಂದಿನ ಪರಿಸ್ಥಿತಿಯೊಂದಿಗೆ ಹೋಲಿಸಿ ನೋಡು. ಅರ್ಜುನ ನಮ್ಮ ಕಡೆಯ ವೀರರನ್ನೆಲ್ಲ ಕೊಂದದ್ದು ಮಾತ್ರವಲ್ಲ, ಭೀಮ ಸಾತ್ಯಕಿ ಧೃಷ್ಟದ್ಯುಮ್ನ ಅಭಿಮನ್ಯು ಎಲ್ಲರೂ ಸೇರಿ ನಮ್ಮ ಸೈನ್ಯವನ್ನು ಹೇಗೆ ನಾಶಮಾಡಿರುವರು

'' ದುಶ್ಶಾಸನನನ್ನು ಕೊಂದಾಗ ನಾವೆಲ್ಲ ಅಲ್ಲಿಯೇ ಇದ್ದರೂ ಭೀಮನನ್ನು ತಡೆಯಲಾರದೆ ಹೋದೆವು. ಅದೇ ರೀತಿ ಜಯದ್ರಥನನ್ನೂ ನಾವು ರಕ್ಷಿಸಿಕೊಳ್ಳಲಾಗಲಿಲ್ಲ. ನಾವು ಜಯಿಸುವ ಸಂಭವವಿಲ್ಲ ಎಂಬುದು ನಿನಗೆ ಗೊತ್ತಾಗುವುದಿಲ್ಲವೆ? ಮನುಷ್ಯನು ಶಕ್ತಿವಂತನಾಗಿದ್ದಾಗ ಹೋರಾಡಬೇಕೆಂದೂ, ದುರ್ಬಲನಾಗಿರುವಾಗ ಶಾಂತಿಯೇ ಒಳ್ಳೆಯದೆಂದೂ ವಿವೇಕಿಗಳು ಹೇಳುವರು. ಆದ್ದರಿಂದ ಪಾಂಡವರೊಡನೆ ಸಂಧಿ ಮಾಡಿಕೊ. ಯುಧಿಷ್ಠಿರನು ಸಂತೋಷದಿಂದ ಒಪ್ಪುವನು. ಕೃಷ್ಣನೂ ಶಾಂತಿಯನ್ನೇ ಬಯಸುವವನು. ಪಾಂಡವರು ಕೃಷ್ಣನ ಮಾತನ್ನು ತೆಗೆದುಹಾಕುವುದಿಲ್ಲ. ದುರ್ಯೋಧನಾ, ದಯವಿಟ್ಟು ಈ ಸರ್ವನಾಶವನ್ನು ನಿಲ್ಲಿಸು ಎನ್ನುತ್ತ ಭಾವೋದ್ವೇಗದಿಂದ ಅಳುತ್ತ ಹಾಗೆಯೇ ಮೂರ್ಛೆಹೋದನು. ದುರ್ಯೋಧನನೊಬ್ಬನಾದರೂ ಬದುಕಿ ಉಳಿಯಲಿ ಎಂದು ಅವನ ಆಸೆ. ತನ್ನ ಪ್ರೀತಿಯ ಕೃಪಾಚಾರ್ಯನ ಅವಸ್ಥೆಯನ್ನು ನೋಡಿದ ದುರ್ಯೋಧನನು ಪನ್ನೀರು ಚಿಮುಕಿಸಿ ಅವನಿಗೆ ಶೈತ್?ಪಚಾರ ಮಾಡಿ ಎಬ್ಬಿಸಿದನು.

ಮುಂದುವರಿಯುವುದು...

ಜಾಗತಿಕ ತಾಪಮಾನ ತಡೆಯಲು ಅರಣ್ಯ ಬೆಳೆಸಬೇಕು

■ ಸಾಮಾಜಿಕ ಅರಣ್ಯ ವಲಯಕ್ಕೆ ಮುಖ್ಯಮಂತ್ರಿಗಳಿಂದ ಚಿನ್ನದ ಪದಕ ಸಹ ಪಡೆದಿರುವುದನ್ನು ಇಲ್ಲಿ ಸ್ಮರಿಸಬಹುದು

ವರದಿ; ರವಿ ತೇಲಂಗಿ

• ಉದಯವಾಹಿನಿ, ಮುದ್ದೇಬಿಹಾಳ

ಪರಿಸರ ದಿನಾಚರಣೆ ವಿಶೇಷ

ಜೂನ್ 5 ವಿಶ್ವ ಪರಿಸರ ದಿನಾಚರಣೆ ಆಚರಣೆ ಆಚರಿಸ ಲಾಗುತ್ತದೆ ಈ ವಿಶೇಷ ಸಂದರ್ಭದಲ್ಲಿ ನಮ್ಮ ಸಾಮಾಜಿಕ ವಲಯ ಅರಣ್ಯ ಇಲಾಖೆಯ ಕಾರ್ಯ ವೈಖರಿ ಕುರಿತು, ತಾಲ್ಲೂಕಿನಲ್ಲಿಯ ನಡುತೋಪುಗಳ ಬಗ್ಗೆ ಮತ್ತು ಕೋಳೂರ ಸಸ್ಯ ಪಾಲನ ಕೇಂದ್ರದ ಪರಿಚಯ

ಮಕ್ಕಳ ಹುಟ್ಟಿದ ಹಬ್ಬ,ಮದುವೆ ವಾರ್ಷಿಕೋತ್ಸವದ ಸಂದರ್ಭದಲ್ಲಿ ಕೇಕ್ ಕತ್ತರಿಸುವ ಬದಲು ಒಂದು ಸಸಿಯನ್ನು ನಡೆಸಬೇಕು, ಪರಿಸರ ಕಾಳಜಿ ಸಸಿ ನಡೆಸಿ ತೋರಿಸಬೇಕು ; ಎಸ್ ಜಿ ಸಂಗಾಲಿಕ ಸಾಮಾಜಿಕ ವಲಯ ಅರಣ್ಯಾಧಿಕಾರಿ

ನಮ್ಮ ಮುದ್ದೇಬಿಹಾಳ ತಾಲ್ಲೂಕಿನ ಕೇಸಾಪೂರ ಕ್ರಾಸ್ ಬಳಿಯ ಕೋಳೂರು ಸಸ್ಯ ಪಾಲನ ಕೇಂದ್ರದಲ್ಲಿ ಮರದ ಬೀಜಗಳು ಸಸಿಯಾಗಿ ಸಲು ಮೊದಲು ಫಲವತ್ತಾದ ಮಣ್ಣಿನಲ್ಲಿ ಗೊಬ್ಬರ, ಮರಳು ಬೆರೆಸಿ ನೀರು ಉಣಿಸಿ ಚಿಕ್ಕ ಪ್ಲಾಸ್ಟಿಕ್ ಬ್ಯಾಗ್‌ನಲ್ಲಿ ಹಾಕ ಲಾಗುತ್ತದೆ ಇದಕ್ಕೂ ಮುನ್ನ ಗುಣಮಟ್ಟದ ಆರೋಗ್ಯ ಯುತ ಮರಗಳನ್ನು ಗುರುತಿಸಿ ಅದರ ಬೀಜಗಳನ್ನು ಸಂಗ್ರಹಿ ಸಿಲಾಗಿರುತ್ತದೆ

ಈ ಸಂಗ್ರಹ ಮಾಡಿದ ಬೀಜಗಳನ್ನು ಈ ಪುಟ್ಟ ಬ್ಯಾಗನಲ್ಲಿ ಹಾಕಿ ಮೊಳಕೆಯೊಡೆಯಲು ಹಸಿರು ಮನೆಯಲ್ಲಿ ಇರಿಸಲಾಗುತ್ತದೆ ಅಲ್ಲಿ 10 ರಿಂದ 15 ದಿನಗಳಲ್ಲಿ ಮೊಳಕೆ ಸಸಿಯಾಗುತ್ತದೆ ನಂತರ ಈ ಚಿಕ್ಕ ಬ್ಯಾಗ್ ಸಸಿಯನ್ನು 8 12 ಬ್ಯಾಗ್ ಗೆ ಹಾಕಿ 9 ತಿಂಗಳು ಪೋಷಣೆ ಮಾಡಿ ನಂತರ ರೈತರಿಗೆ ವಿತರಣೆ ಮಾಡಲಾಗುತ್ತದೆ ಒಬ್ಬ ತಾಯಿ ಮಗುವನ್ನು ನವಮಾಸ ತನ್ನ ಮಡಿಲಲ್ಲಿ ಹೇಗೆ ಪೋಷಿಸಿಸುತ್ತಾಳೋ ಹಾಗೆ ಸಸ್ಯ ಪಾಲನೆ ಸಹ ಅದೆ ಪ್ರಕ್ರಿಯೆ ಆಗುತ್ತದೆ

ಉದಯವಾಹಿನಿ ಚಿತ್ರ

ಅರಣ್ಯ ಇಲಾಖೆಯ ನರ್ಸರಿಯಲ್ಲಿ ಒಂದು ಸಸ್ಯ ಅಗಿ ತಯಾರಾಗಲು 33 ರೂ ಖರ್ಚು ಆಗುತ್ತದೆ ಸರಕಾರ ಸಸಿ ಬೆಳೆಸಲು ಕೇವಲ 3 ರೂ ಹಾಗೂ 6 ರೂ ಗೆ ಒಂದು ಸಸಿಗಳನ್ನು ಮಾರಾಟ ಮಾಡುತ್ತಿದೆ , ಶ್ರೀಗಂಧ,ರಕ್ತಚಂದನ,ಮರಗಳದಿಂದ ರೈತರು ಕೋಟ್ಯಾಧೀಶರಾಗಬಹುದು

ಈಗ ಮಾನ್ಸೂನ್ ಸಿಜನ್ ಜೂನ್ ಜುಲೈ ಅಗಸ್ಟ್ ಈ 3 ತಿಂಗಳ ಮೆಳೆಗಾಲದಲ್ಲಿ ಸಸಿ ನಡೆಸಲು ಸೂಕ್ತವಾದ ಸಮಯ ಈ ಸಂದರ್ಭದಲ್ಲಿ ಅತಿಹೆಚ್ಚು ಸಸಿಗಳನ್ನು ರೈತರಿಗೆ ವಿತರಣೆ ಮಾಡಲಾಗುತ್ತದೆ ಅರಣ್ಯ ಇಲಾಖೆಯಲ್ಲಿ ಕೃಷಿ ಅರಣ್ಯ ಪ್ರೋತ್ಸಾಹ ಯೋಜನೆ, ಕೇಂದ್ರ ಸರಕಾರದ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ, ಮಹಾತ್ಮಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ರೈತರಿಗೆ ಸಸಿ ನಡೆಸಲು ಅವಕಾಶ ಇದೆ ಮುದ್ದೇಬಿಹಾಳ ಸಾಮಾಜಿಕ ವಲಯ ಅರಣ್ಯಾಧಿಕಾರಿ ಎಸ್ ಜಿ ಸಂಗಾಲಕರು ಹೇಳುವಂತೆ ವಿಜಯಪುರ ಜಿಲ್ಲೆಯಲ್ಲಿ 0.02 ಅರಣ್ಯ ಪ್ರದೇಶವಿದೆ ಹತ್ತು ಲಕ್ಷ ಹೆಕ್ಟೇರ್ ರೈತರ ಜಮೀನು ಇದೆ ಜಿಲ್ಲೆಯಲ್ಲಿ ಹಸಿರುಹೂದಿಕೆಯಾಗಲು ಅರಣ್ಯ ಇಲಾಖೆ ನಡುತೋಪು, ರಸ್ತೆ ಬದಿ , ಶಾಲೆಗಳಲ್ಲಿ ಸ್ಮಶಾನ ಗಳಲ್ಲಿ ಸಸಿ ನೆಟ್ಟ ಪರಿಣಾಮ ಅರಣ್ಯ ಪ್ರದೇಶ 0.02 ದಿಂದ 0.04 ಆಗಿದೆ ಹಸಿರು ಹೊದಿಕೆಯಾಗಲು ಶೇ 33% ಅರಣ್ಯ ಆಗಬೇಕು ಇದಕ್ಕಾಗಿ ಮನೆಗೊಂದು ಮರ,ಮಗುವಿಗೊಂದು ಮರ,ಜಮೀನಿನ ಬದು ಸುತ್ತ ಗಿಡಗಳನ್ನು ನಡೆಬೇಕು ಎನ್ನುತ್ತಾರೆ ಹಿಂದಿನ ಕಾಲದ ರೈತರು ಜಮೀನಿನಲ್ಲಿ ಜಮೀನಿನ ಬದುವಿನಲ್ಲಿ ಮಾವು, ಬೇವು,ಬನ್ನಿ ಸೇರಿದಂತೆ ಇತರೆ ಮರಗಳನ್ನು ನಡೆಸುತ್ತಿದ್ದರು ನೈಸರ್ಗಿಕ ಕೃಷಿ ಮಾಡುತ್ತಿದ್ದರು ಮರಗಳಲ್ಲಿ ಪಕ್ಷಿಗಳು ಹೂಲದ ಬೆಳೆಗಳಿಗೆ ಹತ್ತಿದ ಕೀಟ ತಿನ್ನುತ್ತಿದ್ದವು ಹಕ್ಕಿಗಳ ಹಿಕ್ಕೆ ಸಹ ಗೊಬ್ಬರವಾಗಿ ಕೆಲಸ ಮಾಡುತ್ತಿತ್ತು ಹೊಲದಲ್ಲಿ ಮರಗಳಿಂದ ಮಣ್ಣಿನ ಸವಕಳಿ , ಮಳೆ ಆಕರ್ಷಣೆ ಆಗುತ್ತಿತ್ತು ಈಗ ರೈತರು ಹೊಲದಲ್ಲಿ ಮರಗಳನ್ನು ಕರೆಯುತ್ತಾರೆ ಮರದ ನೆರಳಿಂದ ಬೆಳೆ ಬರುವುದಿಲ್ಲವೆಂದು ಮರ ಬೆಳೆಸುತ್ತಿಲ್ಲ **ಮುದ್ದೇಬಿಹಾಳ ಹೊರವಲಯದಲ್ಲಿ ಅರಣ್ಯ ವಲಯ;** ಮುದ್ದೇಬಿಹಾಳ ಹೊರವಲಯದ ಬಿದರಕುಂದಿ ಸರ್ವೆನಂ 191 ರಲ್ಲಿ 15 ಎಕರೆ ಅರಣ್ಯ ವಲಯ ಗುರುತಿಸಿ ಅಲ್ಲಿ ಕಳೆದ ವರ್ಷದ 1800 ಸಸಿಗಳನ್ನು ನಡೆಸಲಾಗಿದೆ ಇದರಲ್ಲಿ ಎಲ್ಲಾ ಬಗೆಯ ಹಣ್ಣು ಔಷಧಿ ಗುಣದ ಸಸಿಗಳು ಇವೆ ಈ ಪ್ರದೇಶದಲ್ಲಿ ಬರಲಿರುವ ದಿನಗಳಲ್ಲಿ ಮಕ್ಕಳಿಗೆ ಹಾಗೂ ಪಟ್ಟಣದ ನಾಗರಿಕರಿಗೆ ಪ್ರವಾಸಿತಾಣ ಮಾಡುವ ಗುರಿಯನ್ನು ಹೊಂದಿದೆ ಇಲ್ಲಿ ಉದ್ಯಾನ

ಧಾರವಾಡ ಚುನಾವಣಾ ಮತ ಎಣಿಕೆ: ಜಿಲ್ಲಾಧಿಕಾರಿಗಳ ಸೂಚನೆ

ನಾಳೆ ಕೃಷಿ ವಿಶ್ವವಿದ್ಯಾಲಯದ ಮುಖ್ಯ ಕಟ್ಟಡದಲ್ಲಿ ಮತ ಎಣಿಕೆ ಪ್ರಕ್ರಿಯೆ, ಜೂನ್ 6ಕ್ಕೆ ನೀತಿ ಸಂಹಿತೆ ಅವಧಿ ಮುಕ್ತಾಯ

• ಉದಯವಾಹಿನಿ, ಧಾರವಾಡ


ಉದಯವಾಹಿನಿ ಚಿತ್ರ

ಧಾರವಾಡ ಲೋಕಸಭಾ ಮತಕ್ಷೇತ್ರದ ಚುನಾವಣೆ ಮೇ 7ರಂದು ನಡೆಯಿತು. ಜೂನ್ 04 ರಂದು ನಡೆಯಲಿರುವ ಮತ ಎಣಿಕಾ ಕಾರ್ಯಕ್ಕೆ ಧಾರವಾಡ ಜಿಲ್ಲಾಡಳಿತದಿಂದ ಅಗತ್ಯ ಸಿದ್ಧತೆ ಮಾಡಿಕೊಳ್ಳಲಾಗಿದೆ. ಮತ ಎಣಿಕೆ ಹೇಗೆಲ್ಲ ನಡೆಯಲಿದೆ ಎಂಬುದರ ಕುರಿತು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ವಿವರಿಸಿದರು.

112 ಟೇಬಲ್ ಮತ ಎಣಿಕೆಗೆ ಸಿದ್ಧ

ಭಾನುವಾರ ಮಧ್ಯಾಹ್ನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಲೋಕಸಭಾ ಚುನಾವಣೆಯ ಮತ ಎಣಿಕೆ ಕಾರ್ಯದ ಸಿದ್ಧತೆ ಮತ್ತು ಮತ ಎಣಿಕಾ ಕೇಂದ್ರದ ಕುರಿತು ಮಾಹಿತಿ ನೀಡಿ ಅವರು ಮಾತನಾಡಿದರು. ಸಿಬ್ಬಂದಿಗಳಿಗೆ ಅಗತ್ಯ ತರಬೇತಿ ನೀಡಲಾಗಿದೆ. ಭಾರತ ಚುನಾವಣಾ ಆಯೋಗದ ನಿರ್ದೇಶನಗಳಂತೆ ಪ್ರತಿ ವಿಧಾನಸಭಾ ಮತಕ್ಷೇತ್ರಕ್ಕೆ 14 ಟೇಬಲ್‌ಗಳಂತೆ ಒಟ್ಟು 112 ಟೇಬಲ್‌ಗಳನ್ನು ಮತ ಎಣಿಕೆಗೆ ಸಿದ್ಧಗೊಳಿಸಲಾಗಿದೆ. ಅಂದಾಜು 20 ಸುತ್ತುಗಳಲ್ಲಿ ಮತ ಎಣಿಕೆ ಕಾರ್ಯ ನಡೆಯಲಿದೆ ಎಂದರು.

ಒಂದು ವೇಳೆ ಮರೆತು ತಂದರೂ, ಅವರಿಗೆ ಪಸ್ಟ್ ಗೇಟ್‌ದಲ್ಲಿ ಮೊಬೈಲ್ ಸಂಗ್ರಹ ಕೇಂದ್ರ ತೆರೆಯಲಾಗಿದ್ದು, ಅಲ್ಲಿ ಇಟ್ಟು ಚೀಟಿ ಪಡೆಯುವ ವ್ಯವಸ್ಥೆ ಮಾಡಲಾಗಿದೆ. ಆದ್ದರಿಂದ ಮೊಬೈಲ್ ಹಾಗೂ ಇತರೆ ಡಿವೈಸ್‌ಗಳನ್ನು ಮತ ಎಣಿಕೆ ಕೇಂದ್ರಕ್ಕೆ ತರಬಾರದೆಂದು ಅವರು ತಿಳಿಸಿದರು.

ಚುನಾವಣಾ ವೇಳಾಪಟ್ಟಿ ಲೋಕಸಭಾ ಸಾರ್ವತ್ರಿಕ ಚುನಾವಣೆಗೆ ಏಪ್ರಿಲ್ 12ರಂದು ಅಧಿಸೂಚನೆ ಪ್ರಕಟವಾಗಿದ್ದು, ಏಪ್ರಿಲ್ 19 ರಿಂದ ನಾಮಪತ್ರ ಸಲ್ಲಿಸಲು ಕೊನೆಯ ದಿನವಾಗಿತ್ತು. ಏಪ್ರಿಲ್ 20 ರಂದು ನಾಮಪತ್ರ ಪರಿಶೀಲನೆ, ಏಪ್ರಿಲ್ 22 ರಂದು ನಾಮಪತ್ರ ಹಿಂಪಡೆಯಲು ಕೊನೆಯ ದಿನವಾಗಿತ್ತು. ಮೇ 7 ರಂದು ಮತದಾನ ಜರಗಿದ್ದು, ಜೂನ್ 4 ರಂದು ಕೃಷಿ ವಿಶ್ವವಿದ್ಯಾಲಯದ ಮುಖ್ಯ ಕಟ್ಟಡದಲ್ಲಿ ಮತ ಎಣಿಕೆ ಪ್ರಕ್ರಿಯೆ ನಡೆಯಲಿದೆ. ಜೂನ್ 6 ಕ್ಕೆ ಪ್ರಸುತ್ತ ಲೋಕಸಭೆ ಚುನಾವಣೆಯ ಮಾದರಿ ನೀತಿ ಸಂಹಿತೆ ಅವಧಿ ಮುಕ್ತಾಯ ಗೊಳ್ಳುವುದು ಎಂದು ಅವರು ತಿಳಿಸಿದರು.

> ಜೂನ 4 ರಂದು ಮತ ಎಣಿಕೆ ಕಾರ್ಯ ನಡೆಯುವದರಿಂದ 2024 ಜೂನ್ 3ರ ಸಂಜೆ 6 ಗಂಟೆಯಿಂದ 2024 ಜೂನ್ 5ರ ರಾತ್ರಿ 10 ಗಂಟೆಯವರೆಗೆ ಜಿಲ್ಲೆಯಾದ್ಯಂತ ಶಾಂತಿ ಸುವ್ಯವಸ್ಥೆ ಕಾಪಾಡಲು ಸಿಆರ್.ಪಿ.ಸಿ. 1973 ಕಲಂ 144 ರಡಿ ನಿಷೇದಾಜ್ಞೆ ಆದೇಶವನ್ನು ಈಗಾಗಲೇ ಹೊರಡಿಸಲಾಗಿದೆ
> -ದಿವ್ಯ ಪ್ರಭು, ಜಿಲ್ಲಾಧಿಕಾರಿ

ಶೇ.74.37 ರಷ್ಟು ಮತದಾನ

ಒಟ್ಟಾರೆಯಾಗಿ ಧಾರವಾಡ ಲೋಕಸಭಾ ಮತಕ್ಷೇತ್ರ ವ್ಯಾಪ್ತಿಗೆ ಒಳಪಡುವ 8 ವಿಧಾನಸಭಾ ಮತಕ್ಷೇತ್ರ ವ್ಯಾಪ್ತಿಯಲ್ಲಿ 2019 ರ ಲೋಕಸಭಾ ಚುನಾವಣೆಯಲ್ಲಿ ಶೇಕಡ 70.12 ರಷ್ಟು ಮತದಾನ ವಾಗಿದ್ದರೆ, 2024ರ ಲೋಕಸಭಾ ಚುನಾವಣೆಯಲ್ಲಿ 74.37 ರಷ್ಟು ಮತದಾನವಾಗಿದೆ.

ಧಾರವಾಡ ಲೋಕಸಭಾ ಮತಕ್ಷೇತ್ರ ವ್ಯಾಪ್ತಿ ಯ 69-ನವಲಗುಂದ ವಿಧಾನಸಭಾ ಮತಕ್ಷೇತ್ರ ವ್ಯಾಪ್ತಿಯಲ್ಲಿ 2019 ರ ಲೋಕಸಭಾ ಚುನಾವಣೆಯಲ್ಲಿ ಶೇಕಡ 71.48 ರಷ್ಟು ಮತದಾನ ವಾಗಿದ್ದರೆ, 2024ರ ಲೋಕಸಭಾ ಚುನಾವಣೆಯಲ್ಲಿ 76.94 ರಷ್ಟು ಮತದಾನವಾಗಿದೆ.

70-ಕುಂದಗೋಳ ವಿಧಾನಸಭಾ ಮತಕ್ಷೇತ್ರ ವ್ಯಾಪ್ತಿಯಲ್ಲಿ 2019 ರ ಲೋಕಸಭಾ ಚುನಾವಣೆಯಲ್ಲಿ ಶೇಕಡ 73.01 ರಷ್ಟು ಮತದಾನ ವಾಗಿದ್ದರೆ, 2024ರ ಲೋಕಸಭಾ ಚುನಾವಣೆಯಲ್ಲಿ 80.22 ರಷ್ಟು ಮತದಾನವಾಗಿದೆ. 71-ಧಾರವಾಡ ವಿಧಾನಸಭಾ ಮತಕ್ಷೇತ್ರ ವ್ಯಾಪ್ತಿಯಲ್ಲಿ 2019 ರ ಲೋಕಸಭಾ ಚುನಾವಣೆಯಲ್ಲಿ ಶೇಕಡ 71.95 ರಷ್ಟು ಮತದಾನ ವಾಗಿದ್ದರೆ, 2024ರ ಲೋಕಸಭಾ ಚುನಾವಣೆಯಲ್ಲಿ 75.75 ರಷ್ಟು ಮತದಾನವಾಗಿದೆ.

75-ಕಲಘಟಗಿ ವಿಧಾನಸಭಾ ಮತಕ್ಷೇತ್ರ ವ್ಯಾಪ್ತಿಯಲ್ಲಿ 2019 ರ ಲೋಕಸಭಾ ಚುನಾವಣೆಯಲ್ಲಿ ಶೇಕಡ 75.92 ರಷ್ಟು ಮತದಾನವಾಗಿದ್ದರೆ, 2024ರ ಲೋಕಸಭಾ ಚುನಾವಣೆಯಲ್ಲಿ 82.27 ರಷ್ಟು ಮತದಾನವಾಗಿದೆ. ಧಾರವಾಡ ಲೋಕಸಭಾ ಮತಕ್ಷೇತ್ರ ವ್ಯಾಪ್ತಿಗೆ ಒಳಪಡುವ ಹಾವೇರಿ ಜಿಲ್ಲೆಯ 83-ಶಿಗ್ಗಾವಿ ವಿಧಾನಸಭಾ ಮತಕ್ಷೇತ್ರ ವ್ಯಾಪ್ತಿಯಲ್ಲಿ 2019 ರ ಲೋಕಸಭಾ ಚುನಾವಣೆಯಲ್ಲಿ ಶೇಕಡ 71.64 ರಷ್ಟು ಮತದಾನ ವಾಗಿದ್ದರೆ, 2024ರ ಲೋಕಸಭಾ ಚುನಾವಣೆಯಲ್ಲಿ 77.23 ರಷ್ಟು ಮತದಾನವಾಗಿದೆ.

ಶಾಧಿಪೂರ ಕೆರೆಯ ಕಟ್ಟೆ ಮರು ನಿರ್ಮಾಣಕ್ಕೆ ಮಲತಾಯಿ ಧೋರಣೆ, ಶೀಘ್ರದಲ್ಲೇ ಕೆರೆ ನಿರ್ಮಾಣಕ್ಕೆ: ಅಧ್ಯಕ್ಷ ಪವ್ಹಾರ ಒತ್ತಾಯ

• ಉದಯವಾಹಿನಿ,ಚಿಂಚೋಳಿ

ಉದಯವಾಹಿನಿ ಚಿತ್ರ

ತಾಲ್ಲೂಕಿನ ಶಾಧಿಪೂರ ಗ್ರಾಮದಲ್ಲಿ ಕುಡಿಯುವ ನೀರು ಮತ್ತು ರೈತರ ವ್ಯವಸಾಯಕ್ಕೆ ಒಂದೇ ಒಂದು ಕೆರೆಯಿದೆ ಆದರೆ ಕೆರೆ ಒಡೆದುಹೋಗಿ ನಾಲ್ಕು ವರ್ಷ ಗತಿಸಿದರೂ ಇಲ್ಲಿಯವರೆಗೆ ಮರುನಿರ್ಮಾಣಕ್ಕೆ ಮಲತಾಯಿ ಧೋರಣೆ ತೋರುತ್ತಿದ್ದು ಶೀಘ್ರದಲ್ಲೇ ಗ್ರಾಮಸ್ಥರ ಬೇಡಿಕೆಯಂತೆ ಕೆರೆ ಮರುನಿರ್ಮಾಣ ಮಾಡಬೇಕು ಎಂದು ಶಾಧಿಪೂರ ಗ್ರಾಪಂ. ಅಧ್ಯಕ್ಷೆ ಭಾರತಿ ರಾಜಕುಮಾರ ಪವ್ಹಾರ ಮನವಿ ಮಾಡಿದ್ದಾರೆ.

ಪಟ್ಟಣದಲ್ಲಿರುವ ಶಾಸಕರ ಕಾರ್ಯಾಲಯದ ಆಪ್ತ ಸಹಾಯಕರ ಮೂಲಕ ಶಾಸಕರಿಗೆ ಮನವಿ ಸಲ್ಲಿಸಿ ಮತ್ತು ಸಣ್ಣ ನೀರಾವರಿ ಇಲಾಖೆ ಎಇಇಯವರಿಗೆ ಮನವಿ ಸಲ್ಲಿಸಿದ ಅವರು, ಶಾಧಿಪೂರ ಗ್ರಾಮದ ರೈತರು ಕಬ್ಬಿನ ಬೆಳೆಗೆ ನೀರಿನ ಪೂರೈಕೆಗೆ, ಕುಡಿಯುವ ನೀರಿಗೆ ಒಂದೇ ಒಂದು ಕೆರೆಯಿದೆ. ನಾಲ್ಕು ವರ್ಷಗಳ ಹಿಂದೆ ನೀರಿನ ರಭಸಕ್ಕೆ ಕೆರೆ ಒಡೆದುಹೋಗಿತ್ತು ಇಲ್ಲಿಯವರೆಗೆ ದುರಸ್ತಿಗೊಳಿಸದೆ ಮಲತಾಯಿ ಧೋರಣೆ ಜನಪ್ರತಿನಿಧಿಗಳು ಮಾಡಿದ್ದಾರೆ.ಕೆರೆಯ ಜೋತೆಗೆ ಹಾನಿಗೊಂಡ ನಾಗಯಿದಲಾಯಿ ಕೆರೆ ಪುನಃ ನಿರ್ಮಾಣವಾಯಿತು, ಹುಡದಳ್ಳಿ ಕೆರೆ ಕಾಮಗಾರಿ ಪ್ರಗತಿಯಲ್ಲಿದೆ, ಆದರೆ ಶಾಧಿಪೂರ ಕೆರೆ ಪುನಃ ನಿರ್ಮಾಣಕ್ಕೆ ಮಲತಾಯಿ ಧೋರಣೆ ಯಾಕೆ ಎಂದು ಪ್ರಶ್ನಿಸಿದರು. ನೀರು ನಿಲ್ಲುವುದರಿಂದ ಸುತ್ತಲಿನ ತೆರದಬಾವಿ, ಕೊಳವೆ ಬಾವಿಗಳು ಬತ್ತುತ್ತಿರಲಿಲ್ಲ, ಆದರೀಗ ಕೆರೆ ಅವಲಂಬಿತ ಕೊಳವೆ ಬಾವಿಗಳು, ತೆರೆದ ಬಾವಿಗಳು ಒಣಗಿ ಹೋಗುತ್ತಿವೆ, ಇದರಿಂದಾಗಿ ಸಾರ್ವಜನಿಕರಿಗೆ ಕುಡಿಯುವ ನೀರು, ವ್ಯವಸಾಯ ನೀರಿನ ಕೊರತೆ ಕಾಡುತ್ತಿದೆ, ಸುತ್ತಲಿನ ತಾಂಡಾ, ಗ್ರಾಮದ ರೈತರು ಕೆರೆ ನಿರ್ಮಾಣ ಆಗಬೆಕೇಂದ್ದು ಜಾತಕ ಪಕ್ಷಿಯಂತೆ ಕಾಯುತ್ತಿದ್ದಾರೆ.

ಕೆರೆ ನಿರ್ಮಾಣ ಮಾಡಿ

ಸೆ. 2023ರಲ್ಲಿ ಕರ್ನಾಟಕ ಸರಕಾರದಿಂದ ಹಮ್ಮಿಕೊಂಡಿದ್ದ ಜನತಾ ದರ್ಶನದಲ್ಲಿ ಶಾಸಕ ಡಾ.ಅವಿನಾಶ ಜಾಧವಗೆ, ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆಯವರನ್ನು ಗ್ರಾಪಂ ವತಿಯಿಂದ ಮನವಿಪತ್ರ ಸಲ್ಲಿಕೆಯಾದರೂ ಇಲ್ಲಿಯವರೆಗೆ ಯಾವುದೇ ಕೆಲಸ ಆಗಿರುವುದಿಲ್ಲ,ಕಾರಣ ತಾವುಗಳು ಮುತುವರ್ಜಿವಹಿಸಿ ಬಡರೈತರ, ಸಾರ್ವಜನಿಕರ ಮತ್ತು ಈ ಭಾಗದ ಮುಖಂಡರ ಮನವಿ ಪರಿಗಣಿಸಿ ಕೆರೆ ನಿರ್ಮಾಣ ಮಾಡಬೇಕು ಎಂದು ಮನವಿ ಮಾಡಿದರು.

ವರದಿ ಮಾಡಲು ತೆರಳಿದ್ದ ಪತ್ರಕರ್ತನ ಮೇಲೆ ಹಲ್ಲೆ

• ಉದಯವಾಹಿನಿ, ಆಲೂರು

ಉದಯವಾಹಿನಿ ಚಿತ್ರ

ವರದಿಗಾರಿಕೆಗೆ ತೆರಳಿದ್ದ ಸ್ಥಳೀಯ ಪತ್ರಕರ್ತನ ಮೇಲೆ ಗ್ರಾಮ ಪಂಚಾಯತ್ ಹಾಲಿ ಸದಸ್ಯ, ಮಾಜಿ ಅಧ್ಯಕ್ಷ ಹಾಗೂ ಆತನ ಸಹಚರರು ಹಲ್ಲೆಮಾಡಿರುವ ಘಟನೆ ಆಲೂರು ತಾಲ್ಲೂಕಿನ ಕೆಂಚನಹಳ್ಳಿ ಗ್ರಾಮದಲ್ಲಿ ನಡೆದಿದೆ.ಆಲೂರು ತಾಲ್ಲೂಕಿನ ಸ್ಥಳೀಯ ಪತ್ರಕರ್ತ ವೀರಭದ್ರ ಸ್ವಾಮಿ ಹಲ್ಲೆಗೊಳಗಾದವರು.

ಬೈರಾಪುರ ಗ್ರಾ.ಪಂ. ನ ಮಾಜಿ ಅಧ್ಯಕ್ಷ ಕೆಂಚನಹಳ್ಳಿ ರವಿಕುಮಾರ್ ಎಂಬವರು ಇಲ್ಲಿನ ಗ್ರಾ.ಪಂ. ಅಧ್ಯಕ್ಷರಾಗಿದ್ದ ಸಂದರ್ಭ ತಮ್ಮ ಅಧಿಕಾರ ದುರ್ಬಳಕೆ ಮಾಡಿಕೊಂಡು ಬೈರಾಪುರ ಗ್ರಾ.ಪಂ. ವ್ಯಾಪ್ತಿಯ ಕೆಂಚನಹಳ್ಳಿ ಗ್ರಾಮದ ಸರ್ಕಾರಿ ಜಮೀನನ್ನು ಅಕ್ರಮವಾಗಿ ಆತನಿಗೆ ಮತ್ತು ಆತನ ತಂದೆ ಪುಟ್ಟಸ್ವಾಮಿಗೌಡ ಎಂಬವರ ಹೆಸರಿಗೆ ಖಾತೆ ಮಾಡಿಕೊಂಡಿದ್ದರು. ಈ ಬಗ್ಗೆ ಸಾರ್ವಜನಿಕರು ದೂರು ನೀಡಿದ್ದರು. ಈ ಹಿನ್ನಲೆ ಸಂಬಂಧಪಟ್ಟ ಅಧಿಕಾರಿಗಳು ಕೆಂಚನಹಳ್ಳಿ ಗ್ರಾಮಕ್ಕೆ ಸ್ಥಳ ಪರಿಶೀಲನೆ ನಡೆಸಲು ಹೋದ ಸಂದರ್ಭ ಪತ್ರಕರ್ತ ವೀರಭದ್ರಸ್ವಾಮಿ ವರದಿ ಮಾಡಲು ತೆರಳಿದ್ದಾರೆ. ಈ ಸಂದರ್ಭ ರವಿಕುಮಾರ್ ತಮ್ಮ ಸಹಚರರ ಜೊತೆ ಸೇರಿ ಹಲ್ಲೆ ಮಾಡಿದ್ದಾರೆ. ಸ್ಥಳ ಪರಿಶೀಲನೆಯಲ್ಲಿದ್ದ ಅಧಿಕಾರಿಗಳು ಹಾಗೂ ಗ್ರಾಮಸ್ಥರು ಅವರನ್ನು ಬಿಡಿಸಿ ಕಳುಹಿಸಿದ್ದಾರೆ ಎಂದು ತಿಳಿದು ಬಂದಿದೆ.

ಪತ್ರಕರ್ತ ವೀರಭದ್ರಸ್ವಾಮಿ ಅವರಿಗೆ ಮೂಗು ಮತ್ತು ತಲೆಗೆ ಗಾಯಗಳಾಗಿದ್ದು, ಆಲೂರು ಪಟ್ಟಣದ ಸಾರ್ವಜನಿಕ ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದುಕೊಂಡಿದ್ದು, ಆಲೂರು ಪೊಲೀಸ್ ಗೆ ದೂರು ನೀಡಿದ್ದಾರೆ ಎಂದು ತಿಳಿದು ಬಂದಿದೆ.

ವಾಲ್ಮೀಕಿ ನಿಗಮದ ಹಗರಣ, ಅಗತ್ಯ ಬಿದ್ದರೆ ಸಿಬಿಐಗೆ

• ಉದಯವಾಹಿನಿ, ಕಲಬುರಗಿ

ಕರ್ನಾಟಕ ಮಹರ್ಷಿ ವಾಲ್ಮೀಕಿ ನಿಗಮದಲ್ಲಿ ನಡೆದಿದೆ ಎನ್ನಲಾದ ಹಣ ಅಕ್ರಮ ವರ್ಗಾವಣೆ ಬಗ್ಗೆ ರಾಜ್ಯ ಸರ್ಕಾರ ವಿಶೇಷ ತನಿಖಾ ತಂಡ (ಎಸ್‌ಐಟಿ)ದ ಮೂಲಕ ತನಿಖೆಗೆ ಆದೇಶಿಸಿದ್ದು, ಪ್ರಾಥಮಿಕ ವರದಿ ನೀಡಲಿದೆ. ಅಗತ್ಯ ಬಿದ್ದರೆ ಸಿಬಿಐಗೂ ಕೊಡೋಣ' ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತರಾಜ್ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದರು.

ನಗರದಲ್ಲಿ ತಮ್ಮನ್ನು ಭೇಟಿ ಮಾಡಿದ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 'ವಿರೋಧ ಪಕ್ಷದವರು ಕೇಳಿದ ಮಾತ್ರಕ್ಕೆ ಸಚಿವರು ರಾಜೀನಾಮೆ ನೀಡಬೇಕಾ? ಈ ಬಗ್ಗೆ ನಿರ್ಧಾರ ತೆಗೆದುಕೊಳ್ಳುವುದು ಮುಖ್ಯಮಂತ್ರಿ ಅವರ ಪರಮಾಧಿಕಾರವಾಗಿದೆ' ಎಂದರು. ಕೆಎಸ್‌ಐಡಿಎಲ್ ಗುತ್ತಿಗೆದಾರರೊಬ್ಬರು ಆತ್ಮಹತ್ಯೆ ಮಾಡಿಕೊಂಡಿರುವ ವಿಚಾರಕ್ಕೆ ಪ್ರತಿಕ್ರಿಯಿಸಿದ ಸಚಿವರು, 'ಗುತ್ತಿಗೆದಾರರ ಡೆತ್ ನೋಟ್‌ನಲ್ಲಿ ಕೆಲವೊಂದು ವೈಯಕ್ತಿಕ ವಿಚಾರ ಪ್ರಸ್ತಾಪಿಸಿದ್ದಾರೆ ಎನ್ನಲಾಗುತ್ತಿದೆ.

ಘಟನೆಯ ಹಿನ್ನೆಲೆಯ ಕುರಿತಂತೆ ತನಿಖೆಗೆ ಮೂವರು ಅಧಿಕಾರಿಗಳ ತಂಡ ರಚನೆ ಮಾಡಲಾಗಿದ್ದು, ತನಿಖೆ ನಡೆಯಲಿದೆ' ಎಂದರು.

> ಸಂವಿಧಾನದ 371 (ಜೆ) ಕಲಂ ವಿಚಾರಕ್ಕೆ ಸಂಬಂಧಿಸಿದಂತೆ ಪ್ರತಿಕ್ರಿಯಿಸಿದ ಪ್ರಿಯಾಂಕ್, 'ಹಿಂದಿನ ಬಿಜೆಪಿ ಸರ್ಕಾರದಲ್ಲಿ ಆದ ಕೆಲ ಗೊಂದಲಗಳನ್ನು ನಾವು ಸರಿಪಡಿಸಿದ್ದೇವೆ. ಕಲ್ಯಾಣ ಕರ್ನಾಟಕ ಭಾಗಕ್ಕೆ ಆದ ಐತಿಹಾಸಿಕ ಅನ್ಯಾಯ ಹಾಗೂ ಪ್ರಾದೇಶಿಕ ಅಸಮತೋಲನ ಸರಿಪಡಿಸುವ ಉದ್ದೇಶದಿಂದ ಸಂವಿಧಾನಕ್ಕೆ ತಿದ್ದುಪಡಿ ತಂದು ಆರ್ಟಿಕಲ್ 371 (ಜೆ) ಸೇರಿಸಲಾಗಿದೆ. ಹಾಗಾಗಿ, ಇದನ್ನು ವಿರೋಧಿಸುವವರು ನಮ್ಮ ಭಾಗದ ಅಭಿವೃದ್ಧಿಯನ್ನು ರಾಜ್ಯದ ಇತರೆ ಭಾಗದೊಂದಿಗೆ ಹೋಲಿಕೆ ಮಾಡಿ ನೋಡಲಿ. ಈ ಬಗ್ಗೆ ಈಗಾಗಲೇ ಕಾನೂನು ಸಚಿವರೊಂದಿಗೆ ಚರ್ಚೆ ನಡೆಸಿದ್ದೇನೆ
> - ಪ್ರಿಯಾಂಕ್ ಖರ್ಗೆ, ಸಚಿವ

ಮಾರುಕಟ್ಟೆಯಲ್ಲಿ ತರಕಾರಿ ಬೆಲೆ ಸ್ಥಿರ

• ಉದಯವಾಹಿನಿ, ರಾಯಚೂರು

ಮುಂಗಾರು ಪ್ರವೇಶ ಮಾಡುವ ಮೊದಲೇ ಕೆಲ ತರಕಾರಿಗಳ ಬೆಲೆ ಕಡಿಮೆಯಾಗಿದೆ. ಬಹುತೇಕ ತರ ಕಾರಿಗಳ ಬೆಲೆ ಸ್ಥಿರವಾಗಿದೆ. ಹವಾಮಾನದಲ್ಲಿ ಹೆಚ್ಚಿನ ಬದಲಾವಣೆಯಾಗದಿದ್ದರೆ ಇದೇ ಬೆಲೆ ಮುಂದುವರಿಯಲಿದೆ.

ಪ್ರತಿ ಕ್ವಿಂಟಲ್ ಹಸಿ ಮೆಣಸಿನಕಾಯಿ, ಕುಂಬಳಕಾಯಿ, ಗಜ್ಜರಿಗೆ 2 ಸಾವಿರ ಹಾಗೂ ಎಲೆ ಕೋಸು 1 ಸಾವಿರ ಹೆಚ್ಚಾಗಿದೆ. ಬೀಟ್‌ರೂಟ್, ಎಲೆಕೋಸು, ಹಿರೇಕಾಯಿ, ಸೌತೆಕಾಯಿ, ಹಾಗಲಕಾಯಿ ಹಾಗೂ ಮೆಂತೆ ಸೊಪ್ಪಿನ ಬೆಲೆ ಸ್ಥಿರವಾಗಿದೆ. ಈರುಳ್ಳಿ ಬೀನ್ಸ್, ಟೊಮೆಟೊ, ಬದನೆಕಾಯಿ. ತೊಂಡೆಕಾಯಿ, ಚವಳೆಕಾಯಿ, ತುಪ್ಪದ ಹಿರೇಕಾಯಿ, ಚವಳೆಕಾಯಿ ಬೆಲೆ ಕಡಿಮೆಯಾಗಿದೆ. ನಾಸಿಕ್, ಸೋಲಾಪುರದಿಂದ ಈರುಳ್ಳಿ ಹಾಗೂ ಬೆಳ್ಳುಳ್ಳಿ ಆವಕವಾಗಿದೆ. ಆಂಧ್ರಪ್ರದೇಶ, ತೆಲಂಗಾಣದ ಜಿಲ್ಲೆಗಳಿಂದ ಹಿರೇಕಾಯಿ, ಗಜ್ಜರಿ, ಅವರೆಕಾಯಿ, ಸೋರೆಕಾಯಿ, ಸೌತೆಕಾಯಿ, ಎಲೆಕೋಸು, ಹೂಕೋಸು ಹಾಗೂ ಸೊಪ್ಪು, ಬೆಳಗಾವಿ ಜಿಲ್ಲೆಯಿಂದ ಹಸಿ ಮೆಣಸಿನಕಾಯಿ, ಕೊತ್ತಂಬರಿ, ಮೆಂತೆ ಸೊಪ್ಪು ಇಲ್ಲಿನ ತರಕಾರಿ ಸಗಟು ಮಾರುಕಟ್ಟೆಗೆ ಬಂದಿದೆ.

ಒಂದು ವಾರ ಅಲ್ಲಲ್ಲಿ ಮಳೆ ಸುರಿದಿರುವ ಕಾರಣ ಕೆಲ ತರಕಾರಿಗಳ ಬೆಲೆ ಕಡಿಮೆಯಾಗಿದೆ. ಬಿಸಿಲು ಕಡಿಮೆ ಯಾಗಿರುವ ಕಾರಣ ತರಕಾರಿ ಕೊಳ್ಳುವವರಿಗೆ ಹೆಚ್ಚು ಸಮಸ್ಯೆಯಾಗಿಲ್ಲ, ಎರಡು ವಾರ ತರಕಾರಿ ಬೆಲೆ ಸ್ಥಿರವಾಗಿರುವ ಸಾಧ್ಯತೆ ಇದೆ

ಎರಡು ವಾರ ತರಕಾರಿ ಬೆಲೆ ಇಳಿಯುವ ಲಕ್ಷಣಗಳು ಇಲ್ಲ. 45 ದಿನಗಳ ನಂತರ ತರಕಾರಿ ಬೆಲೆಯಲ್ಲಿ ಕಡಿಮೆಯಾಗಲಿದೆ. ಮಳೆ ಬಾರದಿದ್ದರೆ ದರ ಹೆಚ್ಚಳವಾಗಲಿದೆ' ಎಂದು ತರಕಾರಿ ವ್ಯಾಪಾರಿ ಕೆ.ಶಶಿಕುಮಾರ ಹೇಳುತ್ತಾರೆ.

ಅಮರನಾಥ ಪಾಟೀಲ್ ಗೆಲುವು ಖಚಿತ: ಪ್ರಕಾಶ ಖಂಡ್ರೆ

• ಉದಯವಾಹಿನಿ, ಭಾಲ್ಕಿ

ಈಶಾನ್ಯ ಕ್ಷೇತ್ರದ ಪದವೀಧರರು ಪ್ರಬುದ್ಧ ಮತದಾರರಾಗಿದ್ದು, ಬಿಜೆಪಿ ಅಭ್ಯರ್ಥಿ ಅಮರನಾಥ ಪಾಟೀಲ ಗೆಲುವು ಖಚಿತವಾಗಿದೆ' ಎಂದು ಬಿಜೆಪಿ ಮುಖಂಡ, ಮಾಜಿ ಶಾಸಕ ಪ್ರಕಾಶ ಖಂಡ್ರೆ ಹೇಳಿದರು.

ಪಟ್ಟಣದ ಬಿಜೆಪಿ ಕಚೇರಿಯಲ್ಲಿ ಆಯೋಜಿಸಿದ್ದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿ, 'ಬಿಜೆಪಿಯ ಒಂದು ಶಾಸಕ, ಸಂಸದರೂ ಇಲ್ಲದ ಸಮಯದಲ್ಲಿಯೂ ಈ ಕ್ಷೇತ್ರದ ಮತದಾರರು ಬಿಜೆಪಿ ಕೈ ಹಿಡಿದ್ದಾರೆ.

ಪ್ರತಿಸಲ ಬಿಜೆಪಿಯನ್ನೇ ಗೆಲ್ಲಿಸುತ್ತ ಬಂದಿದ್ದಾರೆ. ಪದವೀಧರ, ಶಿಕ್ಷಕರ ಬಗ್ಗೆ ಸದಾ ಹೋರಾಟ ಮಾಡಿ, ಸದನದಲ್ಲಿ ಪದವೀಧರರ ಬೇಡಿಕೆಗೆ ಒತ್ತು ನೀಡುತ್ತ ಪದವೀಧರರ ಸಮಸ್ಯೆಗಳನ್ನು ಬಗೆ ಹರಿಸುವಲ್ಲಿ ಅಮರನಾಥ ಪಾಟೀಲರ ಪಾತ್ರ ಸಾಕಷ್ಟಿದೆ. ಹೀಗಾಗಿ ಮತ್ತೊಮ್ಮೆ ಅವರಿಗೆ ಪ್ರಥಮ ಪ್ರಾಶಸ್ತ್ಯದ ಮತ ನೀಡಿ ಗೆಲ್ಲಿಸಬೇಕು ಎಂದು ಮನವಿ ಮಾಡಿದರು. ಬಿಜೆಪಿ ಮಂಡಲ್ ಅಧ್ಯಕ್ಷ ವೀರಣ್ಣ ಕಾರಬಾರಿ ಮಾತನಾಡಿ, 'ಬೀದರ್‌ನ ಗುರುನಾನಕ ಕಾಲೇಜಿನಲ್ಲಿ ನಡೆದ ಘಟನೆಯಿಂದ ಕಾಂಗ್ರೇಸ್ ಸರ್ಕಾರದಲ್ಲಿ ಬಹುಸಂಖ್ಯಾತ ಹಿಂದೂಗಳು ಅಸುರಕ್ಷಿತರಾದ್ದಾರೆ. ಹಲ್ಲೆಮಾಡಿದವರನ್ನು ರಕ್ಷಿಸಿ, ಹಲ್ಲೆಗೊಳಗಾದವರ ಮೇಲೆಯೇ ಪ್ರಕರಣ ದಾಖಲಿಸಿರುವುದನ್ನು ಖಂಡಿಸುತ್ತೇವೆ. ಕಾಂಗ್ರೇಸ್ ಪಕ್ಷ ತುಷ್ಟೀಕರಣ ರಾಜಕಾರಣ ನಿಲ್ಲಿಸಿ, ಹಲ್ಲೆಗೊಳಗಾದವರಿಗೆ ನ್ಯಾಯ ಕೊಡಿಸಬೇಕು ಎಂದು ಆಗ್ರಹಿಸಿದರು.

ದಾವಣಗೆರೆಯ ಸಾಂಸ್ಕೃತಿಕ ಚೇತನ ಎಂ.ಜಿ ಈಶ್ವರಪ್ಪ

• ಉದಯವಾಹಿನಿ, ದಾವಣಗೆರೆ

ಉದಯವಾಹಿನಿ ಚಿತ್ರ

ಎಂ.ಜಿ. ಈಶ್ವರಪ್ಪ ಅವರು ಮಧ

ದಿನ ಭವಿಷ್ಯ

ರಾಹುಕಾಲ	ಬೆಳಿಗ್ಗೆ	07:30 ರಿಂದ 09:00
ಗುಳಿಕ ಕಾಲ	ಮಧ್ಯಾಹ್ನ	01:30 ರಿಂದ 03:00
ಯಮಗಂಡ ಕಾಲ	ಬೆಳಿಗ್ಗೆ	10:30 ರಿಂದ 12:00

ಮೇಷ ನಿಮ್ಮ ಆರೋಗ್ಯವನ್ನು ನಿರ್ಲಕ್ಷ್ಯ ಮಾಡಬೇಡಿ ವಿಶೇಷವಾಗಿ ಮದ್ಯಪಾನ ಮಾಡಬೇಡಿ. ರಿಯಲ್ ಎಸ್ಟೇಟ್ ಮತ್ತು ಆರ್ಥಿಕ ವ್ಯವಹಾರಗಳಿಗೆ ಒಳ್ಳೆಯ ದಿನ. ಒಬ್ಬ ಹಳೆಯ ಸ್ನೇಹಿತರು ಸಂಜೆ ನಿಮಗೆ ಕರೆ ಮಾಡುತ್ತಾರೆ.

ವೃಷಭ ಇಂದು, ನೀವು ಪ್ರೀತಿ ಎಲ್ಲದಕ್ಕೂ ಪರ್ಯಾಯವಾಗಿದೆ ಎಂದು ಅರ್ಥ ಮಾಡಿಕೊಳ್ಳುತ್ತೀರಿ. ಹೊಸ ಪಾಲುದಾರಿಕೆ ಇಂದು ಭರವಸೆಯಿಂದ ಕೂಡಿರುತ್ತವೆ. ಇಂದು ನೀವು ಉಚಿತ ಸಮಯವನ್ನು ಬಳಸುತ್ತೀರಿ.

ಮಿಥುನ ಮೋಜಿಗಾಗಿ ಹೊರಹೋಗುವವರಿಗೆ ಸಂತೋಷ ಮತ್ತು ಆನಂದವನ್ನು ಹಂಚಿಕೊಳ್ಳಿ. ಈ ರಾಶಿಚಕ್ರದ ವಿವಾಹಿತ ಜನರಿಗೆ ಇಂದು ಅತ್ತೆಮನೆಯ ಕಡೆಯಿಂದ ಹಣದ ಪ್ರಯೋಜನವಾಗುವ ಸಾಧ್ಯತೆ ಇದೆ.

ಕರ್ಕಾಟಕ ಇಂದು ಆರೋಗ್ಯ ಪರಿಪೂರ್ಣವಾಗಿರುತ್ತದೆ. ನೀವು ವಿಧ್ಯಾರ್ಥಿಯಾಗಿದ್ದರೆ ಮತ್ತು ವಿದೇಶಕ್ಕೆ ಹೋಗಿ ಅಧ್ಯಯನ ಮಾಡಲು ಬಯಸುತ್ತಿದ್ದರೆ ಆರ್ಥಿಕ ಬಿಕ್ಕಟ್ಟು ಇಂದು ನಿಮ್ಮ ಹಣೆಯ ಮೇಲೆ ಸುಕ್ಕು ತರಬಹುದು.

ಸಿಂಹ ನೀವು ಪರಿಸ್ಥಿತಿಯ ನಿಯಂತ್ರಣ ಹೊಂದುತ್ತಿದ್ದಂತೆ ನಿಮ್ಮ ಆತಂಕ ಕಣ್ಮರೆಯಾಗುತ್ತದೆ. ಇದು ಧೈರ್ಯದ ಮೊದಲ ಸ್ಪರ್ಶದಲ್ಲಿ ಕುಸಿದುಹೋಗುವ ಸಾಬೂನಿನ ಗುಳ್ಳೆಯಷ್ಟೇ ಗಟ್ಟಿಯೆಂದು ನೀವು ಅರ್ಥ ಮಾಡಿಕೊಳ್ಳುತ್ತೀರಿ.

ಕನ್ಯಾ ಹಣಕಾಸಿನ ವಿಷಯದ ಬಗ್ಗೆ ನೀವು ಕುಟುಂಬದ ಎಲ್ಲ ಸದಸ್ಯರಿಗೆ ಸ್ಪಷ್ಟವಾಗಿರಲು ಸಲಹೆ ನೀಡಬೇಕು. ನೀವು ಇನ್ನು ಮುಂದೆ ನಿಮ್ಮ ಕಾಮಪ್ರಚೋದಕ ಕಲ್ಪನೆಗಳ ಬಗ್ಗೆ ಕನಸು ಕಾಣಬೇಕಾಗಿಲ್ಲ.

ತುಲಾ ವಯಸ್ಸಾದವರು ತಮ್ಮ ಆರೋಗ್ಯವನ್ನು ನೋಡಿಕೊಳ್ಳಬೇಕು. ಇಂದು ನೀವು ನಿಮ್ಮ ಮಕ್ಕಳ ಕಾರಣದಿಂದ ಆರ್ಥಿಕ ಲಬಹವನ್ನು ಪಡೆಯುವ ಸಾಧ್ಯತೆ ಕಂಡುಬರುತ್ತಿದೆ. ಇದರಿಂದ ನೀವು ತುಂಬಾ ಸಂತೋಷಪಡುತ್ತೀರಿ.

ವೃಶ್ಚಿಕ ನಿಮ್ಮ ಮನಸ್ಸು ಒಳ್ಳೆಯ ವಿಷಯಗಳನ್ನು ಗ್ರಹಿಸುತ್ತದೆ. ತಮ್ಮ ಹಣವನ್ನು ಇನ್ನೊಬ್ಬರಿಗೆ ನೀಡಲು ಇಷ್ಟಪಡುವುದಿಲ್ಲ ಆದರೆ ಇಂದು ನೀವು ಅಗತ್ಯವಿರುವವರಿಗೆ ಹಣವನ್ನು ಕೊಟ್ಟು ವಿಶ್ರಾಂತಿಯನ್ನು ಅನುಭವಿಸುವಿರಿ.

ಧನಸ್ಸು ನೀವು ಯಾವುದೇ ವ್ಯಕ್ತಿಗೆ ಸಾಲ ನೀಡಿದ್ದರೆ, ಇಂದು ನೀವು ಆ ಹಣವನ್ನು ಮರಳಿ ಪಡೆಯುವ ನಿರೀಕ್ಷೆಯಿದೆ ಮನೆಯ ಸುತ್ತ ಸಣ್ಣ ಬದಲಾವಣೆಗಳು ಅದರ ನೋಟವನ್ನು ಸುಧಾರಿಸಲು ಸಹಾಯ ಮಾಡುತ್ತವೆ.

ಮಕರ ನೀವು ತುಂಬ ಆನಂದಿಸುವ ಕೆಲಸಗಳನ್ನು ಮಾಡಲು ಹೆಚ್ಚು ಸಮಯ ಕಳೆಯಬೇಕು. ಆಶೀರ್ವಾದ ಹಾಗೂ ಅದೃಷ್ಟ ನಿಮ್ಮ ಬಳಿ ಬರುತ್ತಿದ್ದ ಹಾಗೆ ನಿಮ್ಮ ಬಯಕೆಗಳು ಪೂರೈಸಲ್ಪಡುತ್ತವೆ.

ಕುಂಭ ನಿಮ್ಮ ಹೆಚ್ಚು ಆತ್ಮವಿಶ್ವಾಸವನ್ನು ಇಂದು ಚೆನ್ನಾಗಿ ಬಳಸಿಕೊಳ್ಳಲು ಪ್ರಯತ್ನಿಸಿ. ಒತ್ತಡದ ದಿನದ ಹೊರತಾಗಿಯೂ ನೀವು ನಿಮ್ಮ ಚೈತನ್ಯವನ್ನು ಮರಳಿ ಪಡೆಯಲು ಸಾಧ್ಯವಾಗುತ್ತದೆ.

ಮೀನ ಮಕ್ಕಳ ನಿಮ್ಮ ಸಂಜೆಯನ್ನು ಉಲ್ಲಾಸಮಯವಾಗಿಸುತ್ತಾರೆ. ಮಂಕು ಕವಿದ ಮತ್ತು ಒತ್ತಡದ ದಿನಕ್ಕೆ ಮಂಗಳ ಹಾಡಲು ಒಂದು ಸಂತೋಷಕೂಟವನ್ನು ಯೋಜಿಸಿ. ಮಕ್ಕಳ ಸಾಂಗತ್ಯ ನಿಮ್ಮ ದೇಹವನ್ನು ಪುನಃಶ್ಚೇತನಗೊಳಿಸುತ್ತದೆ.

ಆಶ್ವಾಸನೆಗಷ್ಟೇ ಸೀಮಿತವಾದ ಸರಕಾರಿ ಮೆಡಿಕಲ್ ಕಾಲೇಜು

ಜನಪ್ರತಿನಿಧಿಗಳ ಇಚ್ಛಾಶಕ್ತಿ ಕೊರತೆ, ಚುನಾವಣೆ ಹೊತ್ತಿನಲ್ಲಿ ಮಾತ್ರ ಭರವಸೆ ನೀಡುತ್ತಿರುವುದು ಜನರ ಆಕ್ರೋಶಕ್ಕೆ ಕಾರಣ

• ಉದಯವಾಹಿನಿ ಉಡುಪಿ

ಕೇಂದ್ರ ಸರಕಾರಕ್ಕೆ ಪ್ರಸ್ತಾವನೆ

ಜಿಲ್ಲೆಯ ಬಹುಕಾಲದ ಬೇಡಿಕೆಯಾದ ಸರಕಾರಿ ವೈದ್ಯಕೀಯ ಕಾಲೇಜು ಕೇವಲ ಚುನಾವಣೆ ಆಶ್ವಾಸನೆಗಷ್ಟೇ ಸೀಮಿತಗೊಂಡಿದೆ. ಜನಪ್ರತಿನಿಧಿಗಳ ಇಚ್ಛಾಶಕ್ತಿ ಕೊರತೆಯಿಂದ ನೇಪಥ್ಯಕ್ಕೆ ಸರಿದಾಗಿದೆಯಾದರೂ ಚುನಾವಣೆ ಹೊತ್ತಿನಲ್ಲಿ ಮಾತ್ರ ಭರವಸೆ ನೀಡುತ್ತಿರುವುದು ಜನರ ಆಕ್ರೋಶಕ್ಕೆ ಕಾರಣವಾಗಿದೆ.

ಜಿಲ್ಲೆಗೆ ಸರಕಾರಿ ವೈದ್ಯಕೀಯ ಕಾಲೇಜು ಆರಂಭಗೊಂಡರೆ ಜಿಲ್ಲೆಯ ಪ್ರತಿಭಾವಂತ ಬಡ ವಿದ್ಯಾರ್ಥಿಗಳು ನೀಟ್ ಪರೀಕ್ಷೆಯಲ್ಲಿ ಉತ್ತಮ ಅಂಕ ಪಡೆದರೆ ಇಲ್ಲಿಯೇ ಸರಕಾರಿ ಸೀಟ್ ಕೂಡ ಸಿಗಬಹುದು.

ಸರಕಾರಿ ಶುಲ್ಕ ವಾರ್ಷಿಕ 60 ಸಾವಿರದಿಂದ 70 ಸಾವಿರ ರೂ. ಇದ್ದರೆ ಖಾಸಗಿ ಕಾಲೇಜಿನಲ್ಲಿ ಸರಕಾರಿ ಸೀಟಿಗೆ 1.50 ಲ.ರೂ.ಗಳಷ್ಟಿದೆ. ಖಾಸಗಿಯಲ್ಲಿ ದುಬಾರಿ ಶುಲ್ಕ ಇರುವುದರಿಂದ ಜಿಲ್ಲೆಯ ಹಲವಾರು ಮಂದಿ ಪ್ರತಿಭಾನ್ವಿತ ಬಡಮಕ್ಕಳು ವೈದ್ಯಕೀಯ ಶಿಕ್ಷಣದಿಂದಲೇ ವಂಚಿತವಾಗುತ್ತಿದ್ದಾರೆ.

ಬ್ರಹ್ಮಾವರ ತಾಲ್ಲೂಕಿನ ಉಪ್ಪೂರಿನಲ್ಲಿ 30 ಎಕರೆ ಜಮೀನನನ್ನು ಸರಕಾರ ವೈದ್ಯಕೀಯ ಕಾಲೇಜು ನಿರ್ಮಾಣಕ್ಕೆ ಮೀಸಲಿರಿಸಿದೆಯಾದರೂ ಅನಂತರ ಯಾವುದೇ ಬೆಳವಣಿಗೆ ನಡೆದಿಲ್ಲ.

ಈ ನಡುವೆ ವೈದ್ಯಕೀಯ ಕಾಲೇಜು ಸ್ಥಾಪನೆಗೆ ವೈದ್ಯಕೀಯ ಶಿಕ್ಷಣ ಇಲಾಖೆ/ಆರೋಗ್ಯ ಇಲಾಖೆಯಿಂದ ಅನುಮೋದನೆಯಾಗಿದೆಯೇ, ಆಗಿದ್ದಲ್ಲಿ ಪ್ರಸ್ತಾವಿ ಸಿರುವ ಜಮೀನಿನಲ್ಲಿ ವೈದ್ಯಕೀಯ ಕಾಲೇಜು ನಿರ್ಮಿಸಲು ಸಂಬಂಧಪಟ್ಟ ಇಲಾಖೆ ಒಪ್ಪಿದೆಯೇ ಹಾಗೂ ಯಾವ ಹೆಸರಿನ ಇಲಾಖೆಯಲ್ಲಿ ಮಂಜೂರು ಮಾಡಬೇಕು ಎಂಬುದನ್ನು ತಿಳಿಸುವಂತೆ ಕಂದಾಯ ಇಲಾಖೆ ವತಿಯಿಂದ 2022ರಲ್ಲಿ ಜಿಲ್ಲಾಧಿಕಾರಿ ಕಚೇರಿಗೆ ಪತ್ರ ಬಂದಿದೆ.

ಈ ನಡುವೆ ಸರಕಾರ ಖಾಸಗಿ ಹಾಗೂ ಸಾರ್ವಜನಿಕ ಸಹಭಾಗಿತ್ವದಲ್ಲಿ ವೈದ್ಯಕೀಯ ಕಾಲೇಜು ನಿರ್ಮಾಣಕ್ಕೆ ಹೊರಟಿದ್ದು, ಇದಕ್ಕೆ ಜಿಲ್ಲೆಯಲ್ಲಿ ವಿರೋಧ ವ್ಯಕ್ತವಾಗಿದೆ. ವೈದ್ಯಕೀಯ ಕಾಲೇಜು ಸಂಪೂರ್ಣ ಸರಕಾರದ ನಿಯಂತ್ರಣದಲ್ಲೇ ಇರಬೇಕೆಂಬುದು ಜನರ ಆಗ್ರಹ. ಪಿಪಿಪಿ ಮಾದರಿಯಲ್ಲಿ ವೈದ್ಯಕೀಯ ಕಾಲೇಜು ನಿರ್ಮಾಣಗೊಂಡರೆ ಶೇ. 50 ಸೀಟು ಸರಕಾರಕ್ಕೆ ಹಾಗೂ ಶೇ. 50 ಸೀಟುಗಳು ಖಾಸಗಿ ಸಂಸ್ಥೆಯ ಪಾಲಾಗುತ್ತದೆ. ಇದರಲ್ಲಿ ಎನ್ ಆರ್ ಐ ವಿದ್ಯಾರ್ಥಿಗಳಿಗೆ ಶೇ. 15ರಷ್ಟು ಸೀಟು ಮೀಸಲಿಡಬೇಕು. ಎನ್ ಆರ್ ಐಗಳಿಂದ ಎಷ್ಟು ಶುಲ್ಕ ಪಡೆಯಬೇಕು ಎಂಬುದನ್ನು ಖಾಸಗಿ ಸಂಸ್ಥೆಯೇ ನಿರ್ಧರಿಸುವುದರಿಂದ ಲಕ್ಷಾಂತರ ರೂ. ಆದಾಯ ಹರಿದುಬರಲಿದೆ.

ಬೆರಳೆಣಿಕೆ ಸೀಟುಗಳು ಮಾತ್ರ ಜಿಲ್ಲೆಯ ವಿದ್ಯಾರ್ಥಿಗಳಿಗೆ ಸಿಗುವಂತಾಗುತ್ತದೆ. ಇದರಿಂದ ಜಿಲ್ಲೆಯ ಮಕ್ಕಳಿಗೆ ಅನ್ಯಾಯವಾಗಲಿದೆ ಎನ್ನುತ್ತಾರೆ ಸರಕಾರಿ ಮೆಡಿಕಲ್ ಕಾಲೇಜಿಗಾಗಿ ಹೋರಾಟ ನಡೆಸುತ್ತಿರುವ ಡಾ। ಪಿ.ವಿ. ಭಂಡಾರಿ.

ಚುನಾವಣೆ ಸಂದರ್ಭ ಬಹುತೇಕ ಎಲ್ಲಾ ಪಕ್ಷಗಳ ಪ್ರಣಾಳಿಕೆಯಲ್ಲಿಯೂ ಜಿಲ್ಲೆಗೆ ಸರಕಾರಿ ವೈದ್ಯಕೀಯ ಕಾಲೇಜು ಸ್ಥಾಪನೆಯ ಬಗ್ಗೆ ಉಲ್ಲೇಖ ಇರುತ್ತದೆಯಾದರೂ ಚುನಾವಣೆ ಮುಗಿದ ಬಳಿಕ ಅಷ್ಟೇ ವೇಗದಲ್ಲಿ ಮರೆಯಾಗುತ್ತಿದೆ. ಈ ಬಗ್ಗೆ ಕೆಲವೊಂದು ಬಾರಿಯಷ್ಟೇ ಹೋರಾಟಗಳು ನಡೆಯುತ್ತಿವೆಯಾದರೂ ತೀವ್ರ ಸ್ವರೂಪ ಪಡೆದುಕೊಂಡಿಲ್ಲ.

ಉದಯವಾಹಿನಿ ಚಿತ್ರ

ಸರಕಾರಿ ವೈದ್ಯಕೀಯ ಕಾಲೇಜು ಆರಂಭಿಸುವುದಾಗಿ ಸರಕಾರ ಈಗಾಗಲೇ ಘೋಷಣೆ ಮಾಡಿದೆ. ಬ್ರಹ್ಮಾವರದಲ್ಲಿ ಜಾಗವನ್ನೂ ನಿಗದಿಗೊಳಿಸಲಾಗಿದೆ. ವೈದ್ಯಕೀಯ ಶಿಕ್ಷಣ ವಿಭಾಗದಿಂದ ಕೇಂದ್ರ ಸರಕಾರಕ್ಕೆ ಪ್ರಸ್ತಾವನೆ ಸಲ್ಲಿಕೆಯಾದ ಬಳಿಕ ಇದು ವೇಗ ಪಡೆದುಕೊಳ್ಳಲಿದೆ

-ಡಾ। ಕೆ. ವಿದ್ಯಾಕುಮಾರಿ, ಜಿಲ್ಲಾಧಿಕಾರಿ

ಕಾಲೇಜು ನಿರ್ಮಾಣಕ್ಕಾಗಿ ಹೋರಾಟ

ಪ್ರಸ್ತುತ ಸರಕಾರದ ಸುಪರ್ದಿಯಲ್ಲಿರುವ ಕೂಸಮ್ಮ ಶಂಭು ಶೆಟ್ಟಿ ಬಿಆರ್‌ಎಸ್ ಆಸ್ಪತ್ರೆ ಇರುವ ಜಾಗದಲ್ಲಿಯೂ ವೈದ್ಯಕೀಯ ಕಾಲೇಜು ನಿರ್ಮಾಣ ಮಾಡಬಹುದು. ಅಜ್ಜರಕಾಡು ಜಿಲ್ಲಾಸ್ಪತ್ರೆಯ 300 ಬೆಡ್, ಕೂಸಮ್ಮ ಶಂಭು ಶೆಟ್ಟಿ ಆಸ್ಪತ್ರೆಯ 200 ಬೆಡ್ ಹಾಗೂ ಪಕ್ಕದಲ್ಲಿರುವ ಜಾಗದಲ್ಲಿ 200 ಬೆಡ್‌ಗಳ ಆಸ್ಪತ್ರೆ ನಿರ್ಮಾಣಕ್ಕೆ ಅವಕಾಶವಿದೆ. 700 ಬೆಡ್‌ಗಳ ಆಸ್ಪತ್ರೆಯ ಜತೆಗೆ ಇಲ್ಲಿಯೇ ಸುತ್ತಮುತ್ತ 7 ಕಿ.ಮೀ.ವ್ಯಾಪ್ತಿಯಲ್ಲಿ ಕಾಲೇಜು ಹಾಗೂ ಅದಕ್ಕೆ ಬೇಕಿರುವ ಹಾಸ್ಟೆಲ್‌ಗಳನ್ನೂ ನಿರ್ಮಿಸಬಹುದು. ಇದರಿಂದ ನಗರಭಾಗದಲ್ಲಿಯೇ ಕಾಲೇಜು ನಿರ್ಮಾಣ ಆದಂತೆಯೂ ಆಗುತ್ತದೆ ಎಂಬುವುದು ಕಾಲೇಜು ನಿರ್ಮಾಣಕ್ಕಾಗಿ ಹೋರಾಡುತ್ತಿರುವವರ ಅನಿಸಿಕೆಯಾಗಿದೆ.

ಪಿಎಂ ಫಸಲ್ ಬಿಮಾ ಯೋಜನೆ: ನೋಂದಣಿ ಶುರು

• ಉದಯವಾಹಿನಿ ಧಾರವಾಡ

ಕರ್ನಾಟಕ ಸರ್ಕಾರದಿಂದ 2024ರ ಮುಂಗಾರು ಹಂಗಾಮಿನಲ್ಲಿ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಭೀಮಾ (ವಿಮಾ) ಯೋಜನೆಯನ್ನು ಜಿಲ್ಲೆಯ ಎಂಟು ತಾಲ್ಲೂಕಿನ 14 ಹೋಬಳಿಗಳಲ್ಲಿ ಅನುಷ್ಠಾನಗೊಳಿಸಲು ಮಂಜೂರಾತಿ ನೀಡಲಾಗಿದೆ ಎಂದು ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಡಾ.ಕಿರಣಕುಮಾರ್ ಎಂ. ಅವರು ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಧಾರವಾಡ ಜಿಲ್ಲೆಯಲ್ಲಿ ಯೋಜನೆಯ ವ್ಯಾಪ್ತಿಗೆ ಒಳಪಟ್ಟಿರುವ ಹೋಬಳಿ ಮಟ್ಟದ 14 ಬೆಳೆಗಳಾದ ಭತ್ತ, ಮುಸುಕಿನ ಜೋಳ, ನೆಲಗಡಲೆ, ಹತ್ತಿ, ಈರುಳ್ಳಿ, ಆಲೂಗಡ್ಡೆ, ಟೊಮ್ಯಾಟೊ ಹಾಗೂ ಕೆಂಪು ಮೆಣಸಿನಕಾಯಿ ಬೆಳೆಗಳು ನೀರಾವರಿ ಮತ್ತು ಮಳೆ ಆಶ್ರಿತ ಬೆಳೆಗಳಾಗಿವೆ. ಜೋಳ, ಸಾವೆ, ಉದ್ದು, ತೊಗರಿ, ಹೆಸರು ಹಾಗೂ ಸೋಯಾ ಅವರೆ ಬೆಳೆಗಳು ಮಳೆ ಆಶ್ರಿತ ಬೆಳೆಗಳಾಗಿವೆ ಎಂದರು. ಗ್ರಾಮ ಪಂಚಾಯತಿ ಮಟ್ಟದ ಬೆಳೆಗಳಾದ ಧಾರವಾಡ ಮತ್ತು ಅಳ್ನಾವರ ತಾಲ್ಲೂಕಿನಲ್ಲಿ ಭತ್ತ, ಕಲಘಟಗಿ ತಾಲ್ಲೂಕಿನಲ್ಲಿ ಭತ್ತ ಮತ್ತು ಮುಸುಕಿನಜೋಳ, ಹುಬ್ಬಳ್ಳಿ ಮತ್ತು ಹುಬ್ಬಳ್ಳಿ ನಗರ ತಾಲ್ಲೂಕಿನಲ್ಲಿ ನೆಲಗಡಲೆ(ಶೇಂಗಾ), ಕುಂದಗೋಳ ತಾಲ್ಲೂಕಿನಲ್ಲಿ ನೆಲಗಡಲೆ(ಶೇಂಗಾ) ಮತ್ತು ಹತ್ತಿ, ನವಲಗುಂದ ಮತ್ತು ಅಣ್ಣಿಗೇರಿ ತಾಲ್ಲೂಕಿನಲ್ಲಿ ಮುಸುಕಿನಜೋಳ, ಹೆಸರು ಮಳೆ ಆಶ್ರಿತ ಬೆಳೆಗಳಾಗಿವೆ.

ಉದಯವಾಹಿನಿ ಚಿತ್ರ

ಬೆಳೆಸಾಲ ಪಡೆಯುವ ಹಾಗೂ ಪಡೆಯದ ರೈತರಿಗೆ, ಇತರೆ ಬೆಳೆಗಳಿಗೆ 2024 ಜುಲೈ 31ರ ಒಳಗಾಗಿ ಅರ್ಜಿ ಸಲ್ಲಿಸಬೇಕು. ಮತ್ತು ನೀರಾವರಿ ಹಾಗೂ ಮಳೆ ಆಶ್ರಿತ ಬೆಳೆಗೆ ಕೆಂಪು ಮೆಣಸಿನಕಾಯಿ ಬೆಳೆಗೆ ಅರ್ಜಿ ಸಲ್ಲಿಸಿ, ನೋಂದಾಯಿಸಿಕೊಳ್ಳಲು, 2024 ಅಗಸ್ಟ್ 16, ಕೊನೆಯ ದಿನವಾಗಿದೆ. ರೈತರು ನಿಗದಿತ ಅವಧಿಯಲ್ಲಿ ಅರ್ಜಿ ಸಲ್ಲಿಸಬೇಕು

-ಡಾ.ಕಿರಣಕುಮಾರ್ ಎಂ.
ಕೃಷಿ ಇಲಾಖೆಯ ಜಂಟಿ ನಿರ್ದೇಶಕ

ಕಾಂಗ್ರೇಸ್ ಸರ್ಕಾರ ಸುಳ್ಳು ಹೇಳುವುದರಲ್ಲಿ ನಿಸ್ಸೀಮ: ಜೋಶಿ

• ಉದಯವಾಹಿನಿ ಹುಬ್ಬಳ್ಳಿ

ವಾಲ್ಮೀಕಿ ನಿಗಮದ ಹಗರಣದಲ್ಲಿ ಸಿಎಂ ಆದಿಯಾಗಿ ಎಲ್ಲರೂ ಭಾಗಿಯಾಗಿದ್ದಾರೆ. ಹೀಗಾಗಿ ಮೊದಲು ಮಂತ್ರಿಯನ್ನು ಬಂಧಿಸಬೇಕು. ನಂತರ ಸಿಬಿಐ ತನಿಖೆಗೆ ವಹಿಸಬೇಕು. ಆಗ ಸಿಎಂ ಇದರಲ್ಲಿ ಹೇಗೆ ಭಾಗಿಯಾಗಿದ್ದಾರೆಂಬ ಸಂಗತಿ ಗೊತ್ತಾಗಲಿದೆ ಎಂದು ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಪ್ರಲ್ಹಾದ ಜೋಶಿ ಹೇಳಿದ್ದಾರೆ.

ರವಿವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯ ಕಾಂಗ್ರೇಸ್ ಸರ್ಕಾರ ಸುಳ್ಳು ಹೇಳುವುದರಲ್ಲಿ, ದಾರಿ ತಪ್ಪಿಸುವಲ್ಲಿ ನಿಸ್ಸೀಮವಾಗಿದೆ. ಇದೀಗ ವಾಲ್ಮೀಕಿ ನಿಗಮದ ಹಗರಣದಲ್ಲಿ ಯಾವುದೇ ಸಂಪರ್ಕವಿಲ್ಲದ ಒಂಬತ್ತು ಕಂಪನಿಗಳಿಗೆ ಹಣ ವರ್ಗಾವಣೆಯಾಗಿದೆ. ಇಷ್ಟಾದರೂ ಆರೋಪ ಹೊತ್ತಿರುವ ಸಚಿವನಿಂದ ರಾಜೀನಾಮೆ ಕೊಡಿಸಲು ಆಗುತ್ತಿಲ್ಲ ಎಂದು ಹರಿಹಾಯ್ದರು.

ಚುನಾವಣೋತ್ತರ ಸಮೀಕ್ಷೆಗಳಲ್ಲಿ ಬಿಜೆಪಿ ನೇತೃತ್ವದ ಎನ್‌ಡಿಎ ಪ್ರಚಂಡ ಬಹುಮತದೊಂದಿಗೆ ಜಯಸಾಧಿಸಲಿದೆ ಎನ್ನುವುದು ಬಂದಿದೆ. ಚುನಾವಣೆ ಮೊದಲು, ನಂತರವೂ ಬಿಜೆಪಿ ಪ್ರಚಂಡ ಬಹುಮತದೊಂದಿಗೆ ಮೋದಿ ನೇತೃತ್ವದಲ್ಲಿ ನಾವು ಜಯಗಳಿಸಲಿದ್ದೇವೆ ಎಂಬ ಮಾತು ಹೇಳಿದ್ದೆ. ಅದೇ ತರಹ ಅಮಿತ್ ಶಾ, ರಾಜನಾಥ್ ಸಿಂಗ್ ಎಲ್ಲರೂ ಹೇಳಿದ್ದರು. ಅದರ ಬಗ್ಗೆ ಕೆಲವರು ಸಂಶಯ ವ್ಯಕ್ತಪಡಿಸಿದ್ದರು. ಇದೀಗ ಹೆಚ್ಚು ಕಡಿಮೆ ಪಕ್ಷದ ನಾಯಕರ ಭವಿಷ್ಯಗಳು ಖಚಿತವಾಗಿವೆ. ಚುನಾವಣೆ ಫಲಿತಾಂಶ ಬಳಿಕ ಎಕ್ಸಿಟ್ ಪೋಲ್‌ಗಿಂತಲೂ ಬಿಜೆಪಿ 400ಕ್ಕಿಂತ ಅಧಿಕ ಸೀಟ್‌ಗಳನ್ನು ಪಡೆಯಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.



ಕಾಂಗ್ರೇಸ್‌ನವರಿಗೆ ದೇಶದ ಚುನಾವಣಾ ಆಯೋಗ, ಸುಪ್ರೀಂ ಕೋರ್ಟ್, ಸಿಎಜಿ ಸೇರಿದಂತೆ ಯಾವುದೇ ರೀತಿಯಾದ ಸಂವಿಧಾನ ಆಧಾರದ ಮೇಲೆ ನಿರ್ಮಾಣವಾದ ಸ್ವಾಯತ್ತ ಸಂಸ್ಥೆಗಳ ಮೇಲೆ ನಂಬಿಕೆಯಿಲ್ಲ. ಜನತಾ ಜನಾರ್ಧನನ ಮೇಲೆ ವಿಶ್ವಾಸವಿಲ್ಲ. ಹೀಗಾಗಿ ಜನರು ಕಾಂಗ್ರೇಸ್ ಮೇಲೆ ನಂಬಿಕೆ ಇಟ್ಟಿಲ್ಲ -ಪ್ರಲ್ಹಾದ ಜೋಶಿ

ಸರ್ಕಾರಿ ಶಾಲೆಯ ಅಡ್ಮಿಷನ್‌ಗಾಗಿ ರಾತ್ರಿಯಿಡೀ ಕ್ಯೂ ನಿಂತ ಪಾಲಕರು

• ಉದಯವಾಹಿನಿ ರಬಕವಿ-ಬನಹಟ್ಟಿ

ಇತ್ತೀಚಿನ ದಿನಗಳಲ್ಲಿ ಪೋಷಕರು ಮಕ್ಕಳಿಗೆ ಒಳ್ಳೆಯ ಶಿಕ್ಷಣ ನೀಡಬೇಕು ಖಾಸಗಿ ಶಾಲೆಗಳಿಗೆ ಸೇರಿಸಿದರೆ ಒಳ್ಳೆಯ ಶಿಕ್ಷಣ ಕೊಡುತ್ತಾರೆ ಎಂಬ ಭ್ರಮೆ ಈಗಿನ ಪೀಳಿಗೆಯ ಜನರಲ್ಲಿ ಹೆಚ್ಚು ನೋಡುತ್ತೇವೆ ಆದರಲ್ಲೂ ನಗರ ಪ್ರದೇಶಗಳ ಪೋಷಕರು ಮಗು ಹುಟ್ಟುವ ಮೊದಲೇ ಖಾಸಗಿ ಶಾಲೆಗಳಲ್ಲಿ ಲಕ್ಷ ಲಕ್ಷಗೆಟ್ಟಲೆ ಡೊನೇಶನ್ ಕೊಟ್ಟು ಮಕ್ಕಳನ್ನು ಸೇರಿಸಲು ತುದಿಗಾಲಿನಲ್ಲಿ ನಿಲ್ಲುತ್ತಾರೆ.

ಆದರೆ ಈ ಬಾಗಲಕೋಟೆ ಜಿಲ್ಲೆಯ ನಾವಲಗಿ ಗ್ರಾಮದಲ್ಲಿರುವ ಸರ್ಕಾರಿ ಶಾಲೆ ಯಾವ ಖಾಸಗಿ ಶಾಲೆಗೂ ಕಮ್ಮಿ ಇಲ್ಲ ಎಂಬಂತಿದೆ ಅಲ್ಲದೆ ಇಲ್ಲಿಗೆ ಮಕ್ಕಳನ್ನು ಸೇರಿಸಲು ಪೋಷಕರು ರಾತ್ರಿಯಿಡಿ ಶಾಲೆಯ ಆವರಣದಲ್ಲಿ ಸರತಿ ಸಾಲಿನಲ್ಲಿ ನಿಂತು ತಮ್ಮ ಮಕ್ಕಳ ದಾಖಲಾತಿಯನ್ನು ಮಾಡುತ್ತಾರೆ ಎಂದರೆ ನಂಬಲೇಬೇಕು.

ಹೌದು ನಾವಲಗಿ ಗ್ರಾಮದ ಕರ್ನಾಟಕ ಪಬ್ಲಿಕ್ ಸ್ಕೂಲ್ (ಪೂರ್ವ ಪ್ರಾಥಮಿಕ ವಿಭಾಗದ ಆಂಗ್ಲಮಾಧ್ಯಮ)ನಲ್ಲಿ ಪೋಷಕರು ತಮ್ಮ ಮಕ್ಕಳನ್ನು ಶಾಲೆಗೆ ದಾಖಲಿಸಲು ರಾತ್ರಿಯೇ ಕ್ಯೂ ನಿಂತಿದ್ದಾರೆ ಇದಕ್ಕೆ ಕಾರಣ ಸರ್ಕಾರದ ನಿಯಮದ ಪ್ರಕಾರ ಆಂಗ್ಲ ಮಾಧ್ಯಮದ ಶಾಲೆಗಳಲ್ಲಿ 30 ಸೀಟ್ ಗಳ ಭರ್ತಿಗೆ ಮಾತ್ರ ಅವಕಾಶ ನೀಡಿರುವುದು, ಇಲ್ಲಿನ ಆಂಗ್ಲ ಮಾಧ್ಯಮ ಶಾಲೆ ಬಹಳ ಹೆಸರುವಾಸಿಯಾಗಿದ್ದು ಅಲ್ಲದೆ ಇಲ್ಲಿನ ಶಿಕ್ಷಣ ಗುಣಮಟ್ಟ ಉತ್ತಮ್ಮವಾಗಿರುವುದರಿಂದ ಹೆಚ್ಚಿನ ಪೋಷಕರು ತಮ್ಮ ಮಕ್ಕಳನ್ನು ಇದೆ ಶಾಲೆಗೆ ಸೇರಿಸಲು ಬಯಸುತಿದ್ದರೆ ಆದರೆ ಇಲ್ಲಿ ಕೇವಲ ಮೂವತ್ತು ವಿದ್ಯಾರ್ಥಿಗಳಿಗೆ ಮಾತ್ರ ಅವಕಾಶ ನೀಡಿರುವುದರಿಂದ ಮೊದಲು ಬಂದವರಿಗೆ ಆದ್ಯತೆ ನೀಡಲಾಗುದಗಿ ಶಾಲಾ ಆಡಳಿತ ಮಂಡಳಿ ನೀಡಿರುವ ಸೂಚನೆಯ ಮೇರೆಗೆ ಪೋಷಕರು ರಾತ್ರಿಯೇ ಶಾಲೆಯ ಬಳಿ ಸಾಲಿನಲ್ಲಿ ನಿಂತು ತಮ್ಮ ಮಕ್

ಮುಂದಿನ ದಿನಗಳಲ್ಲಿ ಇನ್ನಷ್ಟು ಉಡುಗೊರೆ ರವಾನಿಸುವ ಭರವಸೆ

ದಕ್ಷಿಣ ಕೊರಿಯಾಗೆ ಕಸ ತುಂಬಿದ 600 ಬಲೂನ್ ಹಾರಿಬಿಟ್ಟ ಉತ್ತರ ಕೊರಿಯಾ, ಇದು ಪ್ರಾಮಾಣಿಕ ಉಡುಗೊರೆಯಂತೆ

ದಕ್ಷಿಣ ಕೊರಿಯಾ: ದಾಯಾದಿ ಕಲಹಕ್ಕೆ ಹೆಸರಾದ ಉತ್ತರ ಕೊರಿಯಾ ಹಾಗೂ ದಕ್ಷಿಣ ಕೊರಿಯಾ ದೇಶಗಳು ಇದೀಗ ವಿಚಿತ್ರ ಕಾರಣದಿಂದಾಗಿ ವಿಶ್ವಾದ್ಯಂತ ಸುದ್ದಿಯಲ್ಲಿವೆ. ತನ್ನ ಹುಚ್ಚುತನ ನಿರ್ಧಾರಗಳಿಂದಲೇ ಹೆಸರಾದ ಉತ್ತರ ಕೊರಿಯಾದ ಸರ್ವಾಧಿಕಾರಿ ಕಿಮ್ ಜಾಂಗ್ ಉನ್ ಆದೇಶದ ಮೇರೆಗೆ ದಕ್ಷಿಣ ಕೊರಿಯಾ ದೇಶಕ್ಕೆ ಕಸ ತುಂಬಿದ 600 ಬಲೂನ್ ಗಳನ್ನ ಹಾರಿ ಬಿಡಲಾಗಿದೆ. ಈ ವಿಚಾರವನ್ನ ದಕ್ಷಿಣ ಕೊರಿಯಾ ಸೇನೆ ಖಚಿತಪಡಿಸಿದೆ.

ಹಾನಿಕರ ವಸ್ತುಗಳು ಇಲ್ಲ

ಶನಿವಾರ ಸಂಜೆ ವೇಳೆಗೆ ಉತ್ತರ ಕೊರಿಯಾದಿಂದ ದಕ್ಷಿಣ ಕೊರಿಯಾದತ್ತ ಹಾರಿದ ಬಲೂನ್‌ಗಳು, ರಾತ್ರಿವರೆಗೂ ಸಾಲು ಸಾಲಾಗಿ ದಕ್ಷಿಣ ಕೊರಿಯಾಗಡಿ ಒಳಗೆ ಬಿದ್ದಿವೆ. ಸುಮಾರು 600ಕ್ಕೂ ಹೆಚ್ಚು ಬಲೂನ್ ಗಳು ಉತ್ತರ ಕೊರಿಯಾದಿಂದ ದಕ್ಷಿಣ ಕೊರಿಯಾಗೆ ಹಾರಿ ಬಂದು ಬಿದ್ದಿದ್ದು, ಈ ಬಲೂನ್‌ಗಳಲ್ಲಿ ಪೇಪರ್ ತುಂಡುಗಳು, ಹಳೇ ಬಟ್ಟೆ ತುಂಡುಗಳು ಹಾಗೂ ಸಿಗರೇಟ್ ಬಡ್‌ಗಳು ತುಂಬಿದ್ದವು. ಈ ಬಲೂನ್ ಗಳು ದಕ್ಷಿಣ ಕೊರಿಯಾ ದೇಶದ ತುಂಬೆಲ್ಲಾ ಹರಡಿವೆ ಎಂದು ಸೇನೆ ಹೇಳಿದ್ದು, ಇದೀಗ ದಕ್ಷಿಣ ಕೊರಿಯಾದ ಜನಕ್ಕೆ ಕಸ ಬಾಚುವ ತಲೆನೋವು ಎದುರಾಗಿದೆ.

ಈ ಕುರಿತಾಗಿ ದಕ್ಷಿಣ ಕೊರಿಯಾ ಸೇನೆಯ ಜಂಟಿ ಮುಖ್ಯಸ್ಥರು ಮಾಧ್ಯಮಗಳಿಗೆ ಮಾಹಿತಿ ನೀಡಿದ್ದು, ಕಸ ತುಂಬಿದ ಬಲೂನ್‌ಗಳಲ್ಲಿ ಯಾವುದೇ ಜೀವ ಹಾನಿಯಾಗುವಂಥಾ ಹಾನಿಕರ ವಸ್ತುಗಳು ಇಲ್ಲ ಎಂದು ಖಚಿತಪಡಿಸಿದ್ದಾರೆ. ಕಳೆದ ಕೆಲವು ದಿನಗಳ ಹಿಂದೆಯೂ ಉತ್ತರ ಕೊರಿಯಾ ಗಡಿಯಿಂದ ದಕ್ಷಿಣ ಕೊರಿಯಾ ಗಡಿ ಒಳಗೆ ಸುಮಾರು 150 ಬಲೂನ್‌ಗಳು ಹಾರಿ ಬಂದಿದ್ದವು. ಇವುಗಳಲ್ಲಿ ಬಳಸಿ ಬಿಸಾಕಿದ್ದ ಟಾಯ್ಲೆಟ್ ಪೇಪರ್‌ಗಳು ಇದ್ದವು.

ಗಡಿಯಾಚೆಗೆ ಹಾರಿ ಬಿಟ್ಟಿದೆ

ಚಿಕ್ಕಪ್ಪ ದೊಡ್ಡಪ್ಪನ ಮಕ್ಕಳ ಮನೆ ಅಕ್ಕ ಪಕ್ಕದಲ್ಲಿ ಇರುವಾಗ ಇಬ್ಬರ ನಡುವೆ ಜಗಳ ಆದರೆ ಆ ಮನೆಯವರು ಈ ಮನೆಯ ಕಡೆಗೆ ಕಸ ಎಸೆಯೋ ಘಟನೆಗಳು ಸರ್ವೇ ಸಾಮಾನ್ಯ. ಅಂಥದ್ದೇ ಘಟನೆ ಇದೀಗ ಕೊರಿಯಾದಲ್ಲಿ ನಡೆದಿದೆ. ದಕ್ಷಿಣ ಕೊರಿಯಾಗೆ ಉತ್ತರ ಕೊರಿಯಾ ಕಸ ತುಂಬಿದ ನೂರಾರು ಬಲೂನ್‌ಗಳನ್ನ ರವಾನಿಸಿದೆ. ಅದೂ ಕೂಡಾ ಕಸವನ್ನು ಬಲೂನ್‌ಗಳಲ್ಲಿ ಕಟ್ಟಿ ಗಡಿಯಾಚೆಗೆ ಹಾರಿ ಬಿಟ್ಟಿದೆ.

ಉತ್ತರ ಕೊರಿಯಾದಿಂದ ದಕ್ಷಿಣ ಕೊರಿಯಾ ಗಡಿ ಒಳಗೆ ಹಾರಿ ಬಂದ ಬಲೂನ್‌ಗಳಿಗೆ ಅತ್ಯಂತ ಹಗುರವಾದ ಗಾಳಿ ತುಂಬಲಾಗಿತ್ತು. ಹೀಗಾಗಿ, ಇವು ಸರಾಗವಾಗಿ ಗಡಿ ದಾಟಿ ಬಂದಿವೆ ಎಂದು ಸೇನೆ ಹೇಳಿದೆ. ಬಹುತೇಕ ಬಲೂನ್‌ಗಳು ಭಾರೀ ಗಾತ್ರದವು. ಇವುಗಳಲ್ಲಿ ಭಾರೀ ಪ್ರಮಾಣದ ಕಸ ತುಂಬಿ ಹಾರಿ ಬಿಡಲಾಗಿದೆ. ಈ ವಿಚಾರವನ್ನ ದಕ್ಷಿಣ ಕೊರಿಯಾ ಸರ್ಕಾರ ವಿಶ್ವ ಸಂಸ್ಥೆಯ ಗಮನಕ್ಕೂ ತಂದಿದೆ. ದಕ್ಷಿಣ ಕೊರಿಯಾ ಸೇನೆ, ಸ್ಥಳೀಯ ಪೊಲೀಸರು, ಸ್ಥಳೀಯ ಆಡಳಿತ ಹಾಗೂ ಸುರಕ್ಷತಾ ಸಚಿವಾಲಯಗಳು ಜಂಟಿಯಾಗಿ ಕಾರ್ಯಾಚರಣೆ ಕೈಗೊಂಡಿದ್ದು, ಇದೀಗ ಕಸ ಬಾಚುವ ಕೆಲಸದಲ್ಲಿ ನಿರತವಾಗಿವೆ. ದಕ್ಷಿಣ ಕೊರಿಯಾದ ಜಿಯೊಂಗಿ, ಚುಂಗ್‌ಚೆಯೋಂಗ್ ಹಾಗೂ ರಾಜಧಾನಿ ಸೋಲ್ ನಗರಗಳಲ್ಲಿ ಬಲೂನ್‌ಗಳು ಪತ್ತೆಯಾಗಿವೆ. ಇದಲ್ಲದೆ ಜ್ಯೋಂಗ್‌ಸಾಂಗ್ ಪ್ರಾಂತ್ಯದಲ್ಲೂ ಬಲೂನ್‌ಗಳು ಕಂಡು ಬಂದಿವೆ. ಈ ಬಲೂನ್‌ಗಳು ಬರೋಬ್ಬರಿ 300 ಕಿ. ಮೀ. ದೂರದವರೆಗೂ ಹಾರಿ ಬಂದಿವೆ ಎಂದು ಸಿಎನ್‌ಎನ್ ಸುದ್ದಿ ಸಂಸ್ಥೆ ವರದಿ ಮಾಡಿದೆ. 1953ರಲ್ಲಿ ಸಹೋದರ ದೇಶಗಳಾದ ದಕ್ಷಿಣ ಕೊರಿಯಾ ಹಾಗೂ ಉತ್ತರ ಕೊರಿಯಾ ನಡುವೆ ಭೀಕರ ಯುದ್ಧ ನಡೆದಿತ್ತು. ಇದಾದ ಬಳಿಕ ಯಾವುದೇ ಶಸ್ತ್ರ ಸಜ್ಜಿತ ಯುದ್ಧಗಳು ಉಭಯ ದೇಶಗಳ ನಡುವೆ ನಡೆದಿಲ್ಲವಾದರೂ ಗಡಿಯಲ್ಲಿ ಒಂದಲ್ಲಾ ಒಂದು ವಿಚಾರಕ್ಕೆ ಸಂಘರ್ಷ ಏರ್ಪಡುತ್ತಲೇ ಇದೆ. ಉಭಯ ದೇಶಗಳು ವ್ಯಾಪಾರ, ವಹಿವಾಟು, ದ್ವಿಪಕ್ಷೀಯ ಸಂಬಂಧ ಸೇರಿದಂತೆ ಎಲ್ಲವನ್ನೂ ಕಡಿತಗೊಳಿಸಿವೆ.

ದಕ್ಷಿಣ ಕೊರಿಯಾ ರಾಜಧಾನಿ ಸೋಲ್ ಸೇರಿದಂತೆ ಹಲವೆಡೆ ರಸ್ತೆಗಳಲ್ಲಿ ಪೇಪರ್ ತುಂಡು ಸೇರಿ ದಂತೆ ಕಸದ ರಾಶಿ ಹರಡಿದೆ. ಸ್ವಚ್ಛತೆಗೆ ಪ್ರಾಧಾನ್ಯತೆ ನೀಡುವ ದಕ್ಷಿಣ ಕೊರಿಯಾ ಜನಕ್ಕೆ ಇದು ತುಂಬಾನೇ ಇರುಸು ಮುರುಸು ಉಂಟು ಮಾಡಿದೆಯಂತೆ.

ಈ ಕುರಿತಾಗಿ ಉತ್ತರ ಕೊರಿಯಾದ ಸರ್ಕಾರೀ ಸುದ್ದಿ ಸಂಸ್ಥೆ ಹಾಸ್ಯ ಭರಿತ ಮಾಹಿತಿ ರವಾನಿಸಿದೆ. ಉತ್ತರ ಕೊರಿಯಾ ಮುಖ್ಯಸ್ಥ ಕಿಮ್ ಜಾಂಗ್ ಉನ್ ಅವರ ಸಹೋದರಿ ಕಿಮ್ ಯೋ ಜಾಂಗ್ ಅವರು ದಕ್ಷಿಣ ಕೊರಿಯಾಗೆ ಬಲೂನ್‌ಗಳ ಮೂಲಕ 'ಪ್ರಾಮಾಣಿಕ ಉಡುಗೊರೆ ರವಾನಿಸಿದ್ದಾರೆ. ಮುಂದಿನ ದಿನಗಳಲ್ಲಿ ಇನ್ನಷ್ಟು ಹೆಚ್ಚಿನ ಪ್ರಮಾಣಗಳಲ್ಲಿ ಉಡುಗೊರೆಗಳನ್ನು ರವಾನಿಸುವ ಭರವಸೆಯನ್ನೂ ನೀಡಿದ್ದಾರೆ ಎಂದು ಸರ್ಕಾರಿ ಮಾಧ್ಯಮ ವರದಿ ಮಾಡಿದೆ.

ತಿಹಾರ್ ಜೈಲಿಗೆ ಮರಳಿದ ಕೇಜ್ರಿವಾಲ್

ನವದೆಹಲಿ: ದೆಹಲಿ ಅಬಕಾರಿ ನೀತಿ ಪರಿಷ್ಕರಣೆಯಲ್ಲಿ ಆರೋಪಿ ಸ್ಥಾನದಲ್ಲಿರುವ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರು ಸುಪ್ರೀಂಕೋರ್ಟ್ ನಿರ್ದೇಶನದಂತೆ ಭಾನುವಾರ ಪುನಃ ತಿಹಾರ್ ಜೈಲಿಗೆ ಶರಣಾದರು. ಆರೋಗ್ಯದ ದೃಷ್ಟಿಯಿಂದ ತಮಗೆ ಜಾಮೀನು ಅವಧಿಯನ್ನು ಒಂದು ವಾರ ಕಾಲ ವಿಸ್ತರಣೆ ಮಾಡಬೇಕೆಂದು ಅವರು ಸುಪ್ರೀಂಕೋರ್ಟ್‌ಗೆ ತುರ್ತು ಮೇಲನವಿ ಅರ್ಜಿ ಸಲ್ಲಿಸಿದ್ದರು. ಆದರೆ ನ್ಯಾಯಾಲಯ ಈ ಅರ್ಜಿ ವಿಚಾರಣೆ ನಡೆಸಲು ತಿರಸ್ಕರಿಸಿ ಕೆಳಹಂತದ ನ್ಯಾಯಾಲಯದಲ್ಲಿ ಅರ್ಜಿ ಹಾಕುವಂತೆ ಸೂಚನೆ ನೀಡಿತ್ತು.



ಈ ಅರ್ಜಿ ವಿಚಾರಣೆ ಇದೇ ತಿಂಗಳ 5ರಂದು ದೆಹಲಿ ಹೈಕೋರ್ಟ್‌ನಲ್ಲಿ ಬರಲಿದ್ದು, ಅಷ್ಟರೊಳಗೆ ಸುಪ್ರೀಂಕೋರ್ಟ್ ಸೂಚನೆಯಂತೆ ಕೇಜ್ರಿವಾಲ್ ಅವರು ಭಾನುವಾರ ಜೈಲಿಗೆ ತೆರಳಿದ್ದಾರೆ. ಒಂದೆಡೆ ಲೋಕಸಭಾ ಚುನಾವಣೆಯೂ ಮುಕ್ತಾಯಗೊಂಡಿದೆ, ಮತ್ತೊಂದೆಡೆ ಅರವಿಂದ್ ಕೇಜ್ರಿವಾಲ್ ಅವರ ಜಾಮೀನು ಅವಧಿ ಕೂಡ ಅಂತ್ಯಗೊಂಡಿದ್ದು, ಭಾನುವಾರ ತಿಹಾರ್ ಜೈಲಿಗೆ ಮರಳಿದ್ದಾರೆ. ತಿಹಾರ್ ಜೈಲಿಗೆ ಮರಳುವ ಮುನ್ನ ರಾಜ್‌ಘಾಟ್‌ನಲ್ಲಿರುವ ಮಹಾತ್ಮ ಗಾಂಧಿಯವರ ಸಾರಕ, ಡಿಡಿಯು ಮಾರ್ಗದಲ್ಲಿರುವ ಪಕ್ಷದ ಕಚೇರಿ ಮತ್ತು ದೇವಸ್ಥಾನಕ್ಕೆ ಕೇಜ್ರಿವಾಲ್ ಭೇಟಿ ನೀಡಿದರು. ಇದಕ್ಕೂ ಮುನ್ನ ತಮ ಪಕ್ಷದ ನಾಯಕರೊಂದಿಗೆ ಕೇಜ್ರಿವಾಲ್ ಚಿಂತನ-ಮಂಥನ ನಡೆಸಿದ್ದು, ನಂತರ ತಮ ಅನುಪಸ್ಥಿತಿಯಲ್ಲಿ ಪಕ್ಷದ ಒಗ್ಗಟ್ಟು ಕಾಪಾಡುವ ಅಗತ್ಯವನ್ನು ಒತ್ತಿ ಹೇಳಿದರು.

ಏಪ್ರಿಲ್ 1ರಂದು ನ್ಯಾಯಾಲಯವು ಅವರನ್ನು ನ್ಯಾಯಾಂಗ ಬಂಧನದಲ್ಲಿ ತಿಹಾರ್ ಜೈಲಿಗೆ ಕಳುಹಿಸಿತು. ಅಲ್ಲಿ 39 ದಿನಗಳನ್ನು ಕಳೆದಿದ್ದಾರೆ. ಈ ಪ್ರಕರಣದಲ್ಲಿ ಅರವಿಂದ್ ಕೇಜ್ರಿವಾಲ್‌ಗೆ ಜಾರಿ ನಿರ್ದೇಶನಾಲಯ 9 ಬಾರಿ ನೋಟಿಸ್ ಜಾರಿ ಮಾಡಿತ್ತು. ಬಳಿಕ ಮಾರ್ಚ್ 21ರಂದು ಅವರನ್ನು ಬಂಧಿಸಲಾಗಿತ್ತು. ಕೇಜ್ರಿವಾಲ್ ಅಪರಾಧಿ ಎಂದು ಘೋಷಿಸಲಾಗಿಲ್ಲ.

ಗಂಭೀರ ಅನಾರೋಗ್ಯದ ಶಂಕೆ ವ್ಯಕ್ತಪಡಿಸಿರುವ ಕೇಜ್ರಿವಾಲ್, ಜಾಮೀನು ಅವಧಿ ವಿಸ್ತರಿಸುವಂತೆ ಸುಪ್ರೀಂಕೋರ್ಟ್ ಮೊರೆ ಹೋಗಿದ್ದರು. ಆದರೆ ಸುಪ್ರೀಂಕೋರ್ಟ್ ತಿರಸ್ಕರಿಸಿತ್ತು. ಬಳಿಕ ಹೈಕೋರ್ಟ್ ಮೊರೆ ಹೋಗಿದ್ದರು, ಅರ್ಜಿ ಆದೇಶವನ್ನು ಕೋರ್ಟ್ ಜೂನ್ 5ಕ್ಕೆ ಮುಂದೂಡಿದೆ. ಅರವಿಂದ್ ಕೇಜ್ರಿವಾಲ್ 55 ದಿನಗಳ ಕಾಲ ಜೈಲಿನಲ್ಲಿದ್ದ ಬಳಿಕ ಮೇ 10ರಂದು ಜಾಮೀನಿನ ಮೇಲೆ ಹೊರಬಂದಿದ್ದರು. ಅವರು 10 ದಿನಗಳ ಕಾಲ ಜಾರಿ ನಿರ್ದೇಶನಾಲಯದ ವಶದಲ್ಲಿದ್ದರು.

ಫಲಿತಾಂಶಕ್ಕೂ ಮೊದಲೇ 100 ದಿನಗಳ ಪ್ಲಾನ್ ರೆಡಿ

ಮೋದಿ ಮತ್ತೆ ಆಕ್ಟಿವ್

ನವದೆಹಲಿ: ಲೋಕಸಭೆಯ ಫಲಿತಾಂಶದ ನಂತರ ಪ್ರಮಾಣ ವಚನ ಸ್ವೀಕರಿಸಲಿರುವ ಹೊಸ ಸರ್ಕಾರದ 100 ದಿನಗಳ ಕಾರ್ಯಸೂಚಿಯನ್ನು ಪರಿಶೀಲಿಸಲು ಸುದೀರ್ಘ ಚಿಂತನ-ಮಂಥನ ಅಧಿವೇಶನ ಸೇರಿದಂತೆ ಹಲವು ವಿಷಯಗಳ ಕುರಿತು ಪ್ರಧಾನಿ ನರೇಂದ್ರ ಮೋದಿ ಭಾನುವಾರ ಏಳು ಸಭೆ ನಡೆಸಿದ್ದಾರೆ. ಎಕ್ಸಿಟ್ ಪೋಲ್‌ಗಳು ಬಿಜೆಪಿ ನೇತೃತ್ವದ ನ್ಯಾಷನಲ್ ಡೆಮಾಕ್ರಟಿಕ್ ಅಲೈಯನ್ಸ್‌ಗೆ ಭಾರಿ ಗೆಲುವು ಸಾಧಿಸುವ ಮುನ್ಸೂಚನೆ ನೀಡಿದ್ದು, ಮೋದಿ ಸತತ ಮೂರನೇ ಅವಧಿಗೆ ಅಧಿಕಾರವನ್ನು ಉಳಿಸಿಕೊಳ್ಳಲಿದ್ದಾರೆ ಎಂದು ಹೇಳುತ್ತಿದ್ದಂತೆ ಧ್ಯಾನದಿಂದ ಮೇಲೆದ್ದಿರುವ ಮೋದಿ ಅವರು ಹಲವಾರು ಸುತ್ತಿನ ಮಾತುಕತೆ ಆರಂಭಿಸಿದ್ದಾರೆ. ರೆಮಲ್ ಚಂಡಮಾರುತದ ನಂತರ, ವಿಶೇಷವಾಗಿ ನೈಸರ್ಗಿಕ ವಿಕೋಪಗಳಿಂದ ಹಾನಿಗೊಳಗಾದ ಈಶಾನ್ಯ ಪ್ರದೇಶದಲ್ಲಿನ ನಂತರದ ಪರಿಣಾಮಗಳನ್ನು ಪರಿಶೀಲಿಸಲು ಮೋದಿ ಸಭೆಗಳ ಅಧ್ಯಕ್ಷತೆ ವಹಿಸಲಿದ್ದಾರೆ ಎಂದು ಸರ್ಕಾರಿ ಮೂಲಗಳು ತಿಳಿಸಿವೆ. ಜೂನ್ 5 ರಂದು ಬರುವ ವಿಶ್ವ ಪರಿಸರ ದಿನವನ್ನು ದೊಡ್ಡ ಪ್ರಮಾಣದಲ್ಲಿ ಆಚರಿಸಲು ಸಿದ್ಧತೆಗಳನ್ನು ಪರಿಶೀಲಿಸಲು ಮತ್ತೊಂದು ಸಭೆಯ ಜೊತೆಗೆ ದೇಶದ ಬಿಸಿಗಾಳಿ ಪರಿಸ್ಥಿತಿಯನ್ನು ಪರಿಶೀಲಿಸಲು ಅವರು ಸಭೆಯ ಅಧ್ಯಕ್ಷತೆ ವಹಿಸಲಿದ್ದಾರೆ ಎಂದು ತಿಳಿದುಬಂದಿದೆ. ಲೋಕಸಭೆ ಚುನಾವಣೆ ಫಲಿತಾಂಶ ಕಸರತ್ತು ಪ್ರಾರಂಭವಾಗುವ ಮುಂಚೆಯೇ, ಹೊಸ ಸರ್ಕಾರಕ್ಕೆ 100 ದಿನಗಳ ಕಾರ್ಯಸೂಚಿಯನ್ನು ಸಿದ್ಧಪಡಿಸಲು ಮೋದಿ ಮುಂದಾಗಿದ್ದಾರೆ.



ಮೊದಲ 100 ದಿನಗಳ ಕಾರ್ಯಕ್ರಮಗಳು ಮತ್ತು ಉಪಕ್ರಮಗಳಿಗೆ ಆದ್ಯತೆ ನೀಡುವಂತೆ ಅವರು ತಮ ಮಂತ್ರಿ ಮಂಡಳಿಯನ್ನು ಅವರು ಕೇಳಿಕೊಂಡಿದ್ದಾರೆ ಎನ್ನಲಾಗಿದೆ.

ಚುನಾವಣಾ ಫಲಿತಾಂಶ : ಎಸ್‌ಕೆಎಂ ಭರ್ಜರಿ ಗೆಲುವು

ಗ್ಯಾಂಗ್ಟಾಕ್: ಸಿಕ್ಕಿಂನಲ್ಲಿ ಸಿಕ್ಕಿಂ ಕ್ರಾಂತಿಕಾರಿ ಮೋರ್ಚಾ ಅಭೂತಪೂರ್ವ ಗೆಲುವು ಸಾಧಿಸಿದೆ. ಸಿಕ್ಕಿಂನ 32 ವಿಧಾನಸಭಾ ಸ್ಥಾನಗಳಲ್ಲಿ ಆಡಳಿತಾರೂಢ ಎಸ್‌ಕೆಎಂ 30 ರಲ್ಲಿ ಮುನ್ನಡೆ ಸಾಧಿಸಿದ್ದರೆ, ಎಸ್‌ಡಿಎಫ್ ಕೇವಲ ಒಂದು ಕ್ಷೇತ್ರದಲ್ಲಿ ಮಾತ್ರ ಮುಂದಿದೆ.

ಭಾನುವಾರ ಬೆಳಿಗ್ಗೆ ಆರಂಭವಾದ ಮತ ಎಣಿಕೆಯಲ್ಲಿ ಎಸ್‌ಕೆಎಂ ಭಾರಿ ಮುನ್ನಡೆ ಸಾಧಿಸಿದ್ದು, ಮುಖ್ಯಮಂತ್ರಿ ಮತ್ತು ಸಿಕ್ಕಿಂ ಕ್ರಾಂತಿಕಾರಿ ಮೋರ್ಚಾ ಅಭ್ಯರ್ಥಿ ಪ್ರೇಮ್ ಸಿಂಗ್ ತಮಾಂಗ್ ರೆನಾಕ್ ವಿಧಾನಸಭಾ ಕ್ಷೇತ್ರದಿಂದ ತಮ ಸಮೀಪದ ಎಸ್‌ಡಿಎಫ್ ಪ್ರತಿಸ್ಪರ್ಧಿ ಸೋಮ್ ನಾಥ್ ಪೌಡಿಯಾಲ್ ಅವರಿಗಿಂತ ಸುಮಾರು 6,443 ಮತಗಳಿಂದ ಮುನ್ನಡೆ ಸಾಧಿಸಿದ್ದಾರೆ.

ಸೊರೆಂಗ್ ಚಕುಂಗ್ ವಿಧಾನಸಭಾ ಕ್ಷೇತ್ರದಲ್ಲಿ ತಮಾಂಗ್ ಅವರು ತಮ ಸಮೀಪದ ಎಸ್‌ಡಿಎಫ್ ಅಭ್ಯರ್ಥಿ ಎಡಿ ಸುಬ್ಬ ಅವರಿಗಿಂತ 2,052 ಮತಗಳಿಂದ ಮುನ್ನಡೆ ಸಾಧಿಸಿದ್ದಾರೆ. ಮಾಜಿ ಸಿಎಂ ಮತ್ತು ಸಿಕ್ಕಿಂ ಡೆಮಾಕ್ರಟಿಕ್ ಫ್ರಂಟ್ ಮುಖ್ಯಸ್ಥ ಪವನ್ ಕುಮಾರ್ ಚಾಮ್ಲಿಂಗ್ ಅವರು ನಾಮ್‌ಚೆಬಂಗ್ ಕ್ಷೇತ್ರದಲ್ಲಿ ಎಸ್‌ಕೆಎಂ ಅಭ್ಯರ್ಥಿ ರಾಜು ಬಾಸ್ನೆಟ್‌ಗಿಂತ 1,852 ಮತಗಳಿಂದ ಹಿಂದುಳಿದಿದ್ದಾರೆ. ಪೋಕ್ಲೋಕ್ ಕವ್ರಾಂಗ್ ವಿಧಾನಸಭಾ ಕ್ಷೇತ್ರದಲ್ಲಿ ಚಾಮ್ಲಿಂಗ್ ಎಸ್‌ಕೆಎಂನ ಭೋಜ್ ರಾಜ್ ರೈಗಿಂತ 2,728 ಮತಗಳಿಂದ ಹಿನ್ನಡೆಯಲ್ಲಿದ್ದರು.

ಭಾರತ ಫುಟ್‌ಬಾಲ್‌ನ ಮಾಜಿ ನಾಯಕ ಮತ್ತು ಎಸ್‌ಡಿಎಫ್ ಅಭ್ಯರ್ಥಿ ಬೈಚುಂಗ್ ಭುಟಿಯಾ ಅವರು ಬಾರ್‌ಫಂಗ್ ಅಸೆಂಬ್ಲಿ ಸ್ಥಾನದಲ್ಲಿ ಎಸ್‌ಕೆಎಂ ಪ್ರತಿಸ್ಪರ್ಧಿ ರಿಕ್ಸಲ್ ದೋರ್ಜಿ ಭುಟಿಯಾ ಅವರಿಗಿಂತ 4,346 ಮತಗಳಿಂದ ಹಿಂದುಳಿದಿದ್ದಾರೆ.

ಸಿಕ್ಕಿಂ ಬಿಜೆಪಿ ಘಟಕದ ಅಧ್ಯಕ್ಷ ದಿಲ್ಲಿ ರಾಮ್ ಥಾಪಾ ಅಪ್ಪರ್ ಬರ್ತುಕ್ ಅಸೆಂಬ್ಲಿ ಕ್ಷೇತ್ರದಲ್ಲಿ ತಮ ಎಸ್‌ಕೆಎಂ ಪ್ರತಿಸ್ಪರ್ಧಿ ಕಲಾ ರೈಗಿಂತ 2,312 ಮತಗಳಿಂದ ಹಿನ್ನಡೆಯಲ್ಲಿದ್ದಾರೆ.

ಬಿಸಿಲಿನ ತಾಪಕ್ಕೆ 33 ಚುನಾವಣಾ ಸಿಬ್ಬಂದಿಗಳ ಸಾವು

ಲಕ್ನೋ: ರಾಜ್ಯದ 13 ಕ್ಷೇತ್ರಗಳಲ್ಲಿ ಶನಿವಾರ ನಡೆದ ಏಳನೇ ಹಂತದ ಲೋಕಸಭೆ ಚುನಾವಣೆ ವೇಳೆ ಬಿಸಿಲಿನ ತಾಪದಿಂದ 33 ಚುನಾವಣಾ ಸಿಬ್ಬಂದಿ ಮೃತಪಟ್ಟಿದ್ದಾರೆ ಎಂದು ಉತ್ತರ ಪ್ರದೇಶದ ಮುಖ್ಯ ಚುನಾವಣಾಧಿಕಾರಿ (ಸಿಇಒ) ನವದೀಪ್ ರಿನ್ವಾ ತಿಳಿಸಿದ್ದಾರೆ.



ಈ ಸಂಖ್ಯೆಯಲ್ಲಿ ಗಹರಕ್ಷಕರು, ನೈರ್ಮಲ್ಯ ಕಾರ್ಯಕರ್ತರು ಮತ್ತು ಇತರ ಚುನಾವಣಾ ಸಿಬ್ಬಂದಿ ಸೇರಿದ್ದಾರೆ. ಬಲಿಯಾ ಲೋಕಸಭಾ ಕ್ಷೇತ್ರದ ಸಿಕಂದರ್‌ಪುರ ಪ್ರದೇಶದ ಮತಗಟ್ಟೆಯೊಂದರಲ್ಲಿ ಮತದಾರ ಮೃತಪಟ್ಟಿದ್ದಾನೆ ಎಂದು ಅವರು ಹೇಳಿದರು. ಮತಗಟ್ಟೆಯಲ್ಲಿ ನಿಂತಿದ್ದ ರಾಮ್ ಬದನ್ ಚೌಹಾಣ್ ಎಂಬ ಮತದಾರರು ಪ್ರಜ್ಞಾಹೀನ ಸ್ಥಿತಿಯಲ್ಲಿ ಬಿದ್ದಿದ್ದು, ಅವರನ್ನು ಆರೋಗ್ಯ ಕೇಂದ್ರಕ್ಕೆ ಕರೆದೊಯ್ಯಲಾಯಿತು, ಅಲ್ಲಿ ವೈದ್ಯರು ಅವರು ಸಾವನ್ನಪ್ಪಿದ್ದಾರೆ ಎಂದು ಘೋಷಿಸಿದರು. ಆಯಾ ಕ್ಷೇತ್ರಗಳಲ್ಲಿ ಚುನಾವಣಾ ಸಿಬ್ಬಂದಿ ಸಾವಿನ ಬಗ್ಗೆ ವರದಿ ಸಲ್ಲಿಸುವಂತೆ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಸಿಇಒ ರಿನ್ವಾ ತಿಳಿಸಿದ್ದಾರೆ. ಜಿಲ್ಲಾಡಳಿತದ ಅಧಿಕಾರಿಗಳು ಸಿಬ್ಬಂದಿಯ ಶವಪರೀಕ್ಷೆ ವರದಿಯನ್ನೂ ಸಲ್ಲಿಸಲಿದ್ದಾರೆ ಎಂದು ತಿಳಿಸಿದರು. ಚುನಾವಣಾ ಆಯೋಗದ ಆದೇಶದಂತೆ ಚುನಾವಣಾ ಸಿಬ್ಬಂದಿ ಕುಟುಂಬ ಸದಸ್ಯರಿಗೆ 15 ಲಕ್ಷ ಪರಿಹಾರ ನೀಡಲಾಗುವುದು ಎಂದರು.

ಏಳನೇ ಹಂತದಲ್ಲಿ, ಉತ್ತರ ಪ್ರದೇಶದ ಮಹಾರಾಜ್‌ಗಂಜ್, ಗೋರಖ್‌ಪುರ, ಕುಶಿನಗರ, ಡಿಯೋರಿಯಾ, ಬನ್ಸ್‌ಗಾಂವ್ (ಎಸ್‌ಸಿ), ಘೋಸಿ, ಸೇಲಂಪುರ, ಬಲ್ಲಿಯಾ, ಗಾಜಿಪುರ, ಚಂದೌಲಿ, ವಾರಣಾಸಿ, ಮಿರ್ಜಾಪುರ, ರಾಬರ್ಟ್ಸ್‌ಗಂಜ್ ನಲ್ಲಿ ಮತದಾನ ನಡೆದಿತ್ತು. ಚುನಾವಣಾ ಆಯೋಗವು ಈ ಹಂತದಲ್ಲಿ 1,08,349 ಚುನಾವಣಾ ಸಿಬ್ಬಂದಿಯನ್ನು ಚುನಾವಣಾ ಕರ್ತವ್ಯಕ್ಕೆ ನಿಯೋಜಿಸಿತ್ತು. ಸಿಬ್ಬಂದಿಗಳ ಸಾವಿನ ನಿಖರ ಕಾರಣ ಮರಣೊತ್ತರ ಪರೀಕ್ಷೆಯ ನಂತರ ಹೊರ ಬೀಳಲಿದೆ.

ಜೆಸಿಪಿ (ಕಾನೂನು ಮತ್ತು ಸುವ್ಯವಸ್ಥೆ) ಉಪೇಂದ್ರ ಅಗರ್ವಾಲ್ ಅವರು ಕಾನ್ಸ್‌ಟೇಬಲ್ ಸಾವನ್ನು ಖಚಿತಪಡಿಸಿದ್ದು, ಸ್ಥಳದಲ್ಲಿ ಕರ್ತವ್ಯದಲ್ಲಿರುವ ಅಧಿಕಾರಿಗಳಿಗೆ ಕೂಲರ್‌ಗಳು ಮತ್ತು ಇತರ ಸೌಲಭ್ಯಗಳು ಲಭ್ಯವಿದೆ
- ರಿನ್ವಾ, ಸಿಇಒ

ಅರುಣಾಚಲ ಪ್ರದೇಶ ವಿಧಾನಸಭಾ ಚುನಾವಣಾ ಫಲಿತಾಂಶ

ಇಟಾನಗರ: ಅರುಣಾಚಲ ಪ್ರದೇಶದಲ್ಲಿ ಮತ್ತೆ ಬಿಜೆಪಿ ಸರ್ಕಾರ ರಚನೆಯಾಗುವುದು ಖಚಿತಪಟ್ಟಿದೆ. ವಿಧಾನಸಭಾ ಚುನಾವಣಾ ಫಲಿತಾಂಶದ ಆರಂಭಿಕ ಟ್ರೆಂಡ್‌ಗಳ ಪ್ರಕಾರ ಬಿಜೆಪಿ ರಾಜ್ಯದಲ್ಲಿ ಸಾಕಷ್ಟು ಮುನ್ನಡೆ ಸಾಧಿಸಿದ್ದು, ಅರುಣಾಚಲ ಪ್ರದೇಶದ ಮುಖ್ಯಮಂತ್ರಿ ಪೆಮಾ ಖಂಡು ಮೂ

ಆರೋನ್ ಜೋನ್ಸ್ ಸಿಡಿಲಬ್ಬರ: ಅಮೆರಿಕಗೆ ಐತಿಹಾಸಿಕ ಜಯ

40 ಎಸೆತಗಳಲ್ಲಿ 10 ಸಿಕ್ಸ್ ಮತ್ತು 4 ಫೋರ್‌ಗಳೊಂದಿಗೆ ಅಜೇಯ 94 ರನ್ ಬಾರಿಸುವ ಮೂಲಕ ಜೋನ್ಸ್ ಗೆಲುವಿನ ರೂವಾರಿ

ಟಿ20 ವಿಶ್ವಕಪ್‌ನ ಉದ್ಘಾಟನಾ ಪಂದ್ಯದಲ್ಲಿ ಬೃಹತ್ ಮೊತ್ತವನ್ನು ಚೇಸ್ ಮಾಡುವ ಮೂಲಕ ಆತಿಥೇಯ ಯುಎಸ್‌ಎ ತಂಡವು ಶುಭಾರಂಭ ಮಾಡಿದೆ. ಕೆನಡಾ ವಿರುದ್ಧದ ಈ ಪಂದ್ಯದಲ್ಲಿ ಕೇವಲ 40 ಎಸೆತಗಳಲ್ಲಿ 10 ಸಿಕ್ಸ್ ಮತ್ತು 4 ಫೋರ್‌ಗಳೊಂದಿಗೆ ಅಜೇಯ 94 ರನ್ ಬಾರಿಸುವ ಮೂಲಕ ಆರೋನ್ ಜೋನ್ಸ್ ಗೆಲುವಿನ ರೂವಾರಿ ಎನಿಸಿಕೊಂಡರು.

ಡಲ್ಲಾಸ್‌ನ ಗ್ರ್ಯಾಂಡ್ ಪ್ರೈರೀ ಸ್ಟೇಡಿಯಂನಲ್ಲಿ ನಡೆದ ಟಿ20 ವಿಶ್ವಕಪ್‌ನ ಮೊದಲ ಪಂದ್ಯದಲ್ಲಿ ಯುಎಸ್‌ಎ ತಂಡ ಭರ್ಜರಿ ಜಯ ಸಾಧಿಸಿದೆ. ಕೆನಡಾ ವಿರುದ್ಧದ ಈ ಪಂದ್ಯದಲ್ಲಿ ಟಾಸ್ ಗೆದ್ದ ಯುಎಸ್‌ಎ ಬೌಲಿಂಗ್ ಆಯ್ದುಕೊಂಡಿತು. ಅದರಂತೆ ಮೊದಲು ಬ್ಯಾಟ್ ಮಾಡಿದ ಕೆನಡಾ ತಂಡವು ಉತ್ತಮ ಬ್ಯಾಟಿಂಗ್ ಪ್ರದರ್ಶಿಸಿತು.

ಆರಂಭಿಕರಾಗಿ ಕಣಕ್ಕಿಳಿದ ಆರೋನ್ ಜಾನ್ಸನ್ ಮತ್ತು ನವನೀತ್ ಧಲಿವಾಲ್ ಮೊದಲ ವಿಕೆಟ್‌ಗೆ 43 ರನ್‌ಗಳ ಜೊತೆಯಾಟವಾಡಿದರು. ಆದರೆ ಪವರ್ ಪ್ಲೇನ ಕೊನೆಯ ಓವರ್‌ನ 2ನೇ ಎಸೆತದಲ್ಲಿ ಆರೋನ್ ಜಾನ್ಸನ್ (23) ವಿಕೆಟ್ ಪಡೆಯುವಲ್ಲಿ ಹರ್ಮೀತ್ ಸಿಂಗ್ ಯಶಸ್ವಿಯಾಗಿದ್ದಾರೆ. ಇದಾಗ್ಯೂ ಕೆನಡಾ ತಂಡ ಮೊದಲ 6 ಓವರ್‌ಗಳಲ್ಲಿ 50 ರನ್ ಕಲೆಹಾಕಿತು.

ಈ ಹಂತದಲ್ಲಿ ಜೊತೆಗೂಡಿದ ನವನೀತ್ ಮತ್ತು ನಿಕೋಲಸ್ ಕೀರ್ಟನ್ ಅರ್ಧಶತಕದ ಜೊತೆಯಾಟವಾಡಿದರು. ಇದರ ನಡುವೆ ನವನೀತ್ ಧಲಿವಾಲ್ 44 ಎಸೆತಗಳಲ್ಲಿ 3 ಸಿಕ್ಸ್ ಹಾಗೂ 6 ಫೋರ್‌ಗಳೊಂದಿಗೆ 61 ರನ್ ಬಾರಿಸಿದರೆ, ನಿಕೋಲಸ್ ಕೀರ್ಟನ್ 31 ಎಸೆತಗಳಲ್ಲಿ 2 ಸಿಕ್ಸ್ ಹಾಗೂ 3 ಫೋರ್‌ಗಳೊಂದಿಗೆ 51 ರನ್ ಸಿಡಿಸಿದರು. ಇನ್ನು ಅಂತಿಮ ಓವರ್‌ಗಳ ವೇಳೆ ಕಣಕ್ಕಿಳಿದ ಶ್ರೇಯಸ್ ಮೊವ್ವ 16 ಎಸೆತಗಳಲ್ಲಿ 2 ಸಿಕ್ಸ್ ಹಾಗೂ 2 ಫೋರ್‌ಗಳೊಂದಿಗೆ ಅಜೇಯ 32 ರನ್ ಬಾರಿಸಿದರು. ಈ ಮೂಲಕ ಕೆನಡಾ ತಂಡವು 20 ಓವರ್‌ಗಳಲ್ಲಿ 5 ವಿಕೆಟ್ ಕಳೆದುಕೊಂಡು 194 ರನ್ ಕಲೆಹಾಕಿತು. 195 ರನ್‌ಗಳ ಕಠಿಣ ಗುರಿ ಬೆನ್ನತ್ತಿದ ಯುಎಸ್‌ಎ ತಂಡವು ಉತ್ತಮ ಆರಂಭ ಪಡೆದಿರಲಿಲ್ಲ. ಆರಂಭಿಕ ಆಟಗಾರ ಸ್ಟೀವನ್ ಟೇಲರ್ (0) ಶೂನ್ಯಕ್ಕೆ ಔಟಾದರೆ, ನಾಯಕ ಮೊನಾಕ್ ಪಟೇಲ್ 16 ರನ್‌ಗಳಿಸಿ ವಿಕೆಟ್ ಒಪ್ಪಿಸಿದರು.

ಈ ಹಂತದಲ್ಲಿ ಅತ್ಯುತ್ತಮ ಬ್ಯಾಟಿಂಗ್ ಪ್ರದರ್ಶಿಸಿದ ಆಂಡ್ರೀಸ್ ಗೌಸ್ ಮತ್ತು ಆರೋನ್ ಜೋನ್ಸ್ 131 ರನ್‌ಗಳ ಶತಕದ ಜೊತೆಯಾಟವಾಡಿದರು. ಈ ಹಂತದಲ್ಲಿ 46 ಎಸೆತಗಳಲ್ಲಿ 3 ಸಿಕ್ಸ್ ಮತ್ತು 7 ಫೋರ್‌ಗಳೊಂದಿಗೆ 65 ರನ್ ಬಾರಿಸಿದ ಆಂಡ್ರೀಸ್ ಗೌಸ್ ವಿಕೆಟ್ ಒಪ್ಪಿಸಿದರು. ಮತ್ತೊಂದೆಡೆ ಸ್ಫೋಟಕ ಬ್ಯಾಟಿಂಗ್ ಮುಂದುವರೆಸಿದ ಆರೋನ್ ಜೋನ್ಸ್ ಸಿಕ್ಸ್-ಫೋರ್‌ಗಳ ಸುರಿಮಳೆಗೈದರು. ಈ ಮೂಲಕ ಕೇವಲ 40 ಎಸೆತಗಳಲ್ಲಿ 10 ಭರ್ಜರಿ ಸಿಕ್ಸ್ ಹಾಗೂ 4 ಫೋರ್‌ಗಳೊಂದಿಗೆ ಅಜೇಯ 94 ರನ್ ಬಾರಿಸಿದರು. ಈ ಮೂಲಕ ಯುಎಸ್‌ಎ ತಂಡ ಕೇವಲ 17.4 ಓವರ್‌ಗಳಲ್ಲಿ ಗುರಿಯನ್ನು ಚೇಸ್ ಮಾಡಿ 7 ವಿಕೆಟ್‌ಗಳ ಭರ್ಜರಿ ಜಯ ಸಾಧಿಸಿದೆ.

ಕೆನಡಾ: ಆರೋನ್ ಜಾನ್ಸನ್, ನವನೀತ್ ಧಲಿವಾಲ್, ಪರ್ಗತ್ ಸಿಂಗ್, ನಿಕೋಲಸ್ ಕೀರ್ಟನ್, ಶ್ರೇಯಸ್ ಮೊವ್ವ (ವಿಕೆಟ್ ಕೀಪರ್), ದಿಲ್‌ಪ್ರೀತ್ ಸಿಂಗ್, ಸಾದ್ ಬಿನ್ ಜಾಫರ್ (ನಾಯಕ), ನಿಖಿಲ್ ದತ್ತಾ, ದಿಲ್ಲನ್ ಹೇಲಿಗರ್, ಕಲೀಂ ಸನಾ, ಜೆರೆಮಿ ಗಾರ್ಡನ್.

ಯುಎಸ್‌ಎ: ಸ್ಟೀವನ್ ಟೇಲರ್, ಮೊನಾಂಕ್ ಪಟೇಲ್ (ನಾಯಕ), ಆಂಡ್ರೀಸ್ ಗೌಸ್, ಆರೋನ್ ಜೋನ್ಸ್, ನಿತೀಶ್ ಕುಮಾರ್, ಕೋರಿ ಆಂಡರ್ಸನ್, ಹರ್ಮೀತ್ ಸಿಂಗ್, ಶಾಡ್ಲಿ ವ್ಯಾನ್ ಶಾಲ್ಕ್‌ವಿಕ್, ಜಸ್ದೀಪ್ ಸಿಂಗ್, ಅಲಿ ಖಾನ್, ಸೌರಭ್ ನೇತ್ರವಲ್ಕರ್.

ಟಿ20 ವಿಶ್ವಕಪ್‌ನ ಮೊದಲ ಪಂದ್ಯ

ಅಮೆರಿಕಗೆ ಐತಿಹಾಸಿಕ ಜಯ

ಈ ಭರ್ಜರಿ ಗೆಲುವಿನೊಂದಿಗೆ ಯುಎಸ್‌ಎ ಗರಿಷ್ಠ ಸ್ಕೋರ್ ಚೇಸ್ ಮಾಡಿದ ದಾಖಲೆ ಬರೆದಿದೆ. ಇದಕ್ಕೂ ಮುನ್ನ ಅಮೆರಿಕ ತಂಡವು 169 ರನ್‌ಗಳನ್ನು ಚೇಸ್ ಮಾಡಿರುವುದು ಅತ್ಯುತ್ತಮ ಸಾಧನೆಯಾಗಿತ್ತು. ಇದೀಗ ಟಿ20 ವಿಶ್ವಕಪ್‌ನ ಚೊಚ್ಚಲ ಪಂದ್ಯದಲ್ಲೇ ಅಬ್ಬರಿಸುವ ಮೂಲಕ ಐತಿಹಾಸಿಕ ಗೆಲುವು ದಾಖಲಿಸುವಲ್ಲಿ ಯುಎಸ್‌ಎ ತಂಡ ಯಶಸ್ವಿಯಾಗಿದೆ.

ಪಾಂಡ್ಯ ಪವರ್‌ಫುಲ್ ಶಾಟ್

ಬಾಂಗ್ಲಾ ಬೌಲರ್ ಅಂಗೈಗೆ 6 ಹೊಲಿಗೆ!

ಟಿ20 ವಿಶ್ವಕಪ್ ಆರಂಭವಾಗುವ ಮುನ್ನವೇ ಬಾಂಗ್ಲಾದೇಶ ತಂಡಕ್ಕೆ ಭಾರೀ ಆಘಾತ ಎದುರಾಗಿದೆ. ಜೂನ್ 1ರ ಶನಿವಾರದಂದು ಭಾರತ ವಿರುದ್ಧದ ಅಭ್ಯಾಸ ಪಂದ್ಯದಲ್ಲಿ ತಂಡದ ವೇಗದ ಬೌಲರ್ ಶೋರಿಫುಲ್ ಇಸ್ಲಾಂ ಕೈಗೆ ಗಾಯ ಮಾಡಿಕೊಂಡಿದ್ದಾರೆ. ಅಲ್ಲದೆ ಅವರ ಕೈಗೆ ಆರು ಹೊಲಿಗೆಗಳನ್ನು ಹಾಕಲಾಗಿದೆ ಎಂದು ವರದಿಯಾಗಿದೆ. ಸದ್ಯ ಅಭ್ಯಾಸ ಪಂದ್ಯದಲ್ಲಿ ಗಾಯ ಮಾಡಿಕೊಂಡಿರುವ ಶೋರಿಫುಲ್ ಗಾಯ ಗುಣವಾಗಲು ಕನಿಷ್ಠ ಒಂದು ವಾರ ಬೇಕಾಗಬಹುದು ಎಂದು ಅಂದಾಜಿಸಲಾಗಿದೆ. ಇದರರ್ಥ ಜೂನ್ 7 ರಂದು ಶ್ರೀಲಂಕಾ ವಿರುದ್ಧ ಬಾಂಗ್ಲಾದೇಶದ ಆರಂಭಿಕ ಪಂದ್ಯದಲ್ಲಿ ಅವರು ಆಡಲು ಸಾಧ್ಯವಾಗುವುದಿಲ್ಲ. ಭಾರತ ವಿರುದ್ಧದ ಅಭ್ಯಾಸ ಪಂದ್ಯದಲ್ಲಿ ಬಾಂಗ್ಲಾ ಪರ ಅದ್ಭುತ ಬೌಲಿಂಗ್ ಮಾಡಿದ್ದ ಶೋರಿಫುಲ್ ತಮ್ಮ ಖೋಟಾದ 3.5 ಓವರ್ ಗಳಲ್ಲಿ 26 ರನ್ ನೀಡಿ 1 ವಿಕೆಟ್ ಪಡೆದಿದ್ದರು. ಆದರೆ ಈಗ ಅವರ ಗಾಯಗೊಂಡಿರುವುದು ಬಾಂಗ್ಲಾದೇಶ ತಂಡಕ್ಕೆ ದೊಡ್ಡ ಹೊಡೆತ ನೀಡಿದೆ.

ಪಾಂಡ್ಯ ಹೊಡೆತದಿಂದ ಗಾಯ: ಜೂನ್ 1 ರಂದು ನಾಸೌ ಕೌಂಟಿ ಸ್ಟೇಡಿಯಂನಲ್ಲಿ ಭಾರತ ಮತ್ತು ಬಾಂಗ್ಲಾದೇಶ ನಡುವೆ ಅಭ್ಯಾಸ ಪಂದ್ಯ ನಡೆಯಿತು. ಈ ಪಂದ್ಯದಲ್ಲಿ ಬಾಂಗ್ಲಾದೇಶ 60 ರನ್‌ಗಳ ಸೋಲು ಕಂಡಿತ್ತು. ಈ ಪಂದ್ಯದಲ್ಲಿ ಭಾರತದ ಬ್ಯಾಟಿಂಗ್‌ನ 20ನೇ ಓವರ್‌ನಲ್ಲಿ ಶೋರಿಫುಲ್ ಗಾಯಗೊಂಡ ಘಟನೆ ನಡೆಯಿತು. ಕೊನೆಯ ಓವರ್ ಬೌಲ್ ಮಾಡಲು ಬಂದ ಶೋರಿಫುಲ್ ಐದನೇ ಎಸೆತದಲ್ಲಿ ಯಾರ್ಕರ್ ಎಸೆದರು. ಈ ವೇಳೆ ಹಾರ್ದಿಕ್ ಪಾಂಡ್ಯ ಬ್ಯಾಟಿಂಗ್ ಮಾಡುತ್ತಿದ್ದರು. ಅವರು ಈ ಯಾರ್ಕರ್ ಅನ್ನು ನೇರ ಬ್ಯಾಟ್‌ನಿಂದ ವೇಗವಾಗಿ ಹೊಡೆದರು, ಅದನ್ನು ಶೋರಿಫುಲ್ ತನ್ನ ಅಂಗೈಯಿಂದ ನಿಲ್ಲಿಸಲು ಪ್ರಯತ್ನಿಸಿದರು. ಹೊಡೆತವು ತುಂಬಾ ವೇಗವಾಗಿದ್ದರಿಂದ ಶೋರಿಫುಲ್ ಅಂಗೈಗೆ ಗಾಯವಾಯಿತು. ತಕ್ಷಣವೇ ಅವರು ಮೈದಾನ ತೊರೆದಿದ್ದರು. ಆ ನಂತರ ಬಂದ ಸುದ್ದಿಯ ಪ್ರಕಾರ, ಶೋರಿಫುಲ್ ಅವರ ಬೆರಳು ಮತ್ತು ಅಂಗೈ ನಡುವೆ 6 ಹೊಲಿಗೆಗಳನ್ನು ಹಾಕಲಾಗಿದೆ.

ಬಾಂಗ್ಲಾ ತಂಡಕ್ಕೆ ಭಾರಿ ನಷ್ಟ: ಬಾಂಗ್ಲಾ ತಂಡದ ವೇಗದ ದಾಳಿಯಲ್ಲಿ ಮುಸ್ತಫಿಜುರ್ ರೆಹಮಾನ್, ತಂಝೀಮ್ ಶಕೀಬ್ ಮತ್ತು ತಸ್ಕಿನ್ ಅಹ್ಮದ್ ಜೊತೆಗೆ ಶೋರಿಫುಲ್ ಇಸ್ಲಾಂ ಕೂಡ ಪ್ರಮುಖ ಪಾತ್ರ ವಹಿಸಿದ್ದಾರೆ.

ಬಾಂಗ್ಲಾ ತಂಡಕ್ಕೆ ಭಾರಿ ನಷ್ಟ

ಮೊದಲ ಬಾರಿಗೆ ಮೌನ ಮುರಿದ ಹಾರ್ದಿಕ್

ಕಳೆದ ಕೆಲವು ದಿನಗಳಿಂದ ಹಾರ್ದಿಕ್ ಪಾಂಡ್ಯ ಸಾಕಷ್ಟು ಸುದ್ದಿಯಲ್ಲಿದ್ದಾರೆ. ಈ ಬಾರಿಯ ಐಪಿಎಲ್ ಪ್ರಾರಂಭವಾಗುವ ಮೊದಲೇ ಪಾಂಡ್ಯ ಅಭಿಮಾನಿಗಳ ಕೆಂಗಣ್ಣಿಗೆ ಗುರಿಯಾಗಿದ್ದರು. ಅಲ್ಲದೆ ಲೀಗ್ ಉದ್ದಕ್ಕೂ ಹಾರ್ದಿಕ್ ಸಾಮಾಜಿಕ ಜಾಲತಾಣಗಳಲ್ಲಿ ಸಾಕಷ್ಟು ಟ್ರೋಲ್‌ಗೆ ಒಳಗಾಗಿದ್ದರು. ಇದೀಗ ಪಾಂಡ್ಯ ತಮ್ಮ ಕಷ್ಟದ ಬಗ್ಗೆ ಮೊದಲ ಬಾರಿಗೆ ಮೌನ ಮುರಿದಿದ್ದಾರೆ.

ಟೀಂ ಇಂಡಿಯಾ ಉಪನಾಯಕ ಹಾರ್ದಿಕ್ ಪಾಂಡ್ಯ ಬಾಂಗ್ಲಾದೇಶ ವಿರುದ್ಧದ ಅಭ್ಯಾಸ ಪಂದ್ಯದಲ್ಲಿ ಅದ್ಭುತ ಇನ್ನಿಂಗ್ಸ್ ಆಡುವ ಮೂಲಕ ತಮ್ಮ ಹಳೆಯ ಫಾರ್ಮ್ ಅನ್ನು ಕಂಡುಕೊಂಡಿದ್ದಾರೆ. ಈ ಮೂಲಕ ತನ್ನ ಕಳಪೆ ಫಾರ್ಮ್ ಬಗ್ಗೆ ಟ್ರೋಲ್ ಮತ್ತು ಟೀಕೆಗಳನ್ನು ಮಾಡುತ್ತಿದ್ದವರ ಬಾಯಿ ಮುಚ್ಚಿಸುವ ಕೆಲಸ ಮಾಡಿದ್ದಾರೆ.

ವಾಸ್ತವವಾಗಿ ಕಳೆದ ಕೆಲವು ದಿನಗಳಿಂದ ಹಾರ್ದಿಕ್ ಪಾಂಡ್ಯ ಸಾಕಷ್ಟು ಸುದ್ದಿಯಲ್ಲಿದ್ದಾರೆ. ಈ ಬಾರಿಯ ಐಪಿಎಲ್ ಪ್ರಾರಂಭವಾಗುವ ಮೊದಲೇ ಪಾಂಡ್ಯ ಅಭಿಮಾನಿಗಳ ಕೆಂಗಣ್ಣಿಗೆ ಗುರಿಯಾಗಿದ್ದರು. ಅಲ್ಲದೆ ಲೀಗ್ ಉದ್ದಕ್ಕೂ ಹಾರ್ದಿಕ್ ಸಾಮಾಜಿಕ ಜಾಲತಾಣಗಳಲ್ಲಿ ಸಾಕಷ್ಟು ಟ್ರೋಲ್ ಗೆ ಒಳಗಾಗಿದ್ದರು. ಇದೀಗ ಪಾಂಡ್ಯ ತಮ್ಮ ಕಷ್ಟದ ಬಗ್ಗೆ ಮೊದಲ ಬಾರಿಗೆ ಮೌನ ಮುರಿದಿದ್ದಾರೆ.

ಅಭ್ಯಾಸ ಪಂದ್ಯದ ವೇಳೆ ಸ್ಟಾರ್ ಸ್ಪೋರ್ಟ್ಸ್‌ನಲ್ಲಿ ಮಾತನಾಡಿದ ಉಪನಾಯಕ ಹಾರ್ದಿಕ್ ಪಾಂಡ್ಯ, 'ಹೌ ದು ಕಳೆದ ಕೆಲವು ದಿನಗಳು ಕಷ್ಟಕರವಾಗಿತ್ತು. ಆದರೆ ನಾನು ಮೊದಲಿನಿಂದಲೂ ಅದೇ ದಿನಚರಿಯನ್ನು ಅನುಸರಿಸಿದ್ದೇನೆ. ಒಳ್ಳೆಯ ಮತ್ತು ಕೆಟ್ಟ ಸಮಯಗಳು ಬರುತ್ತಲೇ ಇರುತ್ತವೆ. ನಾನು ಈ ಮೊದಲು ಅಂತಹ ಹಂತವನ್ನು ಎದುರಿಸಿದ್ದೇನೆ'.

'ಈ ಬಾರಿಯೂ ನಾನು ಎಲ್ಲದರಿಂದ ಹೊರಬರುತ್ತೇನೆ. ನಾನು ಯಶಸ್ಸನ್ನು ಹೆಚ್ಚಾಗಿ ತಲೆಗೇರಿಸಿಕೊಳ್ಳುವುದಿಲ್ಲ ಅಥವಾ ವೈಫಲ್ಯಗಳಿಂದ ಕುಗ್ಗುವುದಿಲ್ಲ. ನಾನು ಯಾವುದರಿಂದಲೂ ಓಡಿಹೋಗುವುದಿಲ್ಲ, ಬದಲಿಗೆ ಏನೇ ಬಂದರು ಅದನ್ನು ಧೈರ್ಯದಿಂದ ಎದುರಿಸುತ್ತೇನೆ' ಎಂದಿದ್ದಾರೆ. ವೃತ್ತಿಜೀವನವದ ಜೊತೆಗೆ ಹಾರ್ದಿಕ್ ತಮ್ಮ ವೈಯಕ್ತಿಕ ಜೀವನದ ಏರಿಳಿತಗಳಿಂದಲೂ ಚರ್ಚೆಯಲ್ಲಿದ್ದಾರೆ. ವಾಸ್ತವವಾಗಿ, ಕಳೆದ ಕೆಲವು ದಿನಗಳಿಂದ, ಹಾರ್ದಿಕ್ ಮತ್ತು ನತಾಶಾ ವಿಚ್ಛೇದನದ ಬಗ್ಗೆ ಸಾಮಾಜಿಕ ಜಾಲತಾಣಗಳಲ್ಲಿ ಚರ್ಚೆಗಳು ಜೋರಾಗಿ ನಡೆಯುತ್ತಿವೆ. ಆದರೆ, ಹಾರ್ದಿಕ್ ಮತ್ತು ಅವರ ಪತ್ನಿ ನತಾಶಾ ಈ ಬಗ್ಗೆ ಈವರೆಗೆ ಏನನ್ನೂ ಹೇಳಿಲ್ಲ.

'ಈ ಬಾರಿಯೂ ನಾನು ಎಲ್ಲದರಿಂದ ಹೊರಬರುತ್ತೇನೆ.

ವೈವಾಹಿಕ ಜೀವನಕ್ಕೆ ಟೀಂ ಇಂಡಿಯಾ ಆಟಗಾರ

17ನೇ ಆವೃತ್ತಿಯ ಐಪಿಎಲ್‌ನಲ್ಲಿ ಕೋಲ್ಕತ್ತಾ ನೈಟ್ ರೈಡರ್ಸ್ ತಂಡ ವನ್ನು ವಿಜೇತರನ್ನಾಗಿ ಮಾಡುವಲ್ಲಿ ಪ್ರಮುಖ ಪಾತ್ರ ವಹಿಸಿದ್ದ ಟೀಂ ಇಂಡಿಯಾ ಆಟಗಾರ ವೆಂಕಟೇಶ್ ಅಯ್ಯರ್ ಅಂದರೆ, ಜೂನ್ 2 ರಂದು ವೈವಾಹಿಕ ಜೀವನಕ್ಕೆ ಕಾಲಿರಿಸಿದ್ದಾರೆ.

ತಮ್ಮ ಬಹುದಿನದ ಗೆಳತಿ ಶ್ರುತಿ ರಘು ನಾಥನ್ ಅವರೊಂದಿಗೆ ಕಳೆದ ವರ್ಷ ನಿಶ್ಚಿತಾರ್ಥ ಮಾಡಿಕೊಂಡಿದ್ದ ವೆಂಕಟೇಶ್ ಅಯ್ಯರ್, ಐಪಿಎಲ್‌ಗಾಗಿ ತಮ್ಮ ಮದುವೆಯನ್ನು ಮುಂದೂಡಿದ್ದರು. ಆದರೀಗ ತಂಡವನ್ನು ಚಾಂಪಿಯನ್ ಮಾಡಿದ ಬಳಿಕ ಸಪ್ತಪದಿ ತುಳಿದಿದ್ದಾರೆ.

ವೆಂಕಟೇಶ್ ಅಯ್ಯರ್ ಕಳೆದ ವರ್ಷ ನವೆಂಬರ್ ತಿಂಗಳಲ್ಲಿ ಶ್ರುತಿ ರಘುನಾಥನ್ ಅವರೊಂದಿಗೆ ನಿಶ್ಚಿತಾರ್ಥ ಮಾಡಿಕೊಂಡಿದ್ದರು. ಅಯ್ಯರ್ ತಮ್ಮ ನಿಶ್ಚಿತಾರ್ಥದ ಬಗ್ಗೆ ಸಾಮಾಜಿಕ ಮಾಧ್ಯಮದಲ್ಲಿ ಫೋಟೋವನ್ನು ಪೋಸ್ಟ್ ಮಾಡುವ ಮೂಲಕ ತಮ್ಮ ಅಭಿಮಾನಿಗಳಿಗೆ ಮಾಹಿತಿಯನ್ನು ನೀಡಿದ್ದರು. ಈ ಬಾರಿಯ ಐಪಿಎಲ್‌ನಲ್ಲಿ ವೆಂಕಟೇಶ್ ಅಯ್ಯರ್ ಪ್ರದರ್ಶನದ ಬಗ್ಗೆ ಹೇಳುವುದಾದರೆ, ಈ ಸೀಸನ್‌ನಲ್ಲಿ 15 ಪಂದ್ಯಗಳನ್ನು ಆಡಿದ ಅಯ್ಯರ್, 46.25 ರ ಸರಾಸರಿಯಲ್ಲಿ 370 ರನ್ ಕಲೆಹಾಕಿದ್ದರು. ಇದರಲ್ಲಿ 4 ಅರ್ಧಶತಕಗಳು ಸೇರಿದ್ದವು.

ಅಂಬಾನಿ ಮನೆ ಮಗನ ಪ್ರಿ ವೆಡ್ಡಿಂಗ್‌ನಲ್ಲಿ ಸೆಲೆಬ್ರಿಟಿಗಳ ದಂಡು

ವಿಶ್ವದ ಅತ್ಯಂತ ಶ್ರೀಮಂತರಲ್ಲಿ ಒಬ್ಬರಾಗಿರುವ ಮುಕೇಶ್ ಅಂಬಾನಿ ಪುತ್ರ ಅನಂತ್ ಅಂಬಾನಿ ಮತ್ತು ರಾಧಿಕಾ ಮರ್ಚೆಂಟ್ ಪ್ರಿ ವೆಡ್ಡಿಂಗ್ ಪಾರ್ಟಿ ಅದ್ಧೂರಿಯಾಗಿ ಜರುಗಿದೆ.

ಇಟಲಿಯಲ್ಲಿ ನಡೆದ ವಿವಾಹ ಪೂರ್ವ ಕಾರ್ಯಕ್ರಮದಲ್ಲಿ ಸೆಲೆಬ್ರಿಟಿಗಳ ದಂಡೇ ಹರಿದು ಬಂದಿದೆ.

ಅಂಬಾನಿ ಮಗನ ಮನೆ ಕಾರ್ಯಕ್ರಮದಲ್ಲಿ ಶಾರುಖ್ ಖಾನ್, ರಣ್‌ಬೀರ್ ಕಪೂರ್ ಸ್ಟೈಲೀಶ್ ಆಗಿ ಕಾಣಿಸಿಕೊಂಡಿದ್ದಾರೆ. ಜಾನ್ವಿ ಕಪೂರ್, ಆಲಿಯಾ ಭಟ್, ಸಿದ್ಧಾರ್ಥ್ ಮಲ್ಹೋತ್ರಾ ಮತ್ತು ಕಿಯಾರಾ ಜೋಡಿ ಸೇರಿದಂತೆ ಹಲವರು ಭಾಗಿಯಾಗಿದ್ದಾರೆ.

ಇನ್ನೂ ಶಾರುಖ್ ಪುತ್ರಿ ಸುಹಾನಾ ಖಾನ್ ಸ್ಟೈಲೀಶ್ ಆಗಿ ಕಾಣಿಸಿಕೊಂಡಿದ್ದಾರೆ. ಸುಹಾನಾ ಜೊತೆ ಶನಾಯಾ ಕಪೂರ್, ಅನನ್ಯಾ ಪಾಂಡೆ ಕೂಡ ಮಸ್ತ್ ಆಗಿ ಫೋಟೋಗೆ ಪೋಸ್ ನೀಡಿದ್ದಾರೆ. ಅಂದಹಾಗೆ, ಅನಂತ್ ಮತ್ತು ರಾಧಿಕಾ ಮದುವೆ ಜುಲೈ 12ರಂದು ನಡೆಯಲಿದೆ. ಜುಲೈ 12ರಿಂದ ಜುಲೈ 14ರವರೆಗೆ ಮದುವೆ ಕಾರ್ಯಕ್ರಮಗಳು ಜರುಗಲಿದೆ.

ನಗರದ ಬಾಂದ್ರಾ-ಕುರ್ಲಾ ಕಾಂಪ್ಲೆಕ್ಸ್‌ನಲ್ಲಿರುವ ಜಿಯೋ ವರ್ಲ್ಡ್ ಕನ್ವೆನ್ಷನ್ ಸೆಂಟರ್‌ನಲ್ಲಿ ಹಿಂದೂ ವೈದಿಕ ಸಂಪ್ರದಾಯದಂತೆ ವಿವಾಹ ಸಮಾರಂಭ ನಡೆಯಲಿದೆ ಎಂದು ವರದಿಯಾಗಿದೆ.

ಒಟಿಟಿಯಲ್ಲಿ ರಿಲೀಸ್ ಆಗುತ್ತಿದೆ ಚೈತ್ರಾ ಆಚಾರ್ ಸಿನಿಮಾ

'ಟೋಬಿ', 'ಸಪ್ತಸಾಗರದಾಚೆ ಎಲ್ಲೋ' ಸಿನಿಮಾ ಮೂಲಕ ಮನಗೆದ್ದ ನಟಿ ಚೈತ್ರಾ ಆಚಾರ್ ನಟನೆಯ ಹೊಸ ಸಿನಿಮಾವೊಂದು ನೇರವಾಗಿ ಒಟಿಟಿ ಪ್ಲಾಟ್ಫಾರಂನಲ್ಲಿ ರಿಲೀಸ್ ಆಗುತ್ತಿದೆ. ಡಿಫರೆಂಟ್ ಅವತಾರದಲ್ಲಿ ಬೋಲ್ಡ್ ಬೆಡಗಿ ಚೈತ್ರಾ ಕಾಣಿಸಿಕೊಳ್ತಿದ್ದಾರೆ. ಒಟಿಟಿಯಲ್ಲಿ ಡೇಟ್ ಕೂಡ ಫಿಕ್ಸ್ ಆಗಿದೆ. 'ಹ್ಯಾಪಿ ಬರ್ತ್‌ಡೇ ಟು ಮಿ' ಎಂಬ ಚಿತ್ರದಲ್ಲಿ ಪ್ರಮುಖ ಪಾತ್ರದಲ್ಲಿ ಟೋಬಿ ನಟಿ ಕಾಣಿಸಿಕೊಂಡಿದ್ದಾರೆ. ಈ ಚಿತ್ರದಲ್ಲಿ ಸ್ಕೂಲ್ ಹುಡುಗಿಯಂತೆ ಕಾಣಿಸಿಕೊಂಡಿದ್ದಾರೆ. ಚೈತ್ರಾ ಪಾತ್ರದ ಸುತ್ತ ಹಲವು ಪಾತ್ರಗಳಿವೆ. ಅದು ಪೋಸ್ಟರ್‌ನಲ್ಲಿ ಹೈಲೆಟ್ ಆಗಿದೆ. ಇದೇ ಜೂನ್ 28ರಂದು ಒಟಿಟಿಯಲ್ಲಿ ಸಿನಿಮಾ ಬಿಡುಗಡೆಯಾಗಲಿದೆ.

ಅಂದಹಾಗೆ, ಈ ಸಿನಿಮಾದಲ್ಲಿ ಸಿದ್ದು ಮೂಲಿಮನಿ, ಅರ್ಚನಾ ಕೊಟ್ಟಿಗೆ, ರಚನಾ ರೈ, ಗೋಪಾಲ ದೇಶಪಾಂಡೆ ಸೇರಿದಂತೆ ಹಲವರು ನಟಿಸಿದ್ದಾರೆ.

ಇನ್ನೂ ಕನ್ನಡದ ಸಿನಿಮಾ ಜೊತೆಗೆ ತಮಿಳಿನಲ್ಲಿ ಹೊಸ ಸಿನಿಮಾ ಒಪ್ಪಿಕೊಂಡಿದ್ದಾರೆ. ನಿರ್ಮಾಣ ಸಂಸ್ಥೆಯ ಅಧಿಕೃತ ಘೋಷಣೆಗೆ ನಟಿ ಕಾಯ್ತಿದ್ದಾರೆ.

ರೋಡ್ ಸೈಡ್‌ನಲ್ಲಿ ಸ್ನೇಹಿತರ ಜೊತೆ ಚಾಟ್ಸ್ ಸವಿದ ಧ್ರುವ ಸರ್ಜಾ

ಆಕ್ಷನ್ ಪ್ರಿನ್ಸ್ ಧ್ರುವ ಸರ್ಜಾ ತೀರ ಸಿಂಪಲ್ ವ್ಯಕ್ತಿ. ಸ್ಟಾರ್ ಆಗಿದ್ರೂ ಅಹಂಕಾರ ತೋರಿಸದೇ ಪ್ರತಿಯೊಬ್ಬರ ಜೊತೆ ಧ್ರುವ ಬೆರೆಯುತ್ತಾರೆ. ಎಂದಿಗೂ ಅವರು ಸ್ಟಾರ್ ಡಮ್ ತಲೆಗೆ ಏರಿಸಿಕೊಂಡಿಲ್ಲ ಎಂಬುದು ಮತ್ತೊಮ್ಮೆ ಸಾಬೀತಾಗಿದೆ. ಇದೀಗ ಸಾಮಾನ್ಯರಂತೆ ರೋಡ್ ಸೈಡ್‌ನಲ್ಲಿ ಸ್ನೇಹಿತರ ಜೊತೆ ನಿಂತು ಧ್ರುವ ತಿಂಡಿ ತಿಂದಿದ್ದಾರೆ. ಧ್ರುವ ಸರ್ಜಾ ಮೈಸೂರಿಗೆ ಭೇಟಿ ನೀಡಿದ್ದಾರೆ. ಈ ವೇಳೆ, ರೋಡ್ ಸೈಡ್ ಗಾಡಿ ಅಂಗಡಿ